ಸಂಪುಟ: 04 ಸಂಚಿಕೆ: 242 ಪುಟಗಳು: 08 ಶುಕ್ರವಾರ 15 ನವೆಂಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

ಮುಂಜಾನೆ ಮಾತು
ಅದೃಷ್ಟ ಎಂದರೆ ಅವಕಾಶವನ್ನು ಪಡೆಯುವವನು, ಬುದ್ಧಿವಂತ ಎಂದರೆ ಅವಕಾಶವನ್ನು ಸೃಷ್ಟಿಸಿಕೊಳ್ಳುವವನು.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಜಮೀರ್ ವಿರುದ್ಧ ಅವಹೇಳನಕಾರಿ ಹೇಳಿಕೆ: ಪುನೀತ್ ಕೆರೆಹಳ್ಳಿ ಅರೆಸ್ಟ್!

• ಉದಯವಾಹಿನಿ, ಬೆಂಗಳೂರು

ವಸತಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹ್ಮದ್ ಖಾನ್ ವಿರುದ್ಧ ಅವಹೇಳನಕಾರಿ ಪದ ಬಳಕೆ ಹಾಗೂ ಧರ್ಮ, ಜಾತಿ ನಿಂದನೆ ಮಾಡಿದ್ದ ಆರೋಪದಡಿ ರಾಷ್ಟ್ರ ರಕ್ಷಣಾ ಪಡೆ ಮುಖಂಡ ಪುನೀತ್ ಕೆರೆಹಳ್ಳಿ ಅವರನ್ನು ಚಾಮರಾಜಪೇಟೆ ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಹೌದು ಸಚಿವರ ಆಪ್ತ ಸಹಾಯಕ ಬಿ. ಎಸ್. ಅಶೋಕ್ ನೀಡಿದ ದೂರು ಆಧರಿಸಿ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ವಿಚಾರಣೆಗಾಗಿ ವಶಕ್ಕೆ ಪಡೆಯಲಾಗಿದೆ. ಅಗತ್ಯ ಬಿದ್ದರೆ ಬಂಧಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ. ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಪ್ರಚಾರದ ವೇಳೆ ಜಮೀರ್ ಅವರು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರನ್ನು 'ಕರಿಯ' ಎಂದು ನಿಂದಿಸಿದ್ದರು. ಇದಕ್ಕೆ ಪ್ರತಿಯಾಗಿ ಪುನೀತ್ ಕೆರೆಹಳ್ಳಿ ಅವರು ನ.11ರಂದು ಫೇಸ್‌ಬುಕ್‌ನಲ್ಲಿ ಸಚಿವರನ್ನು ನಿಂದಿಸಿದ್ದರು ಎನ್ನಲಾಗಿದೆ. ನವೆಂಬರ್ 11 ರಂದು ಪುನೀತ್ ಕೆರೆ ಹಳ್ಳಿ ಅವರು ಯಾವುದೋ ಸ್ಥಳದಲ್ಲಿ ತಮ್ಮ ಸಾಮಾಜಿಕ ಜಾಲ ತಾಣದ ಫೇಸ್ ಬುಕ್ ಲಿಂಕ್‌ನಲ್ಲಿ ಸಚಿವರಾದ ಜಮೀರ್ ಅಹಮದ್ ಖಾನ್ ಅವರ ಕುರಿತು ಧರ್ಮ ಮತ್ತು ಜಾತಿಯ ಹೆಸರಿನಲ್ಲಿ ನಿಂದನೆ ಮಾಡಿರುತ್ತಾರೆ. ಧರ್ಮ -ಧರ್ಮಗಳ ನಡುವೆ ದ್ವೇಷ ಬಿತ್ತುವ ಪ್ರಚೋದನಕಾರಿ ಹೇಳಿಕೆ ನೀಡಿರುತ್ತಾರೆ ಎಂದು ದೂರಿನಲ್ಲಿ ಉಲ್ಲೇಖವಾಗಿದೆ.

ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಾಗ್ದಾಳಿ

• ಉದಯವಾಹಿನಿ,ಬೆಳಗಾವಿ

ಡಾ. ಬಿ ಆರ್ ಅಂಬೇಡ್ಕರ್ ಅವರು ಇಸ್ಲಾಂ ಧರ್ಮವನ್ನು ಸ್ವೀಕಾರ ಮಾಡಲು ಸಿದ್ಧತೆ ಮಾಡಿಕೊಂಡಿದ್ದರು ಎಂದು ಕಾಂಗ್ರೇಸ್ ಮಾಜಿ ಶಾಸಕ ಅಜ್ಜಂಪಿರ್ ಖಾದ್ರಿ ಹೇಳಿಕೆಗೆ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕಿಡಿ ಕಾರಿದ್ದು ಅಜ್ಜಂಪೀರ್ ಖಾದ್ರಿ ಒಬ್ಬ ನಾಲಾಯಕ್ ಎಂದು ವಾಗ್ದಾಳಿ ನಡೆಸಿದ್ದಾರೆ.

ಬೆಳಗಾವಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಡಾ. ಅಂಬೇಡ್ಕರ್ ಬಗ್ಗೆ ಅಜ್ಜಂಪೀರ್ ಖಾದ್ರಿ ಸರಿಯಾಗಿ ಅಧ್ಯಯನ ಮಾಡಿಲ್ಲ. ಆತನೊಬ್ಬ ನಾಲಾಯಕ್. ಅಂಬೇಡ್ಕರ್ ಅವರಿಗೆ ಹೈದರಾಬಾದ್ ನಿಜಾಮ ಆಸೆ ಹುಟ್ಟಿಸಿದ್ದ. ನೀವು ಇಸ್ಲಾಂ ಧರ್ಮಕ್ಕೆ ಸೇರಿದರೆ ಅರ್ಧ ಆಸ್ತಿ ಕೊಡುತ್ತೇನೆ ಅಂತ ಹೇಳಿದ್ದ. ನನ್ನ ಕುಟುಂಬದ ಉದ್ಧಾರಕ್ಕಾಗಿ ಇಂತಹ ಹೇಸಿಗೆ ಕೆಲಸ ಮಾಡಲ್ಲ. ನಾನು ಇಸ್ಲಾಂ ಧರ್ಮಕ್ಕೆ ಸೇರಿದರು ಮತ್ತೆ ನನ್ನನ್ನು ದಲಿತರ ಹಾಗೆ ಕಾಣುತ್ತಾರೆ. ಅದಕ್ಕೆ ಇಸ್ಲಾಂ ಧರ್ಮಕ್ಕೆ ಸೇರಲ್ಲ ಅಂತ ಅಂಬೇಡ್ಕರ್ ಅವರು ಹೇಳಿದರು. ಅಂಬೇಡ್ಕರ್ ಅವರು ಬೌದ್ಧ ಧರ್ಮ ಸ್ವೀಕರಿಸಿದರು. ಭಾರತದಲ್ಲಿ ಬಂದು ಇಸ್ಲಾಂ ಸೇರಿದರೆ ದೇಶ ರಾಷ್ಟ್ರಾಂತರ ಆಗುತ್ತದೆ. ಇಂದು ಮುಸ್ಲಿಂ ಜಗಳ ಆಗುತ್ತೆ ಅದಕ್ಕೆ ಅವಕಾಶ ಕೊಡುವುದಿಲ್ಲ ಎಂದರು.

ಇಡಿ ವಿಚಾರಣೆಗೆ ಹಾಜರಾಗುವಂತೆ ಸಿಎಂಗೆ ನೋಟಿಸ್ ಜಾರಿ ಸಾಧ್ಯತೆ!

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಸಿಎಂ ಸಿದ್ದರಾಮಯ್ಯ ಅವರಿಗೆ ಇದೀಗ ಜಾರಿ ನಿರ್ದೇಶನಾಲಯದ ಟೆನ್ಶನ್ ಶುರುವಾಗಿದೆ. ಈಗಾಗಲೇ ಸಿದ್ದರಾಮಯ್ಯ ಅವರ ಆಪ್ತ ಕುಮಾರ್ ನಾಯಕ್ ಅವರನ್ನು ಇಡಿ ಅಧಿಕಾರಿಗಳು ವಿಚಾರಣೆಗೆ ಒಳಪಡಿಸಿದ್ದಾರೆ. ಹಾಗಾಗಿ ಸಹಜವಾಗಿ ಸಿಎಂ ಸಿದರಾಮಯ್ಯ ಅವರಿಗೆ ಇದೀಗ ಇಡಿ ಅಧಿಕಾರಿಗಳ ಟೆನ್ಶನ್ ಹೆಚ್ಚಾಗಿದೆ.ಹಾಗಾಗಿ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸಿಎಂ ಸಿದ್ದರಾಮಯ್ಯ, ಪತ್ನಿ ಪಾರ್ವತಿ ಹಾಗೂ ಮಲ್ಲಿಕಾರ್ಜುನ ಸ್ವಾಮಿಗೆ ವಿಚಾರಣೆಗೆ ಹಾಜರಾಗುವಂತೆ ಶೀಘ್ರದಲ್ಲಿ ಇಡಿ ಅಧಿಕಾರಿಗಳು ನೋಟಿಸ್ ನೀಡುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ. ಇನ್ನು ಮುಂದಿನ ನಾಲ್ಕು ದಿನಗಳಲ್ಲಿ ರಾಜ್ಯ ರಾಜಕಾರಣದಲ್ಲಿ ಮಹತ್ವದ ಬೆಳವಣಿಗೆ ನಡೆಯುವ ಸಾಧ್ಯತೆ ಇದೆ.ಈಗಾಗಲೇ ಸಿಎಂ ಸಿದ್ದರಾಮಯ್ಯ ಅವರು ಮೈಸೂರಿನಲ್ಲಿರುವ ಲೋಕಾಯುಕ್ತ ಕಚೇರಿಗೆ ತರಲಿ ಲೋಕಾಯುಕ್ತ ಅಧಿಕಾರಿಗಳ ವಿಚಾರಣೆಯನ್ನು ಕೂಡ ಎದುರಿಸಿದ್ದಾರೆ ಹಾಗಾಗಿ ಸಹಜವಾಗಿ ಸಿಎಂ ಸಿದ್ದರಾಮಯ್ಯ ಅವರಿಗೆ ನೀಡಿ ಅಧಿಕಾರಿಗಳ ಭಯ ಶುರುವಾಗಿದೆ ಎನ್ನಲಾಗುತ್ತಿದೆ.

ಮಾಜಿ ಅಧ್ಯಕ್ಷ ಮರೀಗೌಡ ಇಡಿ ವಿಚಾರಣೆಗೆ ಹಾಜರು!

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಇಡಿ ಅಧಿಕಾರಿಗಳು ತನಿಖೆಯನ್ನು ಚುರುಕುಗೋಳಿಸಿದ್ದು, ಇದೀಗ ಮಾಜಿ ಅಧ್ಯಕ್ಷ ಮರಿಗೌಡ ಜಾರಿ ನಿರ್ದೇಶನಾಲಯದ ಇಡಿ ವಿಚಾರಣೆಗೆ ಹಾಜರಾಗಿದ್ದಾರೆ. ಹೌದು ಮುಡಾ ಹಗರಣದ ತನಿಖೆ ಯಾವಾಗ ತೀವ್ರ ಸ್ವರೂಪ ಪಡೆದು ಕೊಂಡಿತೊ ಆಗ ಮರೀಗೌಡ ಮುಡಾದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.ಇದೀಗ ಇಡಿ ಅಧಿಕಾರಿಗಳು ವಿಚಾರಣೆಗೆ ಕರೆದಿದ್ದರಿಂದ ಬೆಂಗಳೂರಿನ ಶಾಂತಿನಗರದಲ್ಲಿರುವ ಇಡಿ ಕಚೇರಿಗೆ ಮರೀಗೌಡ ವಿಚಾರಣೆಗೆ ಹಾಜರಾಗಿದ್ದಾರೆ. ಇತ್ತೀಚಿಗಷ್ಟೇ ಮುಡಾ ಅಧ್ಯಕ್ಷ ಸ್ಥಾನಕ್ಕೆ ಮರಿಗೌಡ ರಾಜೀನಾಮೆ ನೀಡಿದ್ದರು.

ಕಾಂಗ್ರೇಸ್‌ನ 50 ಶಾಸಕರಿಗೆ ಬಿಜೆಪಿಯವರು 50 ಕೋಟಿ ರೂ. ಆಮಿಷ ಒಡ್ಡಿರುವುದು ನಿಜ" ಎಂದು ಹೇಳುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಮರ್ಥಿಸಿಕೊಂಡಿದ್ದಾರೆ. ವಿಧಾನಸೌಧ ಆವರಣದಲ್ಲಿ ಗುರುವಾರ ಮಾಧ್ಯಮ ಪ್ರತಿನಿಧಿಗಳ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿ, "ಆಪರೇಷನ್ ಕಮಲದ ಬಗ್ಗೆ ನಮ್ಮ ಶಾಸಕರ ಬಳಿ ಬಿಜೆಪಿಯವರು ಮಾತನಾಡಿದ್ದಾರೆ. ಈ ವಿಚಾರವನ್ನು ಕೆಲವರು ಬಂದು ಮುಖ್ಯಮಂತ್ರಿ ಬಳಿ ತಿಳಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಧ್ಯಮದ ಮುಂದೆ ಹೇಳಿದ್ದಾರೆ. ಇತರೆ ವಿಚಾರಗಳನ್ನು ನಂತರ ನಿಮಗೆ ತಿಳಿಸುತ್ತೇನೆ" ಎಂದು ಹೇಳಿದರು.

ಶಾಸಕರಿಗೆ 50 ಕೋಟಿ ಆಮಿಷ ಬಿಜೆಪಿ ಆಕ್ರೋಶ

ಸಿಎಂ ಆರೋಪಕ್ಕೆ ವಿಜಯೇಂದ್ರ ಬಿಗ್ ಟ್ವಿಸ್ಟ್!

• 'ಭ್ರಷ್ಟಾಚಾರದ ಹಗರಣಗಳನ್ನು ಮುಚ್ಚಿಕೊಳ್ಳಲು ಸುಳ್ಳಿನ ಕಂತೆ' ಬಿಜೆಪಿಯಿಂದ ಕಾಂಗ್ರೇಸ್ ಶಾಸಕರಿಗೆ 50 ಕೋಟಿ ರೂ. ಆಮಿಷ..!

• ಸಿಎಂ ಹೇಳಿಕೆ ಸಮರ್ಥಿಸಿಕೊಂಡ ಡಿ.ಕೆ.ಶಿವಕುಮಾರ್ ಶಾಸಕರಿಗೆ 50 ಕೋಟಿ ಆಫರ್ ಆರೋಪದ ಕುರಿತು ತನಿಖೆಯಾಗಲಿ : ಸಿ.ಟಿ.ರವಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಿನಲ್ಲಿ ಸಾರ್ವಜನಿಕ ಕಾರ್ಯಕ್ರಮದಲ್ಲಿ ಮಾತನಾಡುತ್ತಾ, ಕಳೆದ ಚುನಾವಣೆಯಲ್ಲಿ ಯಾರೂ ನಿರೀಕ್ಷಿಸದ ಮಟ್ಟದಲ್ಲಿ ಕಾಂಗ್ರೇಸ್ ಅಧಿಕಾರದ ಗದ್ದುಗೆ ಏರಿತ್ತು. ಇದನ್ನು ಸಹಿಸದ ಬಿಜೆಪಿಗರು,

ಸಿಎಂ ಸಿದ್ದರಾಮಯ್ಯ ಹೇಳಿದ್ದೇನು?

ಈ ಬಾರಿ ಹೇಗಾದರೂ ಸರಿ ಸಿದ್ದರಾಮಯ್ಯ ಸರ್ಕಾರ ಕಿತ್ತೊಗೆಯಲು 50 ಶಾಸಕರಿಗೆ 50 ಕೋಟಿ ರೂ. ಆಫರ್ ನೀಡಲು ಮುಂದಾಗಿತ್ತು. ಇದಕ್ಕೆ ನಮ್ಮ ಶಾಸಕರು ಒಪ್ಪಿರಲಿಲ್ಲ. ಹೀಗಾಗಿ ಬಿಜೆಪಿಯವರು ನನ್ನ ಮುಖಕ್ಕೆ ಮಸಿ ಬಳಿಯುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದರು. ಕಾಂಗ್ರೇಸ್ಸಿಗರು ಭ್ರಷ್ಟರು ಎಂದು ವಾದಿಸುವ ಬಿಜೆಪಿಗರು ತಾವು ಮಾತ್ರ ಶುದ್ಧಹಸ್ತರು ಎನ್ನುತ್ತಾರೆ. ಭ್ರಷ್ಟಾಚಾರ ಮಾಡಿಲ್ಲ ಎನ್ನುತ್ತಾರೆ, ಆದರೆ ಶಾಸಕರಿಗೆ ನೀಡಲು ಹಣ ಎಲ್ಲಿಂದ ಬಂತು? ಎಂದು ಪ್ರಶ್ನಿಸಿದ್ದರು. ಸಮಾಜದಲ್ಲಿ ಅಶಾಂತಿ ಸೃಷ್ಟಿ ಮಾಡುವುದೇ ಬಿಜೆಪಿ ನಾಯಕರ ಕೆಲಸ. ಬಿಜೆಪಿಯವರು ನಮ್ಮೊಂದಿಗೆ ಚರ್ಚೆಗೆ ಬರಲಿ, ನಮ್ಮ ತಪ್ಪು ಏನೆಂಬುದನ್ನು ತೋರಿಸಲಿ ಎಂದು ಸವಾಲು ಹಾಕಿದ್ದರು.

ರಾಜ್ಯ ಸರ್ಕಾರವನ್ನು ಅಸ್ಥಿರ ಮಾಡುವ ಪ್ರಯತ್ನ ನಡೆಯುತ್ತಿದೆ. 50 ಶಾಸಕರಿಗೆ ತಲಾ 50 ಕೋಟಿ ಆಫರ್ ನೀಡಲಾಗ್ತಿದೆ ಎಂಬ ಸಿಎಂ ಸಿದ್ದರಾಮಯ್ಯ ಆರೋಪ ಸತ್ಯ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಹೇಳಿದ್ದಾರೆ. ವಿಧಾನಸೌಧದಲ್ಲಿ ಗುರುವಾರ ಮಾತನಾಡಿ, ಆಪರೇಷನ್ ಕಮಲ ವಿಚಾರವಾಗಿ ಸಿದ್ದರಾಮಯ್ಯ ಮಾಡಿರುವ ಆರೋಪ ಸತ್ಯವೇ ಆಗಿದೆ. ನೇರವಾಗಿ ಹಾಗೂ ಪರೋಕ್ಷವಾಗಿ 18 ತಿಂಗಳಿನಿಂದ ಇಂತಹ ಪ್ರಯತ್ನ ಮಾಡುತ್ತಿದ್ದಾರೆ. ಬಿಜೆಪಿಗೆ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಎಲ್ಲಾವೂ ಸಾಧ್ಯ. ಸರ್ಕಾರ ಅಸ್ಥಿರ ಗೊಳಿಸುವುದೇ ಅವರ ಕೆಲಸ. ಇದರ ಬಗ್ಗೆ ಖಚಿತ ಮಾಹಿತಿ ಇದೆ ಎಂದು ಆರೋಪಿಸಿದರು. ಆಪರೇಷನ್ ಕಮಲದ ಮೂಲಕ ಸರ್ಕಾರವನ್ನು ಅಸ್ಥಿರ ಗೊಳಿಸುವ ಪ್ರಯತ್ನ ನಡೆಯುತ್ತಿರುವುದು ಸತ್ಯ. ಆದರೆ ಅದಕ್ಕೆ ಎಷ್ಟು ಹಣ ಆಮಿಷ ನೀಡಲಾಗಿದೆ ಎಂಬ ಬಗ್ಗೆ ಮಾಹಿತಿ ಇಲ್ಲ. ಹಿಂದೆಯೂ ಸರ್ಕಾರ ಅಸ್ತಿರಗೊಳಿಸುವ ಪ್ರಯತ್ನ ನಡೆದಿತ್ತು, ಸರ್ಕಾರ ಇರುವವರೆಗೂ ಪ್ರಯತ್ನ ನಡೆಯಲಿದೆ'' ಎಂದು ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ಆಪರೇಷನ್ ಕಮಲ ಪ್ರಯತ್ನ ಸತ್ಯ

• ಉದಯವಾಹಿನಿ, ಬೆಂಗಳೂರು

ಕಾಂಗ್ರೇಸ್ ಶಾಸಕರಿಗೆ ನಾವು 50 ಕೋಟಿ ರೂ. ಆಫರ್ ನೀಡಿರುವ ಬಗ್ಗೆ ದಾಖಲೆಗಳಿದ್ದರೆ ತಕ್ಷಣವೇ ಮುಖ್ಯಮಂತ್ರಿ ಸಿದ್ದರಾಮಯ್ಯ ನವರು ಸಂಬಂಧಪಟ್ಟ ತನಿಖಾ ಸಂಸ್ಥೆಗಳಿಗೆ ದೂರು ನೀಡಲಿ. ಇಲ್ಲದಿದ್ದರೆ ನಾನು ಹೇಳುವುದು ಸುಳ್ಳು ಎಂದು ಸಾರ್ವಜನಿಕವಾಗಿ ಕ್ಷಮೆ ಕೇಳಬೇಕೆಂದು ಮಾಜಿ ಸಚಿವ ಹಾಗೂ ಬಿಜೆಪಿ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಸವಾಲು ಹಾಕಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ, ಕಾಂಗ್ರೇಸ್ ಶಾಸಕರಿಗೆ 50 ಕೋಟಿ ರೂ. ಆಮಿಷವೊಡ್ಡಿದವರು ಯಾರು..? ಯಾವಾಗ ಆಫರ್ ನೀಡಲಾಯಿತು..? ಎಲ್ಲಿ ಮಾತುಕತೆ ನಡೆಸಲಾಗಿತ್ತು. ಜೊತೆಗಿದ್ದವರು ಯಾರು..? ಇವೆಲ್ಲವನ್ನು ಬಹಿರಂಗಪಡಿಸಬೇಕು ಎಂದು ಒತ್ತಾಯಿಸಿದರು. ಸಿದ್ದರಾಮಯ್ಯನವರು ಮಾಡಿರುವ ಆರೋಪಗಳು ಅತ್ಯಂತ ಗಂಭೀರವಾದುದು. ನಿಮ ಬಳಿಯೇ ತನಿಖಾ ಸಂಸ್ಥೆಗಳಿವೆ. ತಕ್ಷಣವೇ ತನಿಖೆ ನಡೆಸಲು ಯಾವುದಾದರೂ ಸಂಸ್ಥೆಗೆವಹಿಸಬೇಕು. ಇಲ್ಲದಿದ್ದರೆ ನ್ಯಾಯಾಲಯಕ್ಕಾದರೂ ದೂರು ನೀಡಿ ಎಂದು ಆಗ್ರಹಿಸಿದರು.ಸುಳ್ಳು ಆರೋಪಗಳನ್ನು ಮಾಡುವುದು ಸಿದ್ದರಾಮಯ್ಯನವರಿಗೆ ಇತ್ತೀಚೆಗೆ ಕರಗತವಾಗಿದೆ.

1 ಕರ್ನಾಟಕದಲ್ಲಿ ಆಪರೇಷನ್ ಕಮಲಕ್ಕೆ 'ಕೈ' ಹಾಕಿದ್ಯಾ 'ಬಿಜೆಪಿ'?

2 ಬಿಜೆಪಿಯಿಂದ ಕಾಂಗ್ರೇಸ್ ಶಾಸಕರಿಗೆ 50 ಕೋಟಿ ರೂ. ಆಮಿಷ

3 ಸಿಎಂ ಸಿದ್ದರಾಮಯ್ಯ ಹೇಳಿಕೆಗೆ ಡಿ.ಕೆ. ಶಿವಕುಮಾರ್ ಸಮರ್ಥನೆ

ಕುರ್ಚಿ ಅಲುಗಾಡುವಾಗಲೆಲ್ಲ ಆಪರೇಷನ್ ಕಮಲ 50 ಕೋಟಿ ರೂ. ಆಫರ್, ನನ್ನನ್ನು ಮುಟ್ಟಿದರೆ ಜೋಕೆ..!, ರಾಜ್ಯದ ಜನ ಸುಮನಿರುವುದಿಲ್ಲ ಇಂತಹ ಹಸಿಹುಸಿ ಸುಳ್ಳುಗಳನ್ನು ಹೇಳುವುದು ಅವರಿಗೆ ಶೋಭೆ ತರುವುದಿಲ್ಲ ಎಂದು ವಾಗ್ದಾಳಿ ನಡೆಸಿದರು.50 ಕೋಟಿ ರೂ.

ಆಫರ್ಗೆ ಶಾಸಕರು ಬಿಜೆಪಿಗೆ ಬರುತ್ತಾರೆಂದರೆ ಕಾಂಗ್ರೇಸ್ ಶಾಸಕರು ಅಷ್ಟೊಂದು ದುರ್ಬಲರಾಗಿದ್ದಾರಾ? ನಿಮ ಶಾಸಕರೇ ನಾಯಕತ್ವವನ್ನು ಒಪ್ಪುತ್ತಿಲ್ಲ. ಅದನ್ನು ಮರೆಮಾಚಲು ಸುಳ್ಳು ಹೇಳುತ್ತಿದ್ದೀರಿ. ಕುರ್ಚಿ ಉಳಿಸಿಕೊಳ್ಳಲು ಇಂತಹ ಆಧಾರ ರಹಿತ ಆರೋಪಗಳನ್ನು ಮಾಡುವುದು ಸಿದ್ದರಾಮಯ್ಯನವರಿಗೆ ಕರಗತವಾಗಿದೆ ಎಂದು ವಾಗ್ದಾಳಿ ನಡೆಸಿದರು. ಪಕ್ಷದ ಯಾವುದೇ ಮುಖಂಡರು ಕಾಂಗ್ರೇಸ್ ಶಾಸಕರ ಜೊತೆ ಮಾತನಾಡಿರುವ ಬಗ್ಗೆ ದಾಖಲೆಗಳಿದ್ದರೆ ತಕ್ಷಣವೇ ದೂರು ನೀಡಬೇಕು. ಕುರ್ಚಿ ಅಲುಗಾಡುತ್ತಿರುವ ಸಂದರ್ಭದಲ್ಲಿ ಪ್ರತಿಪಕ್ಷಗಳ ಮೇಲೆ ಆರೋಪ ಮಾಡುವುದು ಕಾಂಗ್ರೇಸ್ ಪ್ರವೃತ್ತಿಯಾಗಿದೆ ಎಂದು ಕಿಡಿಕಾರಿದರು. ನಾವು ನಿಮ ಸರ್ಕಾರದ ಜನ ವಿರೋಧಿ ನೀತಿಗಳನ್ನು ವಿರೋಧಿಸುತ್ತೇವೆ. ಭ್ರಷ್ಟಾಚಾರವನ್ನು ಹೊರಗೆಳೆದಿದ್ದೇವೆ.

ಮುಡಾ, ವಾಲ್ಮೀಕಿ ಸೇರಿದಂತೆ ಅನೇಕ ಹಗರಣಗಳನ್ನು ಜನತೆಯ ಗಮನಕ್ಕೆ ತಂದಿದ್ದೇವೆ. ಅದನ್ನು ಮರೆಮಾಚಲು ಸುಳ್ಳು ಆರೋಪಗಳನ್ನು ಸಿದ್ದರಾಮಯ್ಯ ಮಾಡಬಾರದು. ದಾಖಲೆಗಳಿದ್ದರೆ ತಕ್ಷಣವೇ ದೂರು ಕೊಡಿ ಎಂದು ಸಿ.ಟಿ.ರವಿ ಒತ್ತಾಯಿಸಿದರು.

ಸಿಎಂ ಮಾತು ಸತ್ಯ ಎಂದ ಕೆ.ಎನ್.ರಾಜಣ್ಣ

ಕಾಂಗ್ರೇಸ್ ಶಾಸಕರಿಗೆ ಬಿಜೆಪಿ 50 ಕೋಟಿ ರೂ. ಆಫರ್ ನೀಡಿದ್ದಾರೆಂಬ ಸಿಎಂ ಸಿದ್ದರಾಮಯ್ಯ ಹೇಳಿಕೆ ವಿಚಾರ ಸತ್ಯ ಎಂದು ಸಹಕಾರಿ ಸಚಿವ ಕೆ.ನ್.ರಾಜಣ್ಣ ಹೇಳಿದ್ದಾರೆ. ಸಿಎಂ ಸತ್ಯವಾದ ಅಂಶವನ್ನೇ ಹೇಳಿದ್ದಾರೆ. ವಾಮ ಮಾರ್ಗದ ಮೂಲಕ ಸರ್ಕಾರ ಕೆಡವುವ ಕೆಲಸ ಮಾಡುತ್ತಾರೆ. 136 ಶಾಸಕರಿರುವ ಸರ್ಕಾರವನ್ನು ಬೀಳಿಸುವ ನಡೆ ಸಂವಿಧಾನಕ್ಕೆ ಮಾಡುವ ಅಪಮಾನ ಎಂದು ಕಿಡಿಕಾರಿದ್ದಾರೆ.

ನೀರಿನ ಬಿಲ್ ಜೊತೆಗೆ ಹಸಿರು ಸೆಸ್ ಫಿಕ್ಸ್

• ಉದಯವಾಹಿನಿ, ಬೆಂಗಳೂರು

ಜೀವವೈವಿಧ್ಯತೆಯ ತಾಣ ಪಶ್ಚಿಮಘಟ್ಟ ಹಲವು ನದಿಗಳ ಮೂಲವಾಗಿದ್ದು, ಈ ನದಿಗಳ ನೀರು ಪೂರೈಕೆಯಾಗುವ ನಗರಗಳಿಗೆ ಹಸಿರು ಸೆಸ್ ವಿಧಿಸುವ ಬಗ್ಗೆ ಪ್ರಸ್ತಾವನೆ ಸಲ್ಲಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಸೂಚಿಸಿದ್ದಾರೆ.

ಪಶ್ಚಿಮಘಟ್ಟಗಳು ತುಂಗಾ, ಭದ್ರಾ, ಕಾವೇರಿ, ಕಬಿನಿ, ಹೇಮಾವತಿ, ಕೃಷ್ಣಾ, ಮಲಪ್ರಭಾ, ಘಟಪ್ರಭಾ ಸೇರಿದಂತೆ ಹಲವು ನದಿಗಳ ಮೂಲವೂ ಆಗಿದೆ.ರಾಜ್ಯದ ಹಲವು ನಗರ, ಪಟ್ಟಣ ಪ್ರದೇಶಗಳಿಗೆ ಈ ನದಿಗಳ ನೀರನ್ನೇ ಪೂರೈಕೆ ಮಾಡಲಾಗುತ್ತಿದೆ. ಮುಂದೆಯೂ ರಾಜ್ಯದ ನೀರಿನ ಅಗತ್ಯವನ್ನು ಈ ನದಿಗಳೇ ಪೂರೈಸಬೇಕಾಗುತ್ತದೆ. ಹೀಗಾಗಿ ಈ ಎಲ್ಲಾ ನದಿಗಳ ಮೂಲವಾಗಿರುವ ಪಶ್ಚಿಮಘಟ್ಟವನ್ನು ಸಂರಕ್ಷಿಸಿದರೆ ಮಾತ್ರ ಮುಂದಿನ ದಿನಗಳಲ್ಲಿ ನದಿಗಳು ತುಂಬಿ ಹರಿಯಲು ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ. ಮಂಗಾರು ಮಳೆಯ ಮಾರುತಗಳನ್ನು ತಡೆದು ದೇಶದಾದ್ಯಂತ ವ್ಯಾಪಕ ಮಳೆ ಆಗುವಂತೆ ಮಾಡುವಲ್ಲಿ ಪಶ್ಚಿಮಘಟ್ಟಗಳು ಮಹತ್ವದ ಪಾತ್ರ ವಹಿಸುತ್ತವೆ. ಈ ನಿಟ್ಟಿನಲ್ಲಿ ಪಶ್ಚಿಮಘಟ್ಟದ ನದಿಗಳಿಂದ ನಗರ, ಪಟ್ಟಣಗಳಿಗೆ ಪೂರೈಕೆ ಆಗುವ ನೀರಿನ ಬಳಕೆಯ ಬಿಲ್ ನಲ್ಲಿ ಕೆಲವೇ ಕೆಲವು ರೂಪಾಯಿ ಹಸಿರು ಸೆಸ್ ವಿಧಿಸಿ, ಕಾಪು ನಿಧಿ ಸ್ಥಾಪಿಸಿದರೆ, ಈ ಹಣವನ್ನು ಪಶ್ಚಿಮಘಟ್ಟ ಅರಣ್ಯ ಅಭಿವೃದ್ಧಿಗಾಗಿ, ವೃಕ್ಷ ಸಂವರ್ಧನೆಗಾಗಿ, ಅರಣ್ಯದಂಚಿನ ರೈತರು ಸ್ವಯಂ ಪ್ರೇರಿತವಾಗಿ ಅರಣ್ಯ ಇಲಾಖೆಗೆ ಮಾರಾಟ ಮಾಡಲು ಇಚ್ಛಿಸುವ ಕೃಷಿ ಭೂಮಿ ಖರೀದಿಸಲು ಬಳಸಬಹುದು ಎಂದು ಅಭಿಪ್ರಾಯಪಟ್ಟಿದ್ದಾರೆ. ಹಾಗಾ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಭಾರತೀಯ ವೈವಾಹಿಕ ಸಂಬಂಧ

ಭಾಜ್ಞಾನ ಅರಿವು ತಿಳಿವಳಿಕೆ. ಅದರಲ್ಲಿ ನಿರತರು ಭಾರತೀಯರು. ವೇದ ಶಾಸ್ತ್ರ ಪುರಾಣ ಕಾವ್ಯಗಳಲ್ಲಡಗಿದೆ ಭಾರತೀಯ ಸಂಸ್ಕೃತಿ. ಹದಿನಾರು ವೈದಿಕ ಸಂಸ್ಕಾರಗಳಲ್ಲಿ ವಿವಾಹ ಅತಿ ಮುಖ್ಯ ಅತಿ ಶುಭ. ವಿವಾಹ ಸ್ವರ್ಗದಲ್ಲಿ ನಡೆಯತ್ತೆ, ಅದು ದೈವ ನಿರ್ಧಾರ, ಬದಲಿಸಲಾಗದ ಪವಿತ್ರ ಸಂಬಂಧ ಎನ್ನುವರು ಹಿಂದುಗಳು. ಈ ಬಂಧನ ಜನುಮ ಜನುಮದ ಅನುಬಂಧನ. ಹಸೆ ಮಣೆ ಏರಿದ ವಧು ವರರು ಪಾರ್ವತಿ ಪರಮೇಶ್ವರರು, ಬ್ರಹ್ಮ ಸರಸ್ವತಿಯರು, ವಿಷ್ಣು ಲಕ್ಷ್ಮಿಯರು ಎಂಬ ಶ್ರೇಷ್ಠ ಭಾವ. ಮದುವೆ ದೇಹ ಸಂಬಂಧಕ್ಕೆ ಮಾತ್ರವಲ್ಲ, ಧರ್ಮ ಅರ್ಥ ಕಾಮ ಮೋಕ್ಷ ಪುರುಷಾರ್ಥಗಳನ್ನು ಸತಿ ಪತಿಯರು ಒಂದಾಗಿ ಸಾಧಿಸಲು. ಧರ್ಮೇ ಚಾರ್ಥೇ ಚ ಕಾಮೇ ಚ ಮೋಕ್ಷೇ ಚ ನಾತಿಚರಾಮಿ. ಪುರುಷ ಅರ್ಧಕ್ಕೆ ಸಮ, ನಾರಿ ಅರ್ಧಕ್ಕೆ ಸಮ. ಇಬ್ಬರೂ ಒಳಗೊಂಡರೆ ಮಾತ್ರ ಪೂರ್ಣತೆ. ಪರಸ್ಪರರು ದೇಹದಿಂದಲೂ ಜೀವದಿಂದಲೂ ಸುಖ ದುಃಖಗಳಲ್ಲಿ ಜೀವಮಾನ ಪರ್ಯಂತ ಒಂದಾಗಿ ಬಾಳುವುದು ದಾಂಪತ್ಯ. ಧರ್ಮ ಬೆರೆತ ಭೋಗದ ಜೊತೆಗೆ ಆಧ್ಯಾತ್ಮಿಕತೆಯೇ ದಾಂಪತ್ಯದ ಧ್ಯೇಯ. ಭಾರತೀಯರ ಈ ಆದರ್ಶ ದಾಂಪತ್ಯಕ್ಕೆ ಮನಸೋತು ಅನೇಕ ವಿದೇಶಿಗರು ಮದುವೆಯಾದರೂ ಮತ್ತೆ ಭಾರತೀಯ ಪದ್ಧತಿಯಲ್ಲಿ ಮರುಮದುವೆಯಾದುದುಂಟು. ಆದರಿಂದು ಭೌತಿಕ ಭೋಗಜೀವನವೇ ಪ್ರಧಾನವಾಗಿ ದೈವಭಕ್ತಿ ಆಧ್ಯಾತ್ಮಿಕಾಸಕ್ತಿ ಕ್ಷೀಣಗೊಂಡ ಪರಿಣಾಮ ದಾಂಪತ್ಯ ಬಿಗು ಸಂಬಂಧ ಶಿಥಿಲವಾಗುತ್ತಿದೆ. ಇದರ ಪರಿಣಾಮ ಇಂದು ಪತ್ನಿ ಪ್ರಿಯಕರನ ಜೊತೆ ಸೇರಿ ಪತಿಹತ್ಯೆಗಯ್ಯುವ ಪತಿ ಪ್ರಿಯತಮೆಗಾಗಿ ಪತ್ನಿಯ ಹತ್ಯೆಗೈಯ್ಯುವ ಕರಾಳತೆ ಕಾಣುತ್ತೇವೆ.

ಹೈಕೋರ್ಟ್ ಆದೇಶ ಪ್ರಶ್ನಿಸಿ ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಿದ ಸಿಎಂ

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್‌ರಿ ಆದೇಶ ಪ್ರಶ್ನಿಸಿ ಸಿದ್ದ ರಾಮಯ್ಯ ಹೈಕೋರ್ಟ್ ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಿದ್ದಾರೆ. ತುರ್ತು ಅವಶ್ಯಕತೆ ಸೃಷ್ಟಿಯಾಗಿದೆ ನವೆಂಬರ್ 23ಕ್ಕೆ ವಿಚಾರಣೆ ನಡೆಸಬೇಕೆಂದು ಮುಖ್ಯಮಂತ್ರಿ ಪರ ವಕೀಲ ಅಭಿಷೇಕ್ ಸಿಂಘ್ವಿ ಮನವಿ ಮಾಡಿದ್ದಾರೆ. ಮನವಿ ಆಲಿಸಿ ವಿಚಾರಣೆಯನ್ನು ನ. 23ಕ್ಕೆ ಹೈಕೋರ್ಟ್ ವಿಭಾಗೀಯಪೀಠ ನಿಗದಿಪಡಿಸಿದೆ. ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಭ್ರಷ್ಟಾಚಾರ ತಡೆ ಕಾಯ್ದೆ 17ಂ ಅಡಿಯಲ್ಲಿ ರಾಜ್ಯಪಾಲರು ಅನುಮತಿ ನೀಡಿದ್ದರು. ತನಿಖೆಗೆ ರಾಜ್ಯಪಾಲರ ಅನುಮತಿಯನ್ನು ಪ್ರಶ್ನಿಸಿ ಸಿಎಂ ಸಿದ್ದರಾಮಯ್ಯ ಹೈಕೋರ್ಟಿಗೆ ರಿಟ್ ಅರ್ಜಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ಹೈಕೋರ್ಟ್ ಏಕ ಸದಸ್ಯ ಪೀಠವು ಸಿದ್ದರಾಮಯ್ಯ ಅವರು ಸಲ್ಲಿಸಿದ್ದ ರಿಟ್ ಅರ್ಜಿಯನ್ನು ವಜಾಗೊಳಿಸಿತ್ತು. ಇದೀಗ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಸಿಎಂ ಅವರು ಹೈಕೋರ್ಟ್ ಏಕ ಸದಸ್ಯ ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಿದ್ದಾರೆ. ಈ ವೇಳೆ ತುರ್ತು ವಿಚಾರಣೆ ಅಗತ್ಯವಿದೆ ಎಂದು ಸಿಜೆ ಪ್ರಶ್ನಿಸಿದ್ದಾರೆ ಇದಕ್ಕೆ ಸಿಎಂ ಸಿದ್ದರಾಮಯ್ಯ ಪರ ವಕೀಲರು ಹೌದು ತುರ್ತು ವಿಚಾರಣೆ ಅಗತ್ಯವಿದೆ ಎಂದಾಗ ಇದೇ ನವೆಂಬರ್ 23ಕ್ಕೆ ಮೇಲ್ಮನವಿ ಅರ್ಜಿ ವಿಚಾರಣೆಗೆ ದಿನಾಂಕ ನಿಗದಿಪಡಿಸಲಾಗಿದೆ.

ಶಾಸಕರಿಗೆ 50 ಕೋಟಿ ಆಫರ್: ಸಿಎಂ ಹೇಳಿಕೆಯನ್ನು ಸಮರ್ಥಿಸಿಕೊಂಡ ಡಿಸಿಎಂ

• ಉದಯವಾಹಿನಿ, ಬೆಂಗಳೂರು

ನಿನ್ನೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರು ಜಿಲ್ಲೆಯ ಟಿ ನರಸೀಪುರ ತಾಲ್ಲೂಕಿನಲ್ಲಿ, ಕಾರ್ಯಕ್ರಮ ಒಂದರಲ್ಲಿ ಮಾತನಾಡಿ ಕಾಂಗ್ರೇಸ್‌ನ 50 ಶಾಸಕರಿಗೆ ತಲಾ ಒಂದೊಂದು ಕೋಟಿಯಂತೆ 50 ಕೋಟಿ ಆಫರ್ ನೀಡಿದೆ ಎಂದು ಹೇಳಿಕೆ ನೀಡಿದ್ದರು. ಇದಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ಹೌದು ಸರ್ಕಾರ ಕೆಡುವಲು ಪ್ರಯತ್ನಿಸುತ್ತಿದ್ದಾರೆ ಎಂದು ಸಿಎಂ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದಾರೆ. ಬೆಂಗಳೂರಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹೌದು ಸರ್ಕಾರ ಕೆಡುವಲು ಪ್ರಯತ್ನ ಮಾಡುತ್ತಿದ್ದಾರೆ. ಕುರಿತು ಎಲ್ಲಾ ಶಾಸಕರ ಜೊತೆಗೆ ಸಿಎಂ ಮಾತನಾಡಿದ್ದಾರೆ. ಶಾಸಕರು ಬಂದು ನಮಗೆ ಈ ಕುರಿತು ತಿಳಿಸಿದ್ದಾರೆ.

ಮತ್ತೆ ಪ್ರತಿಭಟನೆ ಎಚ್ಚರಿಕೆ ನೀಡಿದ 108 ಆಂಬುಲೆನ್ಸ್‌ಸಿಬ್ಬಂದಿ

• ಉದಯವಾಹಿನಿ, ಬೆಂಗಳೂರು

ವೇತನ ಬಾಕಿ ಉಳಿಸಿಕೊಂಡ ಹಿನ್ನೆಲೆಯಲ್ಲಿ ಇದೀಗ 108 ಆಂಬುಲೆನ್ಸ್ ಸಿಬ್ಬಂದಿಗಳು ಮತ್ತೆ ಆರೋಗ್ಯ ಇಲಾಖೆ ವಿರುದ್ಧ ಹೋರಾಟಕ್ಕೆ ಮುಂದಾಗಿದ್ದು ಶೀಘ್ರದಲ್ಲಿ ಬಾಕಿ ವೇತನ ಪಾವತಿಸದೆ ಇದ್ದಲ್ಲಿ ಆಂಬುಲೆನ್ಸ್ ಸೇವೆ ಬಂದ್ ಮಾಡಿ ಉಗ್ರ ಹೋರಾಟ ಮಾಡಲಾಗುತ್ತದೆ ಎಂದು ಆರೋಗ್ಯ ಇಲಾಖೆಗೆ ಎಚ್ಚರಿಕೆ ನೀಡಿದ್ದಾರೆ. ಹೌದು ಸಂಬಳ ನೀಡದ ಹಿನ್ನೆಲೆ 108 ಆಂಬುಲೆನ್ಸ್ ಸಿಬ್ಬಂದಿ ಮತ್ತೆ ಹೋರಾಟಕ್ಕೆ ಮುಂದಾಗಿದ್ದಾರೆ. ಶನಿವಾರದೊಳಗೆ ವೇತನ ನೀಡದಿದ್ದರೆ ಪ್ರತಿಭಟನೆ ಎಚ್ಚರಿಕೆ ಸಹ ಸಿಬ್ಬಂದಿಗಳು ನೀಡಿದ್ದಾರೆ. ವೇತನ ನೀಡದಿದ್ದರೆ ಸೇವೆಗೆ ಹಾಜರಾಗದಿರಲು ನೌಕರರು ನಿರ್ಧಾರ ಕೈಗೊಂಡಿದ್ದಾರೆ. ಬಾಕಿ ವೇತನ ಪಾವತಿಸುವಂತೆ ನಾಳೆ ಸರ್ಕಾರಕ್ಕೆ 108 ಆಂಬುಲೆನ್ಸ್ ನೌಕರರು ಮನವಿ ಸಲ್ಲಿಸಲಿದ್ದಾರೆ. ಕಳೆದ ವರ್ಷ ಜುಲೈ ನಲ್ಲಿ ಕೂಡ 108 ಆಂಬುಲೆನ್ಸ್ ಸಿಬ್ಬಂದಿಗಳು ಬಾಕಿ ವೇತನ ಪಾವತಿಸದ ಹಿನ್ನೆಲೆಯಲ್ಲಿ ಸೇವೆ ಬಂದ್ ಮಾಡಿ ಪ್ರತಿಭಟನೆ ಮಾಡಿದ್ದರು. ವೇಳೆ ಸಚಿವ ದಿನೇಶ್ ಗುಂಡೂರಾವ್ ಅವರು, 108 ಸಿಬ್ಬಂದಿ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿದ ಆರೋಗ್ಯ ಇಲಾಖೆ ಆಯುಕ್ತ ರಂದೀಪ್, ಬಾಕಿ ವೇತನದ ಮೊದಲ ಕಂತಿನ 14 ಕೋಟಿ ಬಿಡುಗಡೆಗೊಳಿಸಿದ್ದರು.

ಭಾರಿ ಮಳೆ : ಈ 4 ಜಿಲ್ಲೆಗಳಿಗೆ ಯಲ್ಲೊ ಅಲರ್ಟ್ ಘೋಷಿಸಿದ ಹವಾಮಾನ ಇಲಾಖೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಹಲವೆಡೆ ಇಂದು ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆಯು ಮುನ್ಸೂಚನೆ ನೀಡಿದೆ. ಅಲ್ಲದೇ ರಾಜ್ಯದ ಈ , ನಾಲ್ಕು ಜಿಲ್ಲೆಗಳಿಗೆ ಯೆಲ್ಲೊ ಅಲರ್ಟ್ ಕೂಡ ಘೋಷಿಸಿದೆ. ಶಿವಮೊಗ್ಗ, ಚಿಕ್ಕಮಗಳೂರು, ಮೈಸೂರು ಹಾಗೂ ಮಂಡ್ಯ ಜಿಲ್ಲೆಗೆ ಯೆಲ್ಲೊ ಅಲರ್ಟ್ ಘೋಷಿಸಿ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಜಿಲ್ಲೆಗಳ ಕೆಲವೆಡೆ ಗುಡುಗು ಸಹಿತ ಭಾರಿ ಮಳೆಯಾಗುವ ಸಾಧ್ಯತೆಯಿದೆ. ದಕ್ಷಿಣ ಒಳನಾಡಿನ ಉಳಿದ ಜಿಲ್ಲೆಗಳು ಹಾಗೂ ಕರಾವಳಿಯ ಹಲವೆಡೆ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಇಲಾಖೆ ತಿಳಿಸಿದೆ. ಇನ್ನು ರಾಜಧಾನಿ ಬೆಂಗಳೂರಿನಲ್ಲಿ ಮೋಡ ಕವಿದ ವಾತಾವರಣ ಇರಲಿದೆ. ಹೆಚ್ಚಿನ ಸ್ಥಳಗಳಲ್ಲಿ ಜಿಟಿಜಿಟಿ ಮಳೆ ಹಾಗೂ ಕೆಲ ಸ್ಥಳಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ.

ವ್ಯಕ್ತಿಗೆ ಚಾಕು ಇರಿತ, ಆರೋಪಿ ಅರೆಸ್ಟ್!

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಕ್ಷುಲ್ಲಕ ಕಾರಣಕ್ಕೆ ವ್ಯಕ್ತಿಗೆ ಚಾಕು ಇರಿದಿರುವ ಘಟನೆ ಬೆಂಗಳೂರಿನ ಅನ್ನಪೂರ್ಣೇಶ್ವರಿ ನಗರ ಠಾಣಾ ವ್ಯಾಪ್ತಿಯಲ್ಲಿ ನಿನ್ನೆ ಈ ಒಂದು ಘಟನೆ ನಡೆದಿದೆ. ನಾಗರಬಾವಿಯ ವಿನಾಯಕ ಲೇಔಟ್‌ನಲ್ಲಿ ಚಾಕು ಇರಿದಿರುವ ಘಟನೆ ನಡೆದಿದೆ ವಕೀಲ ದಳಪತಿ (70) ಎನ್ನುವವರಿಗೆ ರಾಘವೇಂದ್ರ ಎನ್ನುವ ವ್ಯಕ್ತಿ ಚಾಕು ಇರಿದಿದ್ದಾನೆ. ದಳಪತಿ ಮನೆಯ ಬಳಿ ರಾಘವೇಂದ್ರ ಚಾಕುವಿನಿಂದ ಇರದಿದ್ದಾನೆ. ಪಾರ್ಕಿಂಗ್ ವಿಚಾರಕ್ಕೆ ಗಲಾಟೆ ನಡೆದಿದು, ಚಾಕುವಿನಿಂದ ಬೆನ್ನಿಗೆ ಚುಚ್ಚಿ ಆರೋಪಿ ರಾಘವೇಂದ್ರ ಕೊಲೆಗೆ ಯತ್ನಿಸಿದ್ದಾನೆ ಎನ್ನಲಾಗಿದೆ. ಸದ್ಯ ನಾಗರಬಾವಿಯ ಜಿಎಂ ಆಸ್ಪತ್ರೆಯಲ್ಲಿ ವಕೀಲ ದಳಪತಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಘಟನೆ ಕುರಿತಂತೆ ಬಗ್ಗೆ ಆರೋಪಿಯ ಕುಟುಂಬಸ್ಥರು ದೂರು ನೀಡಿದ್ದಾರೆ. ಕೊಲೆ ಯತ್ನ ಕೇಸ್ ದಾಖಲಿಸಿ ಪೊಲೀಸರು ರಾಘವೇಂದ್ರನನ್ನು ಅರೆಸ್ಟ್ ಮಾಡಿದ್ದಾರೆ.

ಜೀವನದಲ್ಲಿ ಸಾಧನೆ ಮಾಡಲು ಶ್ರಮ, ತ್ಯಾಗ, ಶ್ರದ್ಧೆ ಅಗತ್ಯ

ಬೆಂಗಳೂರು ನಗರ ವ್ಯಾಪ್ತಿಯ ಸರ್ಕಾರಿ ಶಾಲೆಗಳ ಮಕ್ಕಳ ಜತೆಗೆ ಸಂವಾದ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ಮಕ್ಕಳು ಕನಸನ್ನು ಕಾಣಬೇಕು. ಆ ಕನಸನ್ನು ಸಾಕಾರಗೊಳಿಸಲು ಶ್ರಮ ಪಡಬೇಕು, ಜೀವನದಲ್ಲಿ ತ್ಯಾಗ ಹಾಗೂ ಶ್ರದ್ಧೆ ಇರಬೇಕು. ಆಗ ಮಾತ್ರ ಸಾಧನೆ ಮಾಡಲು ಸಾಧ್ಯ. ಕುಳಿತಲ್ಲಿಯೇ ಕುಳಿತು ಕನಸು ಕಂಡರೆ ಪ್ರಯೋಜನವಿಲ್ಲ, ಅದಕ್ಕೆ ಪ್ರಯತ್ನ ಪಡಬೇಕು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಮಕ್ಕಳಿಗೆ ಕಿವಿಮಾತು ಹೇಳಿದರು. ದೇಶದ ಪ್ರಥಮ ಪ್ರಧಾನಿ ಜವಾಹರ್ ಲಾಲ್ ನೆಹರು ಅವರ ಜಯಂತಿ ಹಾಗೂ ಮಕ್ಕಳ ದಿನಾಚರಣೆಯ ಅಂಗವಾಗಿ ವಿಧಾನಸೌಧದಲ್ಲಿ ನಡೆದ ಬೆಂಗಳೂರು ನಗರ ವ್ಯಾಪ್ತಿಯ ಸರ್ಕಾರಿ ಶಾಲೆಗಳ ಮಕ್ಕಳ ಜತೆಗೆ ಸಂವಾದ ಕಾರ್ಯಕ್ರಮದಲ್ಲಿ ಡಿಸಿಎಂ ಮಾತನಾಡಿದರು. ನೀವು ಸಾಗಿದ ಹಾದಿಯನ್ನು ಮರೆತರೆ ಫಲ ದೊರೆಯುವುದಿಲ್ಲ.

ಜವಾಹರ್ ಲಾಲ್ ನೆಹರು ಅವರ ಜಯಂತಿ

ನಿಮ್ಮನ್ನು ಸಾಕಿದ ಪೋಷಕರು, ವ್ಯಕ್ತಿತ್ವ ಬೆಳೆಸಿದ ಶಿಕ್ಷಕರನ್ನು ಯಾವುದೇ ಕಾರಣಕ್ಕೂ ಮರೆಯಬಾರದು. ಯಾವುದನ್ನು ಬೇಕಾದರೂ ಬದಲಿಯಾಗಿ ಪಡೆಯಬಹುದು. ಪೋಷಕರು ಮತ್ತು ಶಿಕ್ಷಕರನ್ನು ಬದಲಿಯಾಗಿ ಪಡೆಯಲು ಸಾಧ್ಯವಿಲ್ಲ. ಎಷ್ಟೇ ಎತ್ತರಕ್ಕೆ ಬೆಳೆದರೂ ನೀವು ಈ ಪ್ರಾಥಮಿಕ ವಿಚಾರಗಳನ್ನು ಮರೆಯಬಾರದು ಎಂದು ಹೇಳಿದರು. ಮಕ್ಕಳೇ ಈ ದೇಶದ ಆಸ್ತಿ. ನೀವು ಸಹ ಮುಂದಿನ ದಿನಗಳಲ್ಲಿ ವಿಧಾನಸೌಧದಲ್ಲಿ ವಿವಿಧ ಹುದ್ದೆಗಳನ್ನು

ಉದಯವಾಹಿನಿ ಚಿತ್ರ

ಅಲಂಕರಿಸುವ, ಅತ್ಯುನ್ನತ ಅಧಿಕಾರಿಗಳಾಗಿ, ಡಿ.ಕೆ. ಶಿವಕುಮಾರ್, ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರ ರೀತಿ ಬೆಳೆಯಬೇಕು ಎಂಬುದು ನಮ್ಮ ಆಶಯ ಎಂದರು. ಜೀವನದಲ್ಲಿ ಯಾವುದೂ ಶಾಶ್ವತವಲ್ಲ, ಯಾರು ಯಾವ ಸಾಧನೆಯನ್ನು ಬೇಕಾದರೂ ಮಾಡಬಹುದು. ಸಾಧನೆಗೆ ಹಾಗೂ ಆಕಾಶಕ್ಕೆ ಮಿತಿ ಇಲ್ಲ. ಜಾಗತಿಕವಾದ ಸ್ಪರ್ಧಾತ್ಮಕ ಯುಗದಲ್ಲಿ ನೀವಿದ್ದೀರಿ. ಅಧ್ಯಾಪಕರು ಯಾವುದಾದರು ಹೊಸ ಮಾಹಿತಿ ಕೊಡುವುದನ್ನು ಮರೆಯಬಹುದು.

ಆದರೆ, ನಿಮ್ಮ ಬಳಿ ಇರುವ ಪುಟ್ಟ ಮೊಬೈಲ್ ನಿಂದಲೇ ಅನೇಕ ವಿಚಾರಗಳನ್ನು ತಿಳಿದುಕೊಳ್ಳಬಹುದು ಮತ್ತು ತಿಳಿದು ಕೊಂಡಿರುತ್ತೀರಿ. ಸಿಕ್ಕಂತಹ ಅವಕಾಶಗಳನ್ನು ಬಳಸಿಕೊಂಡು

ಒಂದು ಶಾಲಾ ಆವರಣದಲ್ಲಿಯೇ ಮಕ್ಕಳ ದಿನಾಚರಣೆಯನ್ನು ಮಾಡಿ ಮುಗಿಸಬಹುದಿತ್ತು. ಮುಂದಿನ ಭವಿಷ್ಯಗಳಾದ ನಿಮಗೆ, ಈ ಆಡಳಿತ ಕೇಂದ್ರದಿಂದ ಸ್ಫೂರ್ತಿ ದೊರೆಯಲಿ ಎಂದು ವಿಧಾನಸೌಧಕ್ಕೆ ನಿಮ್ಮನ್ನು ಆಹ್ವಾನಿಸಿ ಆಚರಣೆ ಮಾಡುತ್ತಿದ್ದೇವೆ ಎಂದರು.

ಮುನ್ನಡೆಯಿರಿ ಎಂದು ಕಿವಿಮಾತು ಹೇಳಿದರು. ಎಲ್ಲಾ ಮಕ್ಕಳ ತಂದೆ- ತಾಯಂದಿರಿಗೆ, ನಮ್ಮ ಮಕ್ಕಳು ನಮಗಿಂತ ಉತ್ತಮ ಜೀವನ ನಡೆಸಬೇಕು. ನಾವು ಪಟ್ಟಂತ ಕಷ್ಟ ಅವರು ಪಡಬಾರದು ಎನ್ನುವ ಆಸೆ, ಕನಸು ಹೊಂದಿರುತ್ತಾರೆ. ನೀವು ಪ್ರಭುದ್ಧವಾಗಿ ಬೆಳೆದಷ್ಟು ಶಿಕ್ಷಕರು ಅತ್ಯಂತ ಹೆಚ್ಚು ಹೆಮ್ಮೆ ಪಡುತ್ತಾರೆ. ನೀವು ನಾಯಕರಾಗಿ ಹೊರಹೊಮ್ಮಬೇಕು. ಎಂದು ಹೇಳಿದರು.

ಈ ದೇಶದ ಮೊದಲ ಪ್ರಧಾನಿ ಜವಾಹರ್ ಲಾಲ್ ನೆಹರು ಅವರ ಹುಟ್ಟುಹಬ್ಬವನ್ನು ಮಕ್ಕಳ ದಿನ ಎಂದು ಆಚರಿಸಲಾಗುತ್ತದೆ. ಅವರು ಈ ದೇಶಕ್ಕೆ ಅಡಿಪಾಯವನ್ನು ಕಟ್ಟಿದವರು. ಸ್ವಾತಂತ್ರ ಬಂದ ನಂತರ ಹೊಸ ಭಾರತವನ್ನು ನಿರ್ಮಾಣ ಮಾಡಲು ಶ್ರಮಪಟ್ಟವರು. ನಮ್ಮ ರಾಜ್ಯ ಹಾಗೂ ದೇಶದಲ್ಲಿ ಅನೇಕ ಸಾಕ್ಷಿ ಗುಡ್ಡಗಳನ್ನು ನಿರ್ಮಾಣ ಮಾಡಿ ಹೋಗಿದ್ದಾರೆ. ಹಲವಾರು ಸಾರ್ವಜನಿಕ ಉದ್ದಿಮೆಯನ್ನು ಸ್ಥಾಪಿಸಿದ್ದಾರೆ. ಹೆಚ್ ಎಮ್ ಟಿ, ಬಿಇ ಎಲ್, ಬಿಇಎಂ ಎಲ್ ಕಾರ್ಖಾನೆಗಳನ್ನು ಬೆಂಗಳೂರಿನಲ್ಲಿ ಸ್ಥಾಪಿಸಿದರು ಎಂದರು. ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಾವು ಅನೇಕ ವಿಚಾರಗಳಲ್ಲಿ ಸಾಕಷ್ಟು ಮಂದಿದ್ದೇವೆ. ಶಿಕ್ಷಣ, ಆರೋಗ್ಯ, ಆಡಳಿತದಲ್ಲಿ ಸಾಕಷ್ಟು ಪ್ರಗತಿ ಸಾದಿಸಿದ್ದೇವೆ. ಮಂಗಳಯಾನ ಚಂದ್ರಯಾನಕ್ಕೆ ಇಸ್ರೋ ಸಂಸ್ಥೆಯವರು ಬೆಂಗಳೂರಲ್ಲಿ ಉಪಗ್ರಹಗಳನ್ನು ತಯಾರು ಮಾಡುತ್ತಾರೆ. ದೇಶದಲ್ಲಿ ಅತ್ಯಂತ ಹೆಚ್ಚು ವೈದ್ಯರು, ಶುಶ್ರೂಷಕಿಯರು, ಇಂಜಿನಿಯರ್‌ಗಳು, ವಿಜ್ಞಾನಿಗಳು ಕರ್ನಾಟಕದಿಂದ ಹೊರ ಹೊಮ್ಮುತ್ತಿದ್ದಾರೆ. ಇದು ನಿಮ್ಮ ಸಾಧನೆಗಳಿಗೆ ಸ್ಫೂರ್ತಿ ಆಗಬೇಕು ಎಂದು ಹುರಿದುಂಬಿಸಿದರು.

ವಿಧಾನಸೌಧ ಆವರಣದಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ

ಮಕ್ಕಳ ದಿನಾಚರಣೆಯ ನಂತರ ವಿಧಾನಸೌಧ ಆವರಣದಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಡಿಸಿಎಂ ಅವರು ಬಿಬಿಎಂಪಿ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳೊಟ್ಟಿಗೆ ಮಕ್ಕಳ ದಿನವನ್ನು ಆಚರಿಸಲಾಯಿತು. ಇದೇ ವೇಳೆ ಅವರ ಸಮಸ್ಯೆಗಳನ್ನು ಆಲಿಸಲಾಯಿತು. ಇದೊಂದು ವಿಭಿನ್ನವಾದ ಕಾರ್ಯಕ್ರಮ. ಮುಂದಿನ ವರ್ಷದಿಂದ ಇನ್ನು ವಿಶೇಷವಾಗಿ ಆಚರಿಸಲಾಗುವುದು ಎಂದರು.

ಮಹಾರಾಷ್ಟ್ರ ವಿಧಾನಸಭಾ ಚುನಾವಣೆ ಅಖಾಡಕ್ಕೆ ಇಳಿದ ಡಿಸಿಎಂ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ಮೂರು ಕ್ಷೇತ್ರಗಳ ವಿಧಾನಸಭಾ ಉಪ ಚುನಾವಣೆಯ ಬಳಿಕ, ಡಿಸಿಎಂ ಡಿಕೆ ಶಿವಕುಮಾರ್ ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯ ಅಖಾಡಕ್ಕೆ ಇಳಿದಿದ್ದಾರೆ. ನಾಳೆಯಿಂದ ಮೂರು ದಿನಗಳ ಕಾಲ ಮಹಾರಾಷ್ಟ್ರದಲ್ಲಿ ಕಾಂಗ್ರೇಸ್ ಅಭ್ಯರ್ಥಿಗಳ ಪರ ಅಬ್ಬರದ ಪ್ರಚಾರ ಮಾಡಲಿದ್ದಾರೆ.

ದಿನಾಂಕ 15-11-2024ರ ಬೆಳಿಗ್ಗೆ 9.55ಕ್ಕೆ ಬೆಂಗಳೂರು ಕೆಂಪೇಗೌಡ ವಿಮಾನ ನಿಲ್ದಾಣದಿಂದ ವಿಮಾನದ ಮೂಲಕ ಮುಂಬೈಗೆ ತೆರಳಲಿದ್ದಾರೆ. ಮಧ್ಯಾಹ್ನ 12 ಗಂಟೆಗೆ ಮುಂಬೈ ಏರ್ಪೋರ್ಟ್ ತಲುಪಲಿರುವಂತ ಅವರು, ಅಲ್ಲಿಂದ ರಸ್ತೆಯ ಮೂಲಕ ಸಾಗಿ ಮುಂಬೈ ವೆಸ್ಟ್ ವಿಧಾನಸಭಾ ಕ್ಷೇತ್ರವಾದಂತ ಬಿವಂಡಿಯಲ್ಲಿ ಪ್ರಚಾರ ನಡೆಸಲಿದ್ದಾರೆ. ಸಂಜೆ 5 ಗಂಟೆಗೆ ಚಾಂದಿವಲಿ ವಿಧಾನ ಸಭಾ ಕ್ಷೇತ್ರದಲ್ಲಿ ಚುನಾವಣಾ ಪ್ರಚಾರ ನಡೆಸಲಿರುವಂತ ಅವರು, ರಾತ್ರಿ 7.55ಕ್ಕೆ ಮುಂಬೈ ನಿಂದ ವಿಮಾನದಲ್ಲಿ ಹೊರಟು, ಬೆಂಗಳೂರನ್ನು ರಾತ್ರಿ 9.55ಕ್ಕೆ ತಲುಪಲಿದ್ದಾರೆ. ದಿನಾಂಕ 16-11-2024ರಂದು ಮರು ದಿನ ಬೆಳಿಗ್ಗೆ 9 ಗಂಟೆಗೆ ಹೆಚ್ ಎಎಲ್ ಏರ್ ಪೋರ್ಟ್ ನಿಂದ ವಿಶೇಷ ಏರ್ ಕ್ರಾಫ್ಟ್ ಮೂಲಕ ಮಹರಾಷ್ಟ್ರದ ಸೊಲ್ಲಾಪುರ ವಿಮಾನ ನಿಲ್ದಾಣವನ್ನು ಬೆಳಿಗ್ಗೆ 11 ಗಂಟೆಗೆ ತಲುಪಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ಜಟ್ ವಿಧಾನಸಭಾ ಕ್ಷೇತ್ರದಲ್ಲಿ ಪ್ರಚಾರ ನಡೆಸಲಿದ್ದಾರೆ. ಸಂಜೆ 6 ಗಂಟೆಗೆ ಅಕ್ಕಲಕೋಟ್ ವಿಧಾನಸಭಾ ಕ್ಷೇತ್ರ, ರಾತ್ರಿ 8 ಗಂಟೆಗೆ ಸೋಲಾಪುರ ವಿಧಾನಸಭಾ ಕ್

ಬಾಲಭವನ ನಿರ್ಮಾಣಕ್ಕೆ ಮಂಜೂರು ಮಾಡಿದ್ದ ಜಮೀನು ಒತ್ತುವರಿ

ಜಿಲ್ಲೆಯಲ್ಲಿ ಇಂದಿಗೂ ಬಾಲ ಭವನ ನಿರ್ಮಾಣವೇ ಆಗಿಲ್ಲ, ಚಿಕ್ಕಬಳ್ಳಾಪುರವು ಜಿಲ್ಲೆಯಾಗಿ ರೂಪು ತಳೆದು 18 ವರ್ಷಗಳೇ ಉರುಳಿವೆ

• ಉದಯವಾಹಿನಿ ಚಿಕ್ಕಬಳ್ಳಾಪುರ

ಮತ್ತೊಂದು ಮಕ್ಕಳ ದಿನಾಚರಣೆಯು ಜಿಲ್ಲೆಯಲ್ಲಿ ನಡೆಯುತ್ತಿದೆ. ಆದರೆ ಜಿಲ್ಲೆಯಲ್ಲಿ ಇಂದಿಗೂ ಬಾಲ ಭವನ ನಿರ್ಮಾಣವೇ ಆಗಿಲ್ಲ.

ಚಿಕ್ಕಬಳ್ಳಾಪುರವು ಜಿಲ್ಲೆಯಾಗಿ ರೂಪು ತಳೆದು 18 ವರ್ಷಗಳೇ ಉರುಳಿವೆ. ಜಿಲ್ಲಾ ಕೇಂದ್ರದಲ್ಲಿ ಜಿಲ್ಲಾ ಬಾಲ ಭವನದ ಕನಸು ಮಾತ್ರ ಈಡೇರಿಲ್ಲ. ಮಕ್ಕಳ ವ್ಯಕ್ತಿತ್ವ ವಿಕಸನಕ್ಕೆ ವೇದಿಕೆ ಒದಗಿಸುವ ಮಹತ್ವದ ಯೋಜನೆ ನನೆಗುದಿಗೆ ಬಿದ್ದಿದೆ.

ಮಹತ್ವದ ಯೋಜನೆ ನನೆಗುದಿಗೆ

ಅತ್ಯಂತ ಕಡಿಮೆ ಶುಲ್ಕದಲ್ಲಿ ಮಕ್ಕಳ ವ್ಯಕ್ತಿತ್ವ ವಿಕಸನ ವೃದ್ಧಿಗೆ ಅಗತ್ಯವಾದ ಕಲೆ, ಸಾಹಿತ್ಯ, ಸಂಸ್ಕೃತಿ, ಸಂಗೀತ, ಕ್ರೀಡೆಯಂತ ಪಠ್ಯೇತರ ಚಟುಟಿಕೆಗಳ ತರಬೇತಿ ನೀಡುವುದು. ಮಕ್ಕಳು ವೈಯಕ್ತಿಕ ಮತ್ತು ಮಾನಸಿಕವಾಗಿ ವಿಕಾಸ ಹೊಂದುವಂತೆ ನೋಡಿಕೊಳ್ಳುವುದು ಬಾಲ ಭವನ ಯೋಜನೆಯ ಮುಖ್ಯ ಧ್ಯೇಯ. ನಗರದ ಹೊರವಲಯದ ಗೌರಿಬಿದನೂರು ರಸ್ತೆಯಲ್ಲಿರುವ ರಂಗನಾಥ ಸ್ವಾಮಿ ದೇವಸ್ಥಾನದ (ರಂಗಸ್ಥಳ) ಬಳಿಯ ಸರ್ವೆ ನಂ 96ರಲ್ಲಿ 7 ಎಕರೆ ಜಮೀನನ್ನು ಜಿಲ್ಲಾ ಬಾಲ ಭವನ ನಿರ್ಮಿಸಲು 2015ರ ಜುಲೈನಲ್ಲಿ ಜಿಲ್ಲಾಧಿಕಾರಿ ಮಂಜೂರು ಮಾಡಿದ್ದಾರೆ. ಭೂಮಿ ಮಂಜೂರಾಗಿ ಒಂಬತ್ತು ವರ್ಷಗಳು ಕಳೆದರೂ ಭವನ ತಲೆ ಎತ್ತಿಲ್ಲ. ಈ ಭೂಮಿ ಇಂದಿಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹೆಸರಿನಲ್ಲಿ ಇದೆ.

ಅಂದು ಬಾಲ ಭವನ ಸೊಸೈಟಿಯು ಕಟ್ಟಡ, ಮಕ್ಕಳ ಹುಟ್ಟುಹಬ್ಬದ ಹಾಲ್, ಶೌಚಾಲಯ, ಆಟೋಪಕರಣ, ಟೆಲಿಸ್ಕೋಪ್, ಅಕ್ವೇರಿಯಂ, ಆಟದ ಮೈದಾನ ನಿರ್ಮಿಸಲು 60 ಲಕ್ಷ ಅನುದಾನ ಸಹ ಮಂಜೂರು ಮಾಡಿತ್ತು. ಆದರೆ 2017 ರಲ್ಲಿ ಉದ್ದೇಶಿತ ಜಾಗದ ಸಮೀಕ್ಷೆ ನಡೆಸಿದ ಕರ್ನಾಟಕ ಗೃಹ ಮಂಡಳಿ (ಕೆಎಚ್‌ಬಿ) ಅಧಿಕಾರಿಗಳು ಬಾಲಭವನಕ್ಕೆ ಮಂಜೂರಾದ ಜಾಗ ಸೂಕ್ತವಾಗಿಲ್ಲ ಎಂದು ವರದಿ ನೀಡಿದ್ದರು.

ರಂಗಸ್ಥಳದ ಬಳಿ ಮಂಜೂರಾದ ಜಾಗ ಸಮತಟ್ಟಾಗಿಲ್ಲ. ಸರಿಯಾದ ದಾರಿ ವ್ಯವಸ್ಥೆ ಇಲ್ಲ. ದಾರಿ


ಉದಯವಾಹಿನಿ ಚಿತ್ರ

ನಿರ್ಮಾಣಕ್ಕೆ 1 ಕೋಟಿ ಬೇಕು. ಅಲ್ಲಿ ಬಾಲ ಭವನ ನಿರ್ಮಿಸುವುದು ಸೂಕ್ತವಲ್ಲ ಎಂದು ಲಿಖಿತವಾಗಿ ಹಿಂಬರಹ ನೀಡಿದ್ದರು.

ಹೀಗಾಗಿ, ಬಾಲ ಭವನ ಸೊಸೈಟಿಯು ಬಾಲ ಭವನ ನಿರ್ಮಾಣಕ್ಕಾಗಿ ನೀಡಿದ್ದ 60 ಲಕ್ಷ ಅನುದಾನವನ್ನು 2018ರ ಆಗಸ್ಟ್‌ನಲ್ಲಿ ಹಿಂಪಡೆಯಿತು.

ಪರ್ಯಾಯ ಜಾಗ ಹುಡುಕಿ, ಯೋಜನೆ ಸಿದ್ಧಪಡಿಸಿದ ಬಳಿಕ ಪುನಃ ಅನುದಾನ ನೀಡುವುದಾಗಿ ತಿಳಿಸಿತ್ತು. ಅಂದಿನಿಂದ ಈವರೆಗೆ ಬಾಲಭವನಕ್ಕೆ ಪರ್ಯಾಯ ಜಾಗ ಹುಡುಕುವ ಕೆಲಸ ನಡೆದಿಲ್ಲ. ರಂಗಸ್ಥಳದ ಬಳಿ ಗುರುತಿಸಿರುವ ಸ್ಥಳಕ್ಕೆ ತೆರಳಲು ಸೂಕ್ತ ರಸ್ತೆ ಇಲ್ಲ. ಈ ರಸ್ತೆ ನಿರ್ಮಾಣಕ್ಕೆ ಸಾಕಷ್ಟು ಹಣ ವ್ಯಯವಾಗುತ್ತದೆ. ಆದ್ದರಿಂದ ಇಲ್ಲಿ ಬಾಲಭವನ ನಿರ್ಮಾಣ ನನೆಗುದಿಗೆ ಬಿದ್ದಿದೆ ಎನ್ನುತ್ತವೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮೂಲಗಳು.

ಬಾಲಭವನ ನಿರ್ಮಾಣಕ್ಕೆ ಜಾಗ ನೀಡಿರುವ ರಂಗಸ್ಥಳದ ಬಳಿಯೇ ಇತರೆ ಇಲಾಖೆಗಳಿಗೂ ಜಮೀನು ನೀಡಲಾಗಿದೆಯಂತೆ. ಇಲ್ಲಿ ರಸ್ತೆ ನಿರ್ಮಿಸಿದರೆ ಕೇವಲ ಒಬ್ಬರಿಗಷ್ಟೇ ಅಲ್ಲ ಎಲ್ಲರಿಗೂ ಅನುಕೂಲ ಆಗುತ್ತದೆ. ರಂಗಸ್ಥಳ ಈಗಾಗಲೇ ಪ್ರವಾಸಿ ತಾಣ ಎನಿಸಿದೆ. ನಿತ್ಯ ಪ್ರವಾಸಿಗರು ಭೇಟಿ ನೀಡುವರು. ವಾರಾಂತ್ಯದಲ್ಲಿ ಸಂಖ್ಯೆ ಹೆಚ್ಚಿರುತ್ತದೆ. ಬಾಲಭವನಕ್ಕೆ ನೀಡಿರುವ ಜಾಗ ನಗರಕ್ಕೂ ಸಮೀಪವಿದೆ. ಈ ಎಲ್ಲಾ ದೃಷ್ಟಿಯಿಂದ ಈಗ ನೀಡಿರುವ ಜಮೀನನ್ನು ಅಚ್ಚುಕಟ್ಟುಗೊಳಿಸಿ ಭವನ ನಿರ್ಮಿಸಿದರೆ ಒಳ್ಳೆಯದು. ಅಷ್ಟೊಂದು ಜಮೀನು ನಗರಕ್ಕೆ ಸಮೀಪದಲ್ಲಿ ಒಂದೇ ಕಡೆ ದೊರೆಯುವುದು ಕಷ್ಟಸಾಧ್ಯ ಎನ್ನುತ್ತಾರೆ ಪೋಷಕರು.

ಐದು ಕಿ.ಮೀ ಹೊರಗೆ ಜಮೀನು ನೀಡಿದರೆ ಸಮಸ್ಯೆ

ರಂಗಸ್ಥಳದ ಜಮೀನು ಸಹ ನಮ್ಮ ಇಲಾಖೆ ಹೆಸರಿನಲ್ಲಿಯೇ ಇದೆ. ಆದರೆ ಅಲ್ಲಿನ ಜಾಗವೂ ಒತ್ತುವರಿಯಾಗಿದೆ ಎಂದು ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ವೆಂಕಟೇಶ್ ರೆಡ್ಡಿ ತಿಳಿಸಿದರು. ನಗರದಿಂದ ಐದು ಕಿ.ಮೀ ಹೊರಗೆ ಭವನ ನಿರ್ಮಾಣಕ್ಕೆ ಜಮೀನು ನೀಡಿದರೆ ಸಮಸ್ಯೆ ಆಗುತ್ತದೆ. ಮಕ್ಕಳು ಬರುವುದು ಸಹ ಕಷ್ಟ. ನಾವು ಸಹ ಜಮೀನು ನೋಡುತ್ತಿದ್ದೇವೆ. ಬಾಲ ಭವನಕ್ಕೆ ಜಮೀನು ದೊರಕಿಸಿಕೊಡುವಂತೆ ಕಂದಾಯ ಇಲಾಖೆ ಅಧಿಕಾರಿಗಳಿಗೂ ಮನವಿ ಮಾಡಿದ್ದೇವೆ ಎಂದು ತಿಳಿಸಿದರು.

ಸಾಗುವಳಿ ಭೂಮಿಗೆ ಪ್ರವೇಶ ನಿರ್ಬಂಧದ ಫಲಕ

• ಉದಯವಾಹಿನಿ, ಗುಡಿಬಂಡೆ

ಕಳೆದ 20 ವರ್ಷಗಳಿಂದ ಪರಿಶಿಷ್ಟ ಜಾತಿಯ ಮಹಿಳೆಯು ಉಳುಮೆ ಮಾಡುತ್ತಿರುವ ಜಮೀನಿಗೆ ಈಗ ತಾಲ್ಲೂಕು ಆಡಳಿತ ಪ್ರವೇಶ ನಿರ್ಬಂಧಿಸಿ ಫಲಕ ಹಾಕಿರುವುದು ತಾಲ್ಲೂಕಿನಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ಅಧಿಕಾರಿಗಳು ರಾಜಕೀಯ ಒತ್ತಡಕ್ಕೆ ಮಣಿದು ಪರಿಶಿಷ್ಟ ಮಹಿಳೆಗೆ ಅನ್ಯಾಯ ಮಾಡುತ್ತಿದ್ದಾರೆ ಎನ್ನುವ ಮಾತುಗಳು ಕೇಳಿ ಬರುತ್ತಿವೆ.

ತಾಲ್ಲೂಕಿನ ಹಂಪಸಂದ್ರ ಗ್ರಾಮ ಪಂಚಾಯಿತಿಯ ಕಡೇಹಳ್ಳಿ ಗ್ರಾಮದ ಸರ್ವೆ ನಂಬರ್ 131ರಲ್ಲಿ ಇರುವ 2.31 ಎಕರೆ ಸರ್ಕಾರಿ ಜಮೀನನ್ನು ಸುಮಾರು 20 ವರ್ಷಗಳಿಂದ ಪರಿಶಿಷ್ಟ ಜಾತಿಯ ಆದಿಲಕ್ಷ್ಮಮ್ಮ ಉಳುಮೆ ಮಾಡುತ್ತಿದ್ದಾರೆ. 2019ರಲ್ಲಿ ಬಗರ್‌ಹುಕುಂ ಅಕ್ರಮ ಸಕ್ರಮ ಯೋಜನೆಯಡಿ ಈ ಜಮೀನನ್ನು ತಮ್ಮ ಹೆಸರಿಗೆ ಮಾಡಿಕೊಡುವಂತೆ ನಮೂನೆ 57ರಲ್ಲಿ ಅರ್ಜಿ ಸಲ್ಲಿಸಿದ್ದಾರೆ. ಹೀಗಿದ್ದರೂ ತಾಲ್ಲೂಕು ಆಡಳಿತ ರಾಜಕೀಯ ಒತ್ತಡಗಳಿಗೆ ಮಣಿದು ಈ ಜಮೀನಿನಲ್ಲಿ ಆಶ್ರಯ ಯೋಜನೆಯ ನಿವೇಶನಗಳನ್ನು ರೂಪಿಸಲು ಮುಂದಾಗಿತ್ತು. ಇದನ್ನು ಪ್ರಶ್ನಿಸಿ ಆದಿಲಕ್ಷ್ಮಮ್ಮ ಹೈಕೋರ್ಟ್ ಮೊರೆ ಹೋಗಿದ್ದರು.

ತಡೆಯಾಜ್ಞೆ ತಂದು ಜಮೀನು ಸಾಗುವಳಿ

ಉದಯವಾಹಿನಿ ಚಿತ್ರ

ಮಾಡುತ್ತಿದ್ದಾರೆ. 22 ತಿಂಗಳ ನಂತರ ತಾಲ್ಲೂಕು ಆಡಳಿತ 'ಯಾರು ಪ್ರವೇಶ ಮಾಡಬಾರದು' ಎಂದು ನಾಮಫಲಕ ಹಾಕಿದೆ. ಆದರೆ ಅಧಿಕಾರಿಗಳು ರಾಜಕಾರಣಿಗಳ ಒತ್ತಡಗಳಿಗೆ ಮಣಿದು ನಮ್ಮ ಸ್ವಾಧೀನ ಅನುಭವಕ್ಕೆ ಪದೇ ಪದೇ ತೊಂದರೆ ಮಾಡುತ್ತಿದ್ದಾರೆ. ಗ್ರಾಮದ ಕೆಲವು ರಾಜಕೀಯ ಮುಖಂಡರು ತಮ್ಮ ವೈಯಕ್ತಿಕ ಪ್ರತಿಷ್ಠೆಗೆ ಮತ್ತು ರಾಜಕೀಯ ಲಾಭಕ್ಕಾಗಿ ದಲಿತರನ್ನು ಒಕ್ಕಲೆಬ್ಬಿಸುತ್ತಿದ್ದಾರೆ. ದಲಿತರನ್ನು ನಮ್ಮ ವಿರುದ್ಧ ಎತ್ತಿಕಟ್ಟಿ ದಬ್ಬಾಳಿಕೆ ಮಾಡುವಂತೆ ಪ್ರಚೋದಿಸುತ್ತಿದ್ದಾರೆ ಎಂದು ಆರೋಪಿಸಿದರು.

ಈ ಜಮೀನು ನಂಬಿ ಜೀವನ ಮಾಡುತ್ತಿದ್ದೇವೆ. ಇದನ್ನು ಸಹಿಸದೆ ಸಂಬಂಧವಿಲ್ಲದ ಮೂರನೇ ವ್ಯಕ್ತಿಗಳು ಪದೇ ಪದೇ ನಮ್ಮ ವ್ಯವಸಾಯಕ್ಕೆ ಅಡ್ಡಿ ಪಡಿಸುತ್ತಿದ್ದಾರೆ. ಸ್ವಾಧೀನ ಅನುಭವದಿಂದ ಹೊರ ಹಾಕಲು ಯತ್ನಿಸುತ್ತಿದ್ದಾರೆ ಎಂದು ದೂರಿದರು. ಅಕ್ರಮ ಸಕ್ರಮದಲ್ಲಿ ಜಾಮೀನು ಮಂಜೂರು ಮಾಡುವಂತೆ ಅರ್ಜಿ ಸಲ್ಲಿಸಲಾಗಿದೆ. ಆದರೆ ಸ್ಥಳೀಯ ಕಂದಾಯ ಇಲಾಖೆ ಅಧಿಕಾರಿಗಳು, ಗ್ರಾಮದ ಕೆಲವು ರಾಜಕೀಯ ಮುಖಂಡರ ಒತ್ತಡಗಳಿಗೆ ವಸ್ತುನಿಷ್ಠ ವರದಿಯನ್ನು ಜಿಲ್ಲಾಧಿಕಾರಿ ಅವರಿಗೆ ಸಲ್ಲಿಸದೆ ಸುಳ್ಳು ಕಡತಗಳನ್ನು ಸಿದ್ಧಪಡಿಸಿದ್ದಾರೆ ಎಂದರು. ಕಂದಾಯ ಇಲಾಖೆ ಅಧಿಕಾರಿಗಳ ವರದಿಯಂತೆ. ಜಿಲ್ಲಾಧಿಕಾರಿ ಆಶ್ರಯ ಯೋಜನೆಗೆ ಜಮೀನು ಮಂಜೂರು ಮಾಡಿದ್ದಾರೆ. ಇದನ್ನು ನಾವು ಹೈಕೋರ್ಟ್‌ನಲ್ಲಿ ಪ್ರಶ್ನಿಸಿ ತಡೆಯಾಜ್ಞೆ ತಂದಿದ್ದೇವೆ ಎಂದು ತಿಳಿಸಿದರು.

ಸರ್ವೆ 131ರ ಜಮೀನಿನನ್ನು ಆಶ್ರಯ ಯೋಜನೆಗೆ ಮಂಜೂರು ಮಾಡಿದ್ದಾರೆ. ಈ ಬಗ್ಗೆ ನಾವು ಹೈಕೋರ್ಟ್ ಮೊರೆ ಹೋಗಿದ್ದೆವು. ನ್ಯಾಯಾಲಯವು ತಡೆಯಾಜ್ಞೆ ನೀಡಿದೆ. ನಿಯಮಾನುಸಾರ ಪರಿಶೀಲಿಸುವಂತೆ ತಹಶೀಲ್ದಾರ್‌ಗೆ ಆದೇಶಿಸಿದೆ -ಆದಿಲಕ್ಷ್ಮಮ್ಮ

ಬಿಜೆಪಿ ವಿರುದ್ಧ ಸಿದ್ದರಾಮಯ್ಯ ಆಪರೇಷನ್ ಬಾಂಬ್

• ಉದಯವಾಹಿನಿ, ಮೈಸೂರು

ನಮ್ಮ ಕಾಂಗ್ರೇಸ್ ಸರ್ಕಾರವನ್ನು ಕಿತ್ತೊಗೆಯಲು ಬಿಜೆಪಿಯವರು ಕಾಂಗ್ರೇಸ್ ಐವತ್ತು ಶಾಸಕರಿಗೆ 50 ಕೋಟಿ ರೂಪಾಯಿ ಆಫರ್ ನೀಡಿದ್ದರು.

ಆದರೆ ನಮ್ಮ ಶಾಸಕರು ಯಾವುದೇ ಹಣದ ಆಮಿಷಕ್ಕೆ ಬಗ್ಗಲಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಫೋಟಕವಾದ ಹೇಳಿಕೆ ನೀಡಿದರು.

ನಿನ್ನೆ ಮೈಸೂರು ಜಿಲ್ಲೆಯ ಟಿ ನರಸೀಪುರ ತಾಲ್ಲೂಕಿನ ಹೊರಳಹಳ್ಳಿಯಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಕಾಂಗ್ರೇಸ್ಸಿನ 50 ಶಾಸಕರಿಗೆ ತಲಾ 50 ಕೋಟಿ ರೂಪಾಯಿ ಆಫರ್ ನೀಡಿದರು ಆದರೆ ನಮ್ಮ ಶಾಸಕರು ಯಾವುದಕ್ಕೂ ಬಗ್ಗಲಿಲ್ಲ ಹೀಗಾಗಿ ನನ್ನ ಮುಖಕ್ಕೆ ಮಸಿ ಬಳಿಯುವ ಕೆಲಸ ಮಾಡುತ್ತಿದ್ದಾರೆ ಎಂದು ಮೈಸೂರು ಜಿಲ್ಲೆಯ ಟಿ ನರಸೀಪುರ ತಾಲ್ಲೂಕಿನ ಹೊರಾಳಹಳ್ಳಿ ಗ್ರಾಮದಲ್ಲಿ ಬಿಜೆಪಿ ವಿರುದ್ಧ ಗಂಭೀರವಾದ ಆರೋಪ ಮಾಡಿದರು. ನನ್ನನ್ನು ಮುಟ್ಟಿದರೆ ನಮ್ಮ ಕರ್ನಾಟಕ ಜನ ಸುಮ್ಮನೆ ಬಿಡಲ್ಲ ಎಂದು ಪ್ರತಿಪಕ್ಷ ನಾಯಕರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ನೀಡಿದರು. ನನ್ನ ಕಂಡರೆ ಬಿಜೆಪಿಯವರಿಗೆ ಹೊಟ್ಟೆ ಉರಿ. ಬಡವರ ಪರ ಕೆಲಸ ಮಾಡುತ್ತೇನೆ ಅಂತ ನನ್ನನ್ನು ಇಳಿಸಲು ಪ್ರಯತ್ನಿಸುತ್ತಿದ್ದಾರೆ ನಾನು 40 ವರ್ಷದಿಂದ ರಾಜಕಾರಣ ಮಾಡಿದ್ದೇನೆ. ಸಚಿವ, ಡಿಸಿಎಂ, ಪ್ರತಿಪಕ್ಷ ನಾಯಕ, ಸಿಎಂ ಕೂಡ ಆಗಿದ್ದೇನೆ. 14 ಸೈಟ್‌ಗಾಗಿ ರಾಜಕಾರಣ ಮಾಡಬೇಕಿತ್ತಾ? ನನ್ನ ವಿರುದ್ಧ ಕೆಸ್ ಹಾಕಿಸಿ ಸರ್ಕಾರ ಬೀಳಿಸಲು ಯೋಚಿಸುತ್ತಿದ್ದಾರೆ. ಜನರು ಮೂರ್ಖರು ಅಂತ ಬಿಜೆಪಿಯವರು ತಿಳಿದುಕೊಂಡಿದ್ದಾರೆ. ಜನರ ಬೆಂಬಲ ಇರುವವರೆಗೆ ಯಾವ ಕೇಸ್ಗು ಜಗ್ಗಲ್ಲ ಬಗ್ಗಲ್ಲ ಬಿಜೆಪಿಯವರು ಚರ್ಚೆಗೆ ಬರಲಿ ನಮ್ಮ ತಪ್ಪು ಏನೆಂದು ತೋರಿಸಲಿ ನೀವೆಲ್ಲರೂ ನನ್ನ ಜೊತೆ ನಿಲ್ಲಬೇಕು. ಜಾತಿ ಧರ್ಮ ಬಿಟ್ಟು ಅಭಿವೃದ್ಧಿ ಮಾಡುವವರ ಜೊತೆ ನೀವು ಇರಬೇಕು ಎಂದು ತಿಳಿಸಿದರು.

ನೀವೆಲ್ಲರೂ ನನ್ನ ಜೊತೆ ನಿಲ್ಲಬೇಕು

ಪರಭಾಷಿಕರು ಕನ್ನಡ ಕಲಿಯುವಂತಾಗಬೇಕು: ಶ್ರೀನಿವಾಸ್

• ಉದಯವಾಹಿನಿ, ಕೆ.ಆರ್.ಪೇಟೆ

ತಾಲ್ಲೂಕಿನ ಬೂಕನಕೆರೆ ಹೋಬಳಿಯ ಗಂಜಿಗೆರೆ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಘಟಕದ ವತಿಯಿಂದ 36ನೇ ವರ್ಷದ ಶಾಲೆಗೊಂದು ಕಾರ್ಯಕ್ರಮ ನಡೆಯಿತು.

ಸಮಾರಂಭ ಉದ್ಘಾಟಿಸಿದ ಕಸಾಪ ತಾಲ್ಲೂಕು ಘಟಕದ ಉಪಾಧ್ಯಕ್ಷ ಅಗ್ರಹಾರಬಾಚಹಳ್ಳಿ ಶ್ರೀನಿವಾಸ್ ಮಾತನಾಡಿ, 'ಹರಿದು ಹಂಚಿ ಹೋದ ಕನ್ನಡ ನಾಡು ಕನ್ನಡಿಗರ ಪ್ರತಿಭಟನೆಯ ಫಲವಾಗಿ ಒಂದಾಯಿತು. ನಾಡು ಒಂದಾಗಿ 69 ವರ್ಷಗಳು ಉರುಳಿದರೆ, ಕರ್ನಾಟಕ ಎಂಬ ಹೆಸರು ಬಂದು ಐವತ್ತು ವರ್ಷಗಳಾಗಿವೆ. ನಮ್ಮ ನಾಡು ಮತ್ತು ನುಡಿಯ ಬಗ್ಗೆ ನಾವು ಸದಾ ಎಚ್ಚರವಾಗಿದ್ದುಕೊಂಡು ಭಾಷೆಯ ಬೆಳವಣಿಗೆಗೆ ನೆರವಾಗಬೇಕು. ಎಲ್ಲಾ ಭಾಷೆಯ ಜನರನ್ನು ಪ್ರೀತಿಸೋಣ, ಸಾಮರಸ್ಯದಿಂದ ಬದುಕೋಣ ಆದರೆ ಅವರು ನಮ್ಮ ಭಾಷೆ ಕಲಿಯುವಂತೆ ಮಾಡಬೇಕೇ ವಿನಂ ಅವರ ಬಾಷೆಯಲ್ಲಿ ನಾವು ವ್ಯವಹರಿಸಿ ಕನ್ನಡ ಭಾಷೆಯ

ಉದಯವಾಹಿನಿ ಚಿತ್ರ

ಎಲ್ಲಾ ಭಾಷೆಯ ಜನರನ್ನು ಪ್ರೀತಿಸೋಣ

ಬೆಳವಣಿಗೆಗೆ ನಾವೇ ತೊಡಕಾಗಬಾರದು' ಎಂದು ಸಲಹೆ ನೀಡಿದರು. ನಾಡು- ನುಡಿ, ನೆಲ- ಜಲ ಸಂರಕ್ಷಣೆ ಕುರಿತಂತೆ ಸಾಹಿತಿ ಬಲ್ಲೇನಹಳ್ಳಿ ಮಂಜುನಾಥ್ ಉಪನ್ಯಾಸ ನೀಡಿದರು. ಪ್ರೌಢಶಾಲೆಯ ಮುಖ್ಯಶಿಕ್ಷಕ ಪ್ರವೀಣ್ ಕುಮಾರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಸಿ.ಆರ್.ಪಿ ಧರ್ಮೇಂದ್ರ ಮತ್ತು ಶಿಕ್ಷಕ ಮಹೇಶ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಶಿಕ್ಷಕರಾದ ಎಂ.ಎಸ್ ಶೇಷಾದ್ರಿ ಮಹೇಶ್, ರಾಘವೇಂದ್ರ, ಬಸವರಾಜು, ನಂಜುಂಡ, ಬಲರಾಂ, ಗಿರೀಗೌಡ, ಲಿಯಾಖತ್, ಅಂಕೇಗೌಡ ಸೇರಿದಂತೆ ಶಾಲೆಯ ವಿದ್ಯಾರ್ಥಿ- ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

• ಉದಯವಾಹಿನಿ, ತುಮಕೂರು

ಸರ್ಕಾರದ ಮಾರ್ಗಸೂಚಿ ಪಾಲಿಸದ ಜಿಲ್ಲೆಯ 15 ಮಕ್ಕಳ ಪಾಲನಾ ಸಂಸ್ಥೆಗಳ ನೋಂದಣಿ ರದ್ದತಿಗೆ ಮಕ್ಕಳ ರಕ್ಷಣಾ ಘಟಕ ಮುಂದಾಗಿದೆ. ಬೀದಿ ಬದಿ ವ್ಯಾಪಾರ ನಡೆಸುವವರು, ಚಿಂದಿ ಆಯುವವರು, ಭಿಕ್ಷಾಟನೆಯಲ್ಲಿ ತೊಡಗಿಸಿಕೊಂಡವರು, ನಿರ್ಗತಿಕರು, ಪೋಷಕರಿಂದ ದೂರವಾದ ಮಕ್ಕಳ ಆರೈಕೆ ಮತ್ತು ರಕ್ಷಣೆಗಾಗಿ ಜಿಲ್ಲೆಯಲ್ಲಿ 20 ಮಕ್ಕಳ ಪಾಲನಾ ಸಂಸ್ಥೆಗಳನ್ನು ಪ್ರಾರಂಭಿಸಲಾಗಿತ್ತು.

ಇದರಲ್ಲಿ ಸರ್ಕಾರದ 2 ಸಂಸ್ಥೆಗಳು ಹೊರೆತು ಪಡಿಸಿದರೆ ಉಳಿದ ಎಲ್ಲವನ್ನು ಸ್ವಯಂ ಸೇವಾ ಸಂಸ್ಥೆಗಳು ನಡೆಸುತ್ತಿದ್ದವು. 18ರ ಪೈಕಿ 3 ಮಾತ್ರ ನಿಯಮಾನುಸಾರ ನಡೆಯುತ್ತಿವೆ. ಇಲ್ಲಿ ಮಕ್ಕಳಿಗೆ ಅಗತ್ಯ ಸೌಲಭ್ಯ ಕಲ್ಪಿಸಲಾಗುತ್ತಿದೆ. ಉಳಿದ 15 ಸಂಸ್ಥೆಗಳು ಬಾಲ ನ್ಯಾಯ ಕಾಯ್ದೆ-2006, ಬಾಲನ್ಯಾಯ ಕಾಯ್ದೆ (ಮಕ್ಕಳ ಪೋಷಣೆ ಮತ್ತು ರಕ್ಷಣೆ)-2010ರ ಮಾನದಂಡ ಪಾಲಿಸುತ್ತಿಲ್ಲ. ಇದರಿಂದಾಗಿ ಸಂಸ್ಥೆಗಳ ನೋಂದಣಿ ರದ್ದು ಪಡಿಸಲಾಗುತ್ತಿದೆ. ಮಕ್ಕಳ ರಕ್ಷಣಾ ಘಟಕದ ಅಧಿ ಕಾರಿಗಳು ಸಂಸ್ಥೆಗಳಿಗೆ ಭೇಟಿ ನೀಡಿ

15 ಮಕ್ಕಳ ಪಾಲನಾ ಸಂಸ್ಥೆಗಳ ನೋಂದಣಿ ರದ್ದು

ಉದಯವಾಹಿನಿ ಚಿತ್ರ

ಪರಿಶೀಲನೆ ನಡೆಸಿದ್ದಾರೆ. ವಾಸ್ತವ ಪರಿಸ್ಥಿತಿ ಕುರಿತು ಸರ್ಕಾರಕ್ಕೆ ವರದಿ ನೀಡಿದ್ದಾರೆ. 5 ಸಂಸ್ಥೆಗಳ ನೋಂದಣಿ ರದ್ದತಿ ಕೋರಿ ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಿದ್ದಾರೆ. ಉಳಿದ 10 ಸಂಸ್ಥೆಗಳ ನೋಂದಣಿ ರದ್ದತಿಗೂ ಕ್ರಮ ವಹಿಸಿದ್ದಾರೆ. ವಾಕ್ ಮತ್ತು ಶ್ರವಣ ದೋಷ, ದೃಷ್ಟಿದೋಷ, ಅಂಗವಿಕಲರು, ತಂದೆ, ತಾಯಿ ಇಲ್ಲದ ಮಕ್ಕಳಿಗೂ ಪಾಲನಾ ಸಂಸ್ಥೆಗಳಲ್ಲಿ ಆಶ್ರಯ ಕಲ್ಪಿಸಲಾಗುತ್ತಿದೆ. ಮಕ್ಕಳಿಗೆ ಊಟ, ವಸತಿ, ಬಟ್ಟೆಯ ಜತೆಗೆ ಶಿಕ್ಷಣ ನೀಡಲಾಗುತ್ತದೆ. ಅವರು ಉತ್ತಮ ಹಾದಿಯಲ್ಲಿ ಸಾಗಲು ಅಗತ್ಯ ಸಲಹೆ, ಸಮಾಲೋಚನೆ, ಮಾರ್ಗದರ್ಶನ ಮಾಡಲಾಗುತ್ತದೆ.

ನೋಂದಣಿ ಕಡ್ಡಾಯ

ಮಕ್ಕಳ ಪಾಲನಾ ಸಂಸ್ಥೆಗಳು ಸರ್ಕಾರದ ಅನುದಾನ ಪಡೆಯಲು ಕಡ್ಡಾಯವಾಗಿ ಬಾಲನ್ಯಾಯ ಕಾಯ್ದೆಯಡಿ ನೋಂದಾಯಿಸಿಕೊಳ್ಳಬೇಕು. ನೋಂದಣಿಯಾದ ನಂತರ ಸರ್ಕಾರದ ಮಾರ್ಗಸೂಚಿ ಪಾಲಿಸಬೇಕು. ಇಲ್ಲದಿದ್ದರೆ ಸಂಸ್ಥೆಗಳ ವಿರುದ್ಧ ಕ್ರಮಕೈಗೊಳ್ಳಲಾಗುತ್ತದೆ. ಮಕ್ಕಳ ರಕ್ಷಣಾ ಘಟಕದ ಸಮಿತಿಯಿಂದ ಪರಿಶೀಲನೆ ನಡೆಸಿ ಸರ್ಕಾರಕ್ಕೆ ವರದಿ ನೀಡಲಾಗಿದೆ. ದಿನೇಶ್ ಮಕ್ಕಳ ರಕ್ಷಣಾಧಿಕಾರಿ ಮಕ್ಕಳ ರಕ್ಷಣಾ ಘಟಕ.

ದಸರಾ: ಕಲಾವಿದರಿಗೆ ಸಿಗದ ಸಂಭಾವನೆ

• ಉದಯವಾಹಿನಿ,

ಅಂತರಾಳದಿಂದ... EDITORIAL

ಕರುನಾಡಿಗೆ ಕಪ್ಪು ಚುಕ್ಕೆ

ಶ್ರೀಗ್ಗಾವಿ, ಚನ್ನಪಟ್ಟಣ, ಸಂಡೂರು ಉಪಚುನಾವಣೆ ಕೊನೆಗೂ ಮುಕ್ತಾಯಗೊಂಡಿದೆ. ಯಾವ ಸಾರ್ವತ್ರಿಕ ಚುನಾವಣೆಗೂ ಕಡಿಮೆಯಿಲ್ಲದಂತೆ ಈ ಮೂರು ಕ್ಷೇತ್ರದ ಉಪಚುನಾವಣೆಗೆ ಸಂಬಂಧಿಸಿದಂತೆ ಪ್ರಚಾರಗಳನ್ನು ಬಿಜೆಪಿ, ಕಾಂಗ್ರೇಸ್, ಜೆಡಿಎಸ್ ನಡೆಸಿದವು. ಎದ್ದು ನಿಲ್ಲಲೂ ಸಾಧ್ಯವಿಲ್ಲದ ಮಾಜಿ ಪ್ರಧಾನಿ ದೇವೇಗೌಡರನ್ನು ತಂದು ವೇದಿಕೆಯಲ್ಲಿ ಕುಳ್ಳಿರಿಸಿ ಅವರಿಂದ ಪ್ರಚಾರ ಮಾಡಿಸಿರುವುದೇ ಈ ಚುನಾವಣೆ ಕುಮಾರಸ್ವಾಮಿ ಅವರಿಗೆ ಎಷ್ಟು ಮಹತ್ವದ್ದು ಎನ್ನುವುದನ್ನು ಹೇಳುತ್ತದೆ. ನಿಖಿಲ್ ಕುಮಾರಸ್ವಾಮಿಯ ರಾಜಕೀಯ ಭವಿಷ್ಯ ಈ ಉಪಚುನಾವಣೆಯ ಸೋಲು ಗೆಲುವಿನ ಮೇಲೆ ನಿಂತಿದೆ. ಲೈಂಗಿಕ ಹಗರಣಗಳ ಕಳಂಕದಿಂದ ತಲೆ ಎತ್ತಲಾಗದ ಸ್ಥಿತಿಯಲ್ಲಿರುವ ದೇವೇಗೌಡರ ಕುಟುಂಬ ಕಳೆದುಕೊಂಡ ಮಾನ, ಮರ್ಯಾದೆಯನ್ನು ಚನ್ನಪಟ್ಟಣ ಚುನಾವಣೆಯ ಫಲಿತಾಂಶದಲ್ಲಿ ಹುಡುಕುತ್ತಿದೆ. ಇದೇ ಸಂದರ್ಭದಲ್ಲಿ ಚೆನ್ನಪಟ್ಟಣದಲ್ಲಿ ಯಾರೇ ನಿಂತರೂ ಅದು ನಾನು ಸ್ಪರ್ಧಿಸಿದಂತೆ ಎಂದು ಘೋಷಿಸಿಕೊಂಡಿರುವ ಡಿ.ಕೆ. ಶಿವಕುಮಾರ್ ಅವರಿಗೂ ಈ ಚುನಾವಣೆ ಪ್ರತಿಷ್ಠೆಯ ವಿಷಯವಾಗಿದೆ. ಒಕ್ಕಲಿಗರನ್ನು ತನ್ನ ಒಕ್ಕಲು ಮಾಡಿಕೊಳ್ಳಲು ಸಂಚು ಹಾಕಿರುವ ಆರೆಸ್ಸೆಸ್‌ಗೂ ಚನ್ನಪಟ್ಟಣದಲ್ಲಿ ಜೆಡಿಎಸ್ ಗೆಲ್ಲಬೇಕಾಗಿದೆ. ಆದುದರಿಂದಲೇ, ಉಪ ಚುನಾವಣಾ ಪ್ರಚಾರದುದ್ದಕ್ಕೂ ಕೆಸರೆರಚಾಟ ಅತಿರೇಕವನ್ನು ತಲುಪಿತು. ನಿಂದನೆಗಳು ವೈಯಕ್ತಿಕ ಮಟ್ಟಕ್ಕೆ ಇಳಿದವು. ಚುನಾವಣಾ ಪ್ರಚಾರದ ಕೊನೆಯ ದಿನ ಕಾಂಗ್ರೇಸ್ ಮುಖಂದ ಝಮೀರ್ ಅಹ್ಮದ್ ಅವರು ಕುಮಾರಸ್ವಾಮಿಯವರನ್ನು ಸಾರ್ವಜನಿಕವಾಗಿ ಕರಿಯ' ಎಂದು ಕರೆಯುವ ಮೂಲಕ ಪ್ರಚಾರದ ಮಟ್ಟವನ್ನು ಪಾತಾಳಕ್ಕೆ ಇಳಿಸಿದರು. ಸ್ವತಃ ತನ್ನ ಧರ್ಮದ ಕಾರಣಕ್ಕಾಗಿ ಬೇರೆ ಬೇರೆ ರೀತಿಯ ಜನಾಂಗೀಯ ನಿಂದನೆಗಳನ್ನು ಎದುರಿಸುತ್ತಿರುವ ಝಮೀರ್ ಅಹ್ಮದ್ ಅವರು, ಬಣ್ಣವನ್ನು ಮುಂದಿಟ್ಟುಕೊಂಡು ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿಯನ್ನು ಹೀಯಾಳಿಸಿರುವುದು ಉಪಚುನಾವಣೆಯ ಪ್ರಚಾರಕ್ಕೆ ಬಹುದೊಡ್ಡ ಕಪ್ಪು ಚುಕ್ಕೆ ಇದು ಭಾರೀ ಟೀಕೆ, ಪ್ರತಿ ಟೀಕೆಗೆ ಕಾರಣವಾಯಿತು. ಬಿಜೆಪಿಯ ನಾಯಕರು ಝಮೀರ್ ಹೇಳಿಕೆಯನ್ನು ಖಂಡಿಸುವ ಭರದಲ್ಲಿ ಇನ್ನಷ್ಟು ಕೆಳಮಟ್ಟಕ್ಕೆ ಇಳಿದರು. ಮಾಧ್ಯಮಗಳು ಕೂಡ ಈ ಕರಿಯ' ಹೇಳಿಕೆಗೆ ಭಾರೀ ಪ್ರಚಾರವನ್ನು ನೀಡಿ ಕಾಂಗ್ರೇಸ್ ಪಕ್ಷದ ನಾಯಕರಿಗೆ ಮುಜುಗರವನ್ನುಂಟು ಮಾಡಿದವು. ಝಮೀರ್ ಅಹ್ಮದ್ ಅವರು ನನ್ನನ್ನು ಈ ಹಿಂದೆ ಕುಮಾರಸ್ವಾಮಿಯವರು 'ಕುಳ್ಳ ಎಂದು ವ್ಯಂಗ್ಯವಾಡುತ್ತಿದ್ದರು' ಪ್ರತಿ ಆರೋಪ ಮಾಡಿ, ತನ್ನ ಹೇಳಿಕೆಯನ್ನು ಸಮರ್ಥಿಸಿಕೊಳ್ಳುವ ಪ್ರಯತ್ನ ನಡೆಸಿದರು. ವೈಯಕ್ತಿಕವಾಗಿ ಭೇಟಿಯಾದಾಗ ಅತ್ಮೀಯತೆಯ ಭರದಲ್ಲಿ ಪರಸ್ಪರ 'ಕರಿಯ, ಕುಳ್ಳ ಎಂದೆಲ್ಲ ಕರೆದರೆ ಯಾರೂ ಅದನ್ನು ಪ್ರಶ್ನಿಸುವುದಿಲ್ಲ. ಆದರೆ ಝಮೀರ್ ಅವರು ಸಾರ್ವಜನಿಕವಾಗಿ ಕುಮಾರಸ್ವಾಮಿಯವರನ್ನು ಟೀಕಿಸುವ ಸಂದರ್ಭದಲ್ಲಿ ಈ ಪದವನ್ನು ಬಳಸಿದ್ದಾರೆ. ಆದುದರಿಂದ, ಇದನ್ನು ಹಗುರವಾಗಿ ತೆಗೆದುಕೊಳ್ಳುವಂತಿಲ್ಲ ಬಹುಷಃ ಪಕ್ಷದೊಳಗೆ ವರಿಷ್ಠರ ಭೀಮಾರಿಯ ಬಳಿಕ ಝಮೀರ್ ಅವರಿಗೆ ತಪ್ಪಿನ ಅರಿವಾಗಿದ್ದು, ಈ ಬಗ್ಗೆ ಕ್ಷಮೆಯಾಚಿಸಿದ್ದಾರೆ.

ಝಮೀರ್ ಅವರು ಬಳಸಿದ 'ಕರಿಯ' ಪದವನ್ನು ಈ ಹಿಂದೆ ಬೇರೆ ಬೇರೆ ಸಂದರ್ಭಗಳಲ್ಲಿ ವಿರೋಧ ಪಕ್ಷಗಳ ನಾಯಕರು ನಿಂದನೆಯ ರೂಪದಲ್ಲಿ ಎದುರಾಳಿ ನಾಯಕರ ವಿರುದ್ಧ ಬಳಸಿದ್ದಾರೆ. ಅದಿವಾಸಿಗಳು, ದಲಿತರನ್ನು ಅವರ ಬಣ್ಣದ ಕಾರಣಕ್ಕಾಗಿಯೇ ಶತಶತಮಾನಗಳಿಂದ ಶೋಷಿಸುತ್ತಾ ಬಂದಿರುವ ಸಮಾಜ ನಮ್ಮದು ಬಣ್ಣದ ಆಧಾರದಲ್ಲಿ ಮನುಷ್ಯನ ವ್ಯಕ್ತಿತ್ವವನ್ನು ಅಳೆಯುವ ಮನಸ್ಥಿತಿ ಇಲ್ಲಿ ಇನ್ನೂ ಜೀವಂತವಿದೆ. 'ಕರಿಯ' ಎಂಬ ಪದ ಬಳಸಿದ್ದಕ್ಕಾಗಿ ಝಮೀರ್ ಅಹ್ಮದ್ ಅವರನ್ನು ಟೀಕಿಸಿರುವ ಇದೇ ಬಿಜೆಪಿ ನಾಯಕರು ಈ ಹಿಂದೆ ಮಾಜಿ ಸಚಿವ ಆರಗ ಜ್ಞಾನೇಂದ್ರ ಅವರು ಮಲ್ಲಿಕಾರ್ಜುನ ಖರ್ಗೆ ಅವರ ಬಣ್ಣವನ್ನು ಉಲ್ಲೇಖಿಸಿ ನಿಂದಿಸಿದಾಗ ಮೌನವಾಗಿ ಸಮರ್ಥಿಸಿದ್ದರು. ಕಸ್ತೂರಿ ರಂಗನ್ ವರದಿಯನ್ನು ವಿರೋಧಿಸುವ ಭರದಲ್ಲಿ ಇಡೀ ಉತ್ತರ ಕರ್ನಾಟಕದ ಜನರನ್ನೇ ಅವರ ಬಣ್ಣವನ್ನು ಮುಂದಿರಿಸಿ ಜ್ಞಾನೇಂದ್ರ ನಿಂದಿಸಿದ್ದರು. 'ಉತ್ತರ ಕರ್ನಾಟಕದ ಜನರಿಗೆ ಹಸಿರು, ಕಾಡಿನ ಬಗ್ಗೆ ಏನು ಗೊತ್ತು? ಅವರು ಬಿಸಿಲಿನಲ್ಲಿ ಸುಟ್ಟು ಕರಕಲಿನಂತಿರುತ್ತಾರೆ. ಖರ್ಗೆಯವರನ್ನು ನೋಡಿದರೇ ಗೊತ್ತಾಗುತ್ತದೆ ಅವರ ತಲೆಯ ಮೇಲಿನ ಬಿಳಿಕೂದಲಿನಿಂದ ಅವರನ್ನು ಗುರುತು ಹಿಡಿಯಬಹುದು ಅಷ್ಟೇ. 'ಎಂದು ಹೇಳುವ ಮೂಲಕ, ಉತ್ತರ ಕರ್ನಾಟಕದ ಜನರ ವ್ಯಾಪಕ ಆಕ್ರೋಶಕ್ಕೆ ಗುರಿಯಾಗಿದ್ದರು. ಈ ಮೂಲಕ ಮಾಜಿ ಸಚಿವ ಆರಗ ಜ್ಞಾನೇಂದ್ರ ಅವರು ಉತ್ತರ ಕರ್ನಾಟಕದ ಬಗ್ಗೆ ಎಂತಹ ಮನಸ್ಥಿತಿಯನ್ನು ಹೊಂದಿದ್ದರು ಎನ್ನುವುದು ಬೆಳಕಿಗೆ ಬಂದಿತ್ತು. ಆಗ ಇವರ ವಿರುದ್ಧ ಯಾವುದೇ ಕ್ರಮ ತೆಗೆದುಕೊಳ್ಳದ ಬಿಜೆಪಿ ಆಳದಲ್ಲಿ ಜನರನ್ನು ಬಣ್ಣದ ಆಧಾರದಿಂದಲೇ ವಿಂಗಡಿಸುತ್ತಾ ಬಂದಿದೆ. ಜಾತೀಯತೆಯೂ ಬಣ್ಣದ ತಳಹದಿಯ ಮೇಲೆಯೇ ನಿಂತಿದೆ ಎನ್ನುವುದನ್ನು ಪ್ರತ್ಯೇಕವಾಗಿ ವಿವರಿಸಬೇಕಾಗಿಲ್ಲ. ಈ ಹಿಂದೆ ಇದೇ ಬಿಜೆಪಿ ಐಟಿ ಸೆಲ್‌ಗಳು ಕುಮಾರಸ್ವಾಮಿಯವರನ್ನು 'ಕರಿ ಇಡ್ಲಿ' ಎಂದು ಟ್ರೋಲ್ ಮಾಡಿತ್ತು. ಆಗಲೂ ಬಿಜೆಪಿ ನಾಯಕರಿಗೆ ಅದು ತಪ್ಪು ಅನ್ನಿಸಿರಲಿಲ್ಲ, ಯಾವಾಗ ಕುಮಾರಸ್ವಾಮಿಯವರು ಬಿಜೆಪಿಯ ಜೊತೆಗೆ ಕೈ ಜೋಡಿಸಿದರೋ ಅಲ್ಲಿಂದ, ಕುಮಾರಸ್ವಾಮಿಯ ಬಣ್ಣದ ಬಗ್ಗೆ ಬಿಜೆಪಿಗೆ ಅನುಕಂಪ ಬಂದು ಬಿಟ್ಟಿದೆ. 'ಕರಿಯ' ಪದವನ್ನು ಮುಂದಿಟ್ಟುಕೊಂಡು ಚರ್ಚೆ ನಡೆಸುತ್ತಿರುವ ಮಾಧ್ಯಮದಲ್ಲಿರುವ ಮಂದಿ ಕೂಡ ಬಣ್ಣದ ಕುರಿತಂತೆ ಪೂರ್ವಾಗ್ರಹದಲ್ಲಿ ಹಿಂದೆ ಬಿದ್ದಿಲ್ಲ. ಕನ್ನಡದ ಹಿರಿಯ ಪತ್ರಕರ್ತರೊಬ್ಬರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಬಣ್ಣವನ್ನು ಕಾಗೆಗೆ ಹೋಲಿಸಿ ನಿಂದಿಸಿದ್ದರು. ಮರುಭೂಮಿಯಲ್ಲಿ ನಿಂತರೆ ಥೇಟು ಸುಟ್ಟು ಕರಕಲಾದ ಕಾಗೆ. ಮುರ್ಮು ಅವತಾರ. ಎಂದು ಬರೆದು ರಾಷ್ಟ್ರೀಯ ಮಹಿಳಾ ಆಯೋಗದಿಂದ ನೋಟಿಸ್ ಪಡೆದಿದ್ದರು. ಆ ಬಳಿಕ ಅವರು ಬೇಷರತ್ ಕ್ಷಮೆಯಾಚನೆ ಮಾಡುವ ಸ್ಥಿತಿ ನಿರ್ಮಾಣವಾಯಿತು. ನಮ್ಮ ಸಮಾಜ ಎಷ್ಟರಮಟ್ಟಿಗೆ ಜಾತೀಯವಾಗಿದೆ ಎನ್ನುವುದಕ್ಕೆ ಇದು ಉದಾಹರಣೆಯಾಗಿದೆ.

ಎರಡು ಕ್ಷೇತ್ರಗಳಲ್ಲಿ ಮಾಜಿ ಮುಖ್ಯಮಂತ್ರಿಗಳ ಸುಪುತ್ರರು ಸ್ಪರ್ಧಿಸುತ್ತಿರುವುದರಿಂದಲೋ ಏನೋ, ಈ ಬಾರಿಯ ಉಪಚುನಾವಣೆ ಮೂರು ಪಕ್ಷಗಳಿಗೂ ಪ್ರತಿಷ್ಠೆಯ ಪ್ರಶ್ನೆಯಾಗಿದೆ. ಉಪ ಚುನಾವಣೆಯ ಸೋಲು ಗೆಲುವನ್ನು ಸಿದ್ದರಾಮಯ್ಯ ನೇತೃತ್ವದ ಸರಕಾರಕ್ಕೆ ಅಳತೆಗೋಲನ್ನಾಗಿ ಬಳಸಲು ವಿರೋಧ ಪಕ್ಷ ಸಿದ್ಧತೆಯನ್ನು ಮಾಡುತ್ತಿದ್ದರೆ, ಬಿಜೆಪಿಯ ಆರೋಪಗಳಿಗೆ ಸಮರ್ಥವಾಗಿ ಉತ್ತರವನ್ನು ನೀಡಲು ಈ ಚುನಾವಣೆಯನ್ನು ಗೆಲ್ಲಲೇ ಬೇಕು ಎನ್ನುವ ಸ್ಥಿತಿಗೆ ಬಂದು ನಿಂತಿದೆ ಕಾಂಗ್ರೇಸ್, ಚನ್ನಪಟ್ಟಣದಲ್ಲಿ ತನ್ನ ಮಗನನ್ನು ಗೆಲ್ಲಿಸುವುದಕ್ಕಾಗಿ ಕುಮಾರಸ್ವಾಮಿಯವರು ಸಕಲ ಪ್ರಯತ್ನಗಳನ್ನು ಮಾಡಿದ್ದಾರೆ.

ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಶಾಲೆಯನ್ನು ವಿದ್ಯೆಯ ದೇಗುಲವೆಂದು ತಿಳಿದು ಆದರ್ಶವಾಗಿ ವರ್ತಿಸಿ..!

ವಿದ್ಯಾರ್ಥಿ ದೆಸೆಯಲ್ಲಿರುವಾಗ ನಮ್ಮ ಹೆಚ್ಚಿನ ಸಮಯವು ಶಾಲೆ ಹಾಗೂ ಶಿಕ್ಷಣದೊಂದಿಗೆ ಹೊಂದಿಕೊಂಡಿರುತ್ತದೆ. ಶಾಲೆಯು ವಿದ್ಯೆಯ ದೇಗುಲವಾಗಿದ್ದು ಸಂಸ್ಕಾರದ ಒಂದು ಮಹತ್ವದ ಮಾಧ್ಯಮವಾಗಿದೆ ಆದುದರಿಂದಲೇ ಮಕ್ಕಳು ಈ ಕಾಲಾವಧಿಯಲ್ಲಿ ಪ್ರತಿಯೊಂದು ಅಂಶವನ್ನು ವ್ಯವಸ್ಥಿತವಾಗಿ ಪಾಲಿಸಿದರೆ ನಿಮ್ಮ ಮುಂದಿನ ಜೀವನವು ಶಿಸ್ತುಬದ್ಧವಾಗಿ ನೀವು ಆದರ್ಶ ವ್ಯಕ್ತಿಗಳಾಗುತ್ತೀರಿ

ಶಾಲೆಯಲ್ಲಿ ವರ್ತನೆಯು ಹೀಗಿರಬೇಕು

ಸೈಕಲ್‌ನ್ನು ನಿಗದಿತ ಸ್ಥಳದಲ್ಲಿ ಸಾಲಿನಲ್ಲಿ ನಿಲ್ಲಿಸಿ ಚೀಲವನ್ನು ತರಗತಿಯಲ್ಲಿ ಇಡಬೇಕು.

ಶಾಲೆಯ ಮೈದಾನದಲ್ಲಿ ಪ್ರಾರ್ಥನೆಗಾಗಿ ಸೇರುವಾಗ ತರಗತಿಯಿಂದ ಸಾಲಿನಲ್ಲಿ ಬರಬೇಕು ಹಾಗೂ ಸಾಲಿನಲ್ಲಿ ನಿಲ್ಲಬೇಕು. ಪ್ರಾರ್ಥನೆಯ ನಂತರವೂ ತರಗತಿಗೆ ಸಾಲಿನಲ್ಲಿಯೇ ಹೋಗಬೇಕು.

ತರಗತಿಗೆ ಹೋದ ನಂತರ ವಾಸ್ತುದೇವತೆ, ಸ್ಥಾನ ದೇವತೆ ಅಂತೆಯೇ ವಿದ್ಯಾದೇವರಾದ ಶ್ರೀ ಗಣೇಶ ಹಾಗೂ ಶ್ರೀ ಸರಸ್ವತೀ ದೇವಿಯನ್ನು ಮನಸ್ಸಿನಲ್ಲಿಯೇ ವಂದಿಸಿ 'ನಿಮ್ಮ ಕೃಪೆಯಿಂದ ನನಗೆ ಈ ವಾಸ್ತುವಿನಲ್ಲಿ ಜ್ಞಾನಗ್ರಹಣ ಮಾಡುವ ಅವಕಾಶ ದೊರೆತಿದೆ. ಇಂದು ಕಲಿಸಲಾಗುವ ಎಲ್ಲಾ ವಿಷಯಗಳನ್ನು ಏಕಾಗ್ರತೆಯಿಂದ ಗ್ರಹಿಸುವಂತಾಗಲಿ' ಎಂದು ಪ್ರಾರ್ಥಿಸಬೇಕು.

ಪ್ರತಿಯೊಂದು ವಿಷಯದ ಅವಧಿಯು ಪ್ರಾರಂಭವಾಗುವಾಗ ಕುಲದೇವತೆ ಅಥವಾ ಉಪಾಸ್ಯ ದೇವತೆಗೆ, 'ನನಗೆ ನಿಮ್ಮ ರೂಪವು ಶಿಕ್ಷಕರಲ್ಲಿ ಕಂಡು ಬರಲಿ ಹಾಗೂ ಈಗ ಅವರು ತರಗತಿಯಲ್ಲಿ ಏನು ಕಲಿಸುವವರಿದ್ದಾರೆಯೋ ಅದು ನನಗೆ ಸರಿಯಾಗಿ ಅರ್ಥವಾಗಲಿ ಎಂದು ಪ್ರಾರ್ಥಿಸಬೇಕು.

5. ತರಗತಿಯು ನಡೆಯುತ್ತಿರುವಾಗ ಶಿಕ್ಷಕರಲ್ಲಿ ಏನಾದರೂ ಕೇಳುವುದಿದ್ದರೆ ದೊಡ್ಡ ಧ್ವನಿಯಲ್ಲಿ ಕೇಳದೇ ಕೈ ಮೇಲೆ ಮಾಡಬೇಕು. ಶಿಕ್ಷಕರು ಕೇಳಲು ಹೇಳಿದಾಗ ಆ ಪ್ರಶ್ನೆಯನ್ನು ನಮ್ರತೆಯಿಂದ ಕೇಳಬೇಕು.

6. ಅವಧಿಯು ಮುಗಿಯುವಾಗ ದೇವತೆಯ ಚರಣದಲ್ಲಿ 'ನಿಮ್ಮ ಕೃಪೆಯಿಂದ ನನಗೆ ಶಿಕ್ಷಕರು ಕಲಿಸಿದ ವಿಷಯವು ತಿಳಿಯಿತು. ಅದಕ್ಕಾಗಿ ನಾನು ನಿಮ್ಮ ಚರಣಗಳಲ್ಲಿ ಕೃತಜ್ಞನಾಗಿದ್ದೇನೆ' ಎಂದು ಕೃತಜ್ಞತೆಯನ್ನು ವ್ಯಕ್ತಪಡಿಸಬೇಕು. ಕಾಗದದ ತುಂಡು, ಸೀಸದ ತುದಿಯನ್ನು ಮೊನಚು ಗೊಳಿಸಿದ ನಂತರ ಬರುವ ಕಸ, ರಬ್ಬರ್‌ನಿಂದ ಒರೆಸಿದಾಗ ಬರುವ ಕಸ ಅಥವಾ ಇತರ ಕಸವನ್ನು ತರಗತಿಯಲ್ಲಿ ಎಲ್ಲಿಯೂ ಹಾಕದೇ ಕಸದ ಬುಟ್ಟಿಯಲ್ಲಿ ಹಾಕಬೇಕು. ತರಗತಿ ಹಾಗೂ ಶಾಲೆಯ ಆವರಣವನ್ನು ಯಾವಾಗಲೂ ಸ್ವಚ್ಛವಾಗಿಡಬೇಕು. ಮಿತ್ರರೊಂದಿಗೆ ಆತ್ಮೀಯತೆಯಿಂದ ಹಾಗೂ ಪ್ರೇಮದಿಂದ ವರ್ತಿಸಬೇಕು. ಅವರಿಗೆ ಯಾವಾ ಗಲೂ ಸಹಾಯ ಮಾಡಬೇಕು.

ಶಾಲೆಯ ಎಲ್ಲಾ ಶಿಕ್ಷಕ ಹಾಗೂ ಸಿಬ್ಬಂದಿ ವರ್ಗ, ಅಂತೆಯೇ ಕಾವಲುಗಾರರೊಂದಿಗೆ ಗೌರವದಿಂದ ವರ್ತಿಸಬೇಕು.

ಮಕ್ಕಳೇ, 'ಶಾಲೆಯು ವಿದ್ಯಾದೇವತೆಯಾದ ಶ್ರೀ ಸರಸ್ವತೀ ದೇವಿಯ ದೇವಸ್ಥಾನವಾಗಿದೆ' ಎಂಬ ಭಾವ ವಿಟ್ಟು ಈ ವಿದ್ಯಾಮಂದಿರದ ಪಾವಿತ್ರ್ಯವನ್ನು ರಕ್ಷಿಸಿರಿ. ಇದರಿಂದ ಸರಸ್ವತೀ ದೇವಿಯು ಪ್ರಸನ್ನರಾಗುವರು ಹಾಗೂ ನಿಮಗೆ ಉತ್ತಮ ವಿದ್ಯೆಯು ಲಭಿಸುವುದು !

ಶಾಲೆಯಲ್ಲಿನ ವರ್ತನೆಯು ಹೀಗಿರಬಾರದು !

- ಅನುಪಸ್ಥಿತರಿರುವ ಮಿತ್ರರ ಹಾಜರಿಯನ್ನು ಹೇಳಬಾರದು.
- ತರಗತಿಯು ನಡೆಯುತ್ತಿರುವಾಗ ಚಾಕಲೇಟ್ ಅಥವಾ ಇತರ ಪದಾರ್ಥಗಳನ್ನು ತಿನ್ನಬಾರದು.
- ಎರಡು ಅವಧಿಯ ನಡುವೆ ಇರುವ ಸಮಯದಲ್ಲಿ ಗಲಾಟೆ ಮಾಡಬಾರದು.
- ತರಗತಿಯಲ್ಲಿನ ಮಕ್ಕಳನ್ನು ಪೀಡಿಸುವುದು, ಹೊಡೆಯುವುದು, ಅವರ ಬಟ್ಟೆಗಳ ಮೇಲೆ ಶಾಯಿಯ ಗೆರೆ ಎಳೆಯುವಂತಹ ತೊಂದರೆ ಕೊಡಬಾರದು.
- ಶಿಕ್ಷಕರ ಬಳಿ ಯಾರ ಬಗ್ಗೆಯೂ ಸುಳ್ಳು ದೂರುಗಳನ್ನು ಹೇಳಬಾರದು.
- ಪಠ್ಯ ಪುಸ್ತಕಗಳ ಮೇಲೆ ಶಾಯಿಯ ಕಲೆ ಬೀಳಬಾರದು. ಅಂತೆಯೇ ಪಠ್ಯಗಳ ಹಾಗೂ ಪುಸ್ತಕಗಳಲ್ಲಿನ ಚಿತ್ರಗಳ ಮೇಲೆ ಮೀಸೆ ಗಡ್ಡ ಬಿಡಿಸಿ ವಿದ್ರೂಪಗೊಳಿಸಬಾರದು.
- ತರಗತಿಯ ಗೋಡೆಗಳ ಮೇಲೆ, ಮೇಜಿನ ಮೇಲೆ ಹೆಸರು ಬರೆಯುವುದು ಅಥವಾ ಗೆರೆ ಎಳೆಯುವಂತಹ ಕೃತಿಗಳನ್ನು ಮಾಡಬಾರದು.
- ದೈಹಿಕ ತರಬೇತಿ (ಪಿ.ಟಿ) ತಪ್ಪಿಸಲು ಅನಾರೋಗ್ಯದ ಸುಳ್ಳು ಕಾರಣ ಹೇಳಬಾರದು.

ಶಾಲೆಯ ಮೈದಾನದಲ್ಲಿ ಪ್ರಾರ್ಥನೆ

ಉದಯವಾಹಿನಿ ಚಿತ್ರ

ವೈಷ್ಣೋದೇವಿಗೆ ಭೇಟಿ ನೀಡುವ ಯಾತ್ರಾರ್ಥಿಗಳಿಗೆ ಸಹಾಯಧನ ಘೋಷಣೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಜನತೆಗೆ ಸರ್ಕಾರ ಸಿಹಿ ಸುದ್ದಿ ಒಂದನ್ನು ನೀಡಿದ್ದು, ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿರ ಅಧ್ಯಕ್ಷತೆಯಲ್ಲಿ ನಿನ್ನೆ ನಡೆದ ಕರ್ನಾಟಕ ರಾಜ್ಯ ಧಾರ್ಮಿಕ ಪರಿಷತ್ತಿನಲ್ಲಿ ವೈಷ್ಣೋದೇವಿಗೆ ಭೇಟಿ ನೀಡುವ ಯಾತ್ರಾರ್ಥಿಗಳಿಗೆ ಸಹಾಯ ಧನ ಘೋಷಣೆ ಮಾಡಿದ್ದಾರೆ ಎಂದು ತಿಳಿದುಬಂದಿದೆ. ಹೌದು ಮುಜರಾಯಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಕರ್ನಾಟಕ ರಾಜ್ಯ ಧಾರ್ಮಿಕ ಪರಿಷತ್ತಿನಲ್ಲಿ ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಗಿದೆ. ಅವುಗಳಲ್ಲಿ ಪ್ರಮುಖ ಅಂಶಗಳು ಈ ಕೆಳಗಿನಂತಿವೆ.

ವೈಷ್ಣೋದೇವಿಗೆ ಭೇಟಿ ನೀಡುವ ಕರ್ನಾಟಕ ರಾಜ್ಯದ ಯಾತ್ರಾರ್ಥಿಗಳಿಗೆ ತಲಾ ರೂ. 5000/-ಗಳ ಸಹಾಯ ಧನ★ ನೀಡಲು ತೀರ್ಮಾನಿಸಲಾಯಿತು.

ಸರ್ಕಾರದ ಬಹುಮಹಡಿಗಳ ಕಟ್ಟಡದ ಎದುರು ಇರುವ ಮುಜರಾಯಿ ಇಲಾಖೆಗೆ ಸೇರಿದ 3/4 ಎಕರೆ

ಜಾಗದಲ್ಲಿ ರೂ. 10 ಕೋಟಿ ವೆಚ್ಚದಲ್ಲಿ ಧಾರ್ಮಿಕ ಸೌಧ ನಿರ್ಮಿಸಲು ತೀರ್ಮಾನಿಸಲಾಯಿತು.

120 ವರುಷಗಳ ಹಳೆಯದಾದ ಮೈಸೂರಿನ ಸಂಸ್ಕೃತ ಮಹಾರಾಜ ಕಾಲೇಜಿನ ಸಂಸ್ಥೆಯ ಸಂಪೂರ್ಣ ಜೀರ್ಣೋದ್ಧಾರ ಮಾಡಲು ಅಗತ್ಯ ವಿರುವ ಅನುದಾನ ಬಿಡುಗಡೆ ಮಾಡಲು ತೀರ್ಮಾನಿಸಲಾಯಿತು. ಮಕ್ಕಳಿಗೆ ನೀಡುತ್ತಿರುವ ವಿದ್ಯಾ ಸಹಾಯ ಧನಕ್ಕೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಈಗಾಗಲೇ ಮುಕ್ತಾಯವಾಗಿದ್ದು, ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳಿಗೆ ಅನುಕೂಲವಾಗುವಂತೆ ಡಿಸೆಂಬರ್ 31 ರವರೆಗೂ ಕಾಲಾವಕಾಶ ನೀಡಿ, ಇದರ ಸದುಪಯೋಗ ಪಡೆದುಕೊಳ್ಳಲು ಪ್ರಚಾರ ನೀಡುವಂತೆ ತೀರ್ಮಾನಿಸಲಾಯಿತು.

ಮುಜರಾಯಿ ಇಲಾಖೆಗೆ ಸೇರಿದ ದೇವಾಲಯದ ಆಸ್ತಿಯನ್ನು ಸರ್ವೆ ಮಾಡಿ, ಒತ್ತುವರಿ ತೆರವು ಮಾಡಿ ದಾಖಲೆ ಮಾಡಲು ಹಾಗೂ ಆಸ್ತಿಗಳನ್ನು ರಕ್ಷಿಸಲು★ ತೀರ್ಮಾನಿಸಲಾಯಿತು.

ಅವಧಿ ಮುಗಿಯುವ 14 ದೇವಾಲಯಗಳಿಗೆ ವ್ಯವಸ್ಥಾಪನಾ ಸಮಿತಿ ರಚಿಸಲು, ಅವಧಿ ಮುಗಿದ ನಂತರ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲು, ಅರ್ಜಿ ಸ್ವೀಕಾರವಾಗಿರುವ 28 ದೇವಾಲಯಗಳಿಗೆ ವ್ಯವಸ್ಥಾಪನಾ ಸಮಿತಿ ರಚಿಸಲು, ಅರ್ಜಿ ಸ್ವೀಕಾರವಾಗದೇ ಇರುವ 13 ದೇವಾಲಯಗಳಿಗೆ ಪುನಃ ಅರ್ಜಿ ಕರೆಯಲು ಬೇಲೂರು ಶ್ರೀ ಚನ್ನಕೇಶವ ದೇವಾಲಯದ ಖಾಲಿ ಇರುವ ವ್ಯವಸ್ಥಾಪನಾ ಸಮಿತಿಗೆ ಸದಸ್ಯರನ್ನು ನೇಮಕ ಮಾಡಲು ತೀರ್ಮಾನಿಸಲಾಯಿತು.

ಸಾಮಾಜಿಕ ಕಳಕಳಿ

ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

• ಉದಯವಾಹಿನಿ, ವಿಶೇಷ

ಹೋಗಬಾರದು ಹಸಿರು ಭೂಲೋಕವನು ಬಿಟ್ಟು
ಸಾಗುವಳಿ ಮಾಡುವರು ಬಡ ರೈತರು
ನೀಗಿಸುತ ದಾಹವನ್ನು ಜೀವಿಗಳ ಮನತಣಿಸಿ
ಬಾಗುವರು ತಾಯೆಂದು ಲಕ್ಷ್ಮಿ ದೇವಿ.....

ದಿನಕ್ಕೊಂದು ಮುಕ್ತಕ -25

ಭಾವಾರ್ಥ: ಹಸಿರು ನೀ ಭೂಲೋಕವನ ಬಿಟ್ಟು ಹೋಗಬೇಡ ಎಂದು ಪ್ರಾರ್ಥಿಸುತ್ತಿದ್ದಾರೆ. ರೈತರು ನಿನ್ನೆಡೆ ಬಂದು ಸಾಗುವಳಿ ಮಾಡಲು ಕಾಯುತ್ತಿದ್ದಾರೆ ಅವರೆಲ್ಲ ಬಡವರಾಗಿದ್ದ

ಆರೋಪ ಮಾಡುವುದು ಬಿಟ್ಟು ಮೊದಲು ಸತ್ಯಸತ್ಯತೆ ತಿಳಿದುಕೊಳ್ಳಿ

ಸಿದ್ದಸಿರಿ ಕಾರ್ಖಾನೆಯ ಕಾನೂನಾತ್ಮಕ ಅಡೆತಡೆಗಳನ್ನು ಮೊದಲು ಆಡಳಿತ ಮಂಡಳಿ ಸರಿಪಡಿಸಿಕೊಳ್ಳಲಿ: ಕೆಪಿಸಿಸಿ ಉಪಾಧ್ಯಕ್ಷ

• ಉದಯವಾಹಿನಿ, ಚಿಂಚೋಳಿ

ಪಟ್ಟಣದ ಸಿದ್ಧಸಿರಿ ಕಾರ್ಖಾನೆಯಲ್ಲಿ ಯಾರು ಕೂಡ ರಾಜಕೀಯ ಮಾಡಬಾರದು ಮೊದಲು ಕಾರ್ಖಾನೆಯ ಕಾನೂನಾತ್ಮಕ ಅಡೆತಡೆಗಳನ್ನು ಪರವಾನಿಗೆಗಳು ಪಡೆದುಕೊಂಡು ಸರಿಪಡಿಸಿಕೊಳ್ಳಬೇಕು ಅದನ್ನು ಬಿಟ್ಟು ಬೇರೆಯವರ ಮೇಲೆ ಆರೋಪ ಮಾಡುವುದು ಬಿಡಬೇಕು ಎಂದು ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್ ಹೇಳಿದರು.

ಪಟ್ಟಣದ ಕಾಂಗ್ರೇಸ್ ಪಕ್ಷದ ಕಛೇರಿಯಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದಸಿರಿ ಕಾರ್ಖಾನೆ ಮಂಡಳಿಯವರಿಗೆ ಗೋತ್ತಿದೆ ಯಾವ ಕಾರಣಕ್ಕೆ ಕಾರ್ಖಾನೆ ಬಂದ್ ಆಗಿದೆ ಎಂಬುವುದು ಮೊದಲು ಅದನ್ನು ಸರಿಪಡಿಸಿಕೊಳ್ಳಲ್ಲಿ, ಕೆಲವರು ಸುಖಸುಮ್ಮನೇ ಸಚಿವರ ಮೇಲೆ ಸರ್ಕಾರದ ಮೇಲೆ ಆರೋಪ ಮಾಡುವುದು ಬಿಟ್ಟು ಮೊದಲು ಸತ್ಯಸತ್ಯತೆ ತಿಳಿದುಕೊಳ್ಳಬೇಕು. ಸಿದ್ದಸಿರಿ ಕಾರ್ಖಾನೆಗೆ 1.50ಕೋಟಿ ದಂಡ ವಿಧಿಸಿದ ಸರ್ಕಾರ ಯಾವುದು ಯಾಕೆ ದಂಡ ವಿಧಿಸಿದೆ, ಯಾರು ನೋಟಿಸ್ ಕೊಟ್ಟಿದ್ದು ಕೇಂದ್ರ ಸರ್ಕಾರನಾ ರಾಜ್ಯ ಸರ್ಕಾರನಾ ಎಂಬುವುದು ಅರ್ಥ ಮಾಡಿಕೊಳ್ಳಬೇಕು, ಇಷ್ಟೆಲ್ಲಾ ದಂಡ ವಿಧಿಸಿದರೂ ಸಹ ಯಾವುದೇ ಪರವಾನಿಗೆ ಅನುಮತಿ ಪಡೆಯದೆ ಕಬ್ಬು ನುರಿಸಿದ್ದು ಯಾರ ತಪ್ಪು, ಕಾರ್ಖಾನೆ ಪುನಃ ಪ್ರಾರಂಬಿಸಿ ಅಂದರೆ ಹೇಗೆ ಸುಪ್ರೀಂಕೋರ್ಟ್ ನಲ್ಲಿರುವ ಪ್ರಕರಣ ಕಾನೂನಾತ್ಮಕವಾಗಿ ಇರುತ್ತದೆ ಕಾನೂನಿಗೆ ಎಲ್ಲಾರು ತಲೆ ಬಾಗಲೇಬೇಕು.

ಬೇರೆ ಕಾರ್ಖಾನೆಗೆ ಸಿದ್ದಸಿರಿ ಕಾರ್ಖಾನೆಗೆ ಹೊಲಿಸಬಾರದು ಏಕೆಂದರೆ ಸಿದ್ದಸಿರಿ ಕಂಪನಿ ಗ್ರೇಡ್1ರಲ್ಲಿದೆ ಹೀಗೆ ಗ್ರೇಡ್ ಒಂದು ಎರಡು ಮೂರು ಇರುತ್ತದೆ ಅದರ ಅರ್ಹತೆ ತಕ್ಕಂತೆ ಪರವಾನಿಗಳು ಪಡೆದುಕೊಳ್ಳಬೇಕಾಗುತ್ತದೆ, ಹಾಗಾಗಿ ಸಿದ್ದಸಿರಿ ಕಂಪನಿ ಗ್ರೇಡ್1 ಒಂದರಲ್ಲಿ ಬರುವುದರಿಂದ ಎಲ್ಲಾ ದಾಖಲಾತಿಗಳು ಪಡೆದುಕೊಂಡರೆ ಯಾರು ಅಡೆತಡೆಗಳು ಮಾಡುವ ಪ್ರೇಶ್ನೆ ಉದ್ಭವಿಸುವುದಿಲ್ಲಾ ಇಸಿ ಇಲ್ಲದೆ ಯಾವ ಕಾರ್ಖಾನೆ ಪ್ರಾರಂಭ ಮಾಡಿತ್ತಾರೆ ಎಂದು ಪ್ರೇಶ್ನಿಸಿದರು.

ತರಾತುರಿಯಲ್ಲಿ ಕಾರ್ಖಾನೆ ಪ್ರಾರಂಭಿಸಿ ಯಾವುದೇ ಕಾನೂನಾತ್ಮಕ ಪರವಾನಿಗೆ ಪಡೆಯದೆ ತಪ್ಪು ಮಾಡಿದ್ದು ಮೊದಲು ಕಾರ್ಖಾನೆ ಮಂಡಳಿ ಯವರು ಹಾಗಾಗಿ ಕಂಪನಿಗೆ ಬೇಕಾಗುವ ಎಲ್ಲಾ ದಾಖಲಾತಿಗಳು ಸರಿಪಡಿಸಿಕೊಂಡರೆ ಸಾಕು ರೈತರಿಗೆ ಅನುಕೂಲವಾಗುತ್ತದೆ ಎಂದರು.

ಬಾಬುರಾವ ಪಾಟೀಲ, ಬಸವರಾಜ ಮಾಲಿ, ಲಕ್ಷ್ಮಣ ಆವುಂಟಿ, ಶರಣುಪಾಟೀಲ ಮೋತಕಪಳ್ಳಿ, ಆನಂದಕುಮಾರ ಟೈಗರ್, ಸಂತೋಷ ಗುತ್ತೇದಾರ, ಖಲೀಲ್ ಪಟೇಲ, ಅನ್ವರ್ ಖತೀಬ್, ರಾಮಶೇಟ್ಟಿ ಪವ್ಹಾರ, ಡಾ.ತುಕ್ಕರಾಮ ಪವ್ಹಾರ, ಅನೇಕರಿದ್ದರು.

ಧರಣಿ ಸತ್ಯಾಗ್ರಹಕ್ಕೆ ಭೇಟಿ: ಸಿದ್ಧಸಿರಿ ಕಾರ್ಖಾನೆ ಪುನಃ ಆರಂಭಕ್ಕೆ ರೈತರ ಬೆಳೆದ ಕಬ್ಬು ಖರೀದಿಸುವಂತೆ ಒತ್ತಾಯಿಸಿ ತಾಲ್ಲೂಕಾ ರೈತ ಹಿತರಕ್ಷಣಾ ಸಂಘದ ವತಿಯಿಂದ ನಡೆಸುತ್ತಿರುವ ಉಪವಾಸ ಸತ್ಯಾಗ್ರಹ ಸ್ಥಳಕ್ಕೆ ಕಾಂಗ್ರೇಸ್ ಮುಖಂಡ ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್ ಭೇಟಿಯಾಗಿ ರೈತರಿಗೆ ಬೆಂಬಲ ಸೂಚಿಸಿದರು.

ಅವರ ಪರವಾಗಿ ಮಾತನಾಡಿ ಈಗಾಗಲೇ ಸರ್ಕಾರ ಕಲಬುರ್ಗಿ ಉಸ್ತುವಾರಿ ಸಚಿವರು ಅರಣ್ಯ ಸಚಿವರು ವೈದ್ಯಕೀಯ ಶಿಕ್ಷಣ ಸಚಿವರುಗಳು ಮುತುವರ್ಜಿ ವಹಿಸಿ ರೈತರು ಬೆಳೆದ ಕಬ್ಬು ಆಯಾ ಪ್ರದೇಶಕ್ಕೆ ಸಮೀಪವಿರುವ ಕಾರ್ಖಾನೆಗಳು ಸೂಕ್ತ ಬೆಲೆಗೆ ಖರೀದಿಸಿ ಸಮಯಕ್ಕೆ ಹಣ ಸಂದಾಯ ಮಾಡುವಂತೆ ಆದೇಶ ನೀಡಲಾಗಿದ್ದು ಕಾಂಗ್ರೇಸ್ ಸರ್ಕಾರವು ಕೂಡ ರೈತರ ಪರವಾಗಿದೆ ಎಂದರು.

ಉದಯವಾಹಿನಿ ಚಿತ್ರ

ಕಬ್ಬು ಬೆಳೆಗಾರರ ರೈತರ ಸಮಸ್ಯೆ ಪರಿಹಾರ: ರಾಠೋಡ್

ಚಿಂಚೋಳಿ ಸೇರಿದಂತೆ ಸೇಡಂ, ಚಿತ್ತಾಪುರ, ಕಾಳಗಿ, ಕಮಲಾಪುರ ಕ್ಷೇತ್ರಗಳ ವಿವಿಧ 300ಕ್ಕಿಂತ ಹೆಚ್ಚು ಗ್ರಾಮಗಳಲ್ಲಿ ಬೆಳೆದ ಕಬ್ಬು ಬೆಳೆಗಾರರ ರೈತರ ಕಬ್ಬು ಖರೀದಿಸಲು ಈಗಾಗಲೇ ಸಚಿವರುಗಳ ಮುತುವರ್ಜಿಯಿಂದ ಸರ್ಕಾರ ಜಿಲ್ಲಾಡಳಿತ ಆಯಾ ಪ್ರದೇಶಕ್ಕೆ ಸಮೀಪವಿರುವ ಕಾರ್ಖಾನೆಗೆ ರವಾನಿಸಲು ಆದೇಶ ನೀಡಲಾಗಿದ್ದು ಸೂಕ್ತ ಮಾರುಕಟ್ಟೆ ಸಮಯಕ್ಕೆ ಹಣ ಸಂದಾಯ ಮಾಡಲು ಆದೇಶ ಮಾಡಿದೆ, ಯಾರು ರೈತರು ಭಯಪಡುವ ಅವಶ್ಯಕತೆಯಿಲ್ಲ ಎಲ್ಲಾ ರೈತರ ಕಬ್ಬು ಖರೀದಿಸಲಾಗುವುದು, ಕೆಲವರು ಸುಳ್ಳು ಅಪಪ್ರಚಾರ ಮಾಡುತ್ತಿದ್ದು ಅವರ ಮಾತಿಗೆ ಕಿವಿಗೊಡಬಾರದು. ಯಾವುದೇ ಕಬ್ಬು ಬೆಳೆಗಾರರ ರೈತರ ಸಮಸ್ಯೆ ಬಗೆಹರಿಯದೆ ಇದ್ದರೆ ಸಮೀಪದ ತಹಸೀಲ್ ಕಛೇರಿಗಳಿಗೆ ಭೇಟಿಯಾಗಿ ಮಾಹಿತಿ ಪಡೆದುಕೊಳ್ಳಿ, ರೈತರ ಬೆಂಬಲಕ್ಕೆ ಸದಾ ಸರ್ಕಾರ ಮತ್ತು ಕಾಂಗ್ರೇಸ್ ಪಕ್ಷವಿದೆ, ರೈತರ ಯಾವುದೇ ಸಮಸ್ಯೆಯಿದ್ದಲ್ಲಿ ಬಗೆಹರಿಸಲಾಗುವುದು.

ಕಾನೂನಿಗೆ ಎಲ್ಲಾರು ತಲೆ ಬಾಗಲೇ ಬೇಕು

ಸಿದ್ದಸಿರಿ ಕಾರ್ಖಾನೆ ಕಾನೂನಾತ್ಮಕ ಅಡೆತಡೆಗಳಿಂದ ಬಂದ್ ಆಗಿದ್ದು ಪ್ರಕರಣ ನ್ಯಾಯಾಲಯದಲ್ಲಿದೆ ಅದಕಾರಣ ರೈತರ ಹಿತದೃಷ್ಟಿಯಿಂದ ಅನುಕೂಲಕ್ಕಾಗಿ ಸರ್ಕಾರ, ಜಿಲ್ಲಾಡಳಿತ ಹಾಗೂ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ ಪಾಟೀಲ, ಅರಣ್ಯ ಸಚಿವ ಈಶ್ವರ ಖಂಡ್ರೆ ಮುತುವರ್ಜಿ ವಹಿಸಿ ರೈತರ ಕಬ್ಬು ನುರಿಸಲು ಆಯಾ ಕ್ಷೇತ್ರದ ಸಮೀಪವಿರುವ ಕಾರ್ಖಾನೆಗಳು ಸೂಕ್ತ ಬೆಲೆಗೆ ಖರೀದಿಸಿ ಮಾರುಕಟ್ಟೆ ಕಲ್ಪಿಸಿ ಸಮಯಕ್ಕೆ ಹಣ ಸಂದಾಯ ಮಾಡುವಂತೆ ಆದೇಶ ಹೊರಡಿಸಲಾಗಿದೆ ಇದರಿಂದ ರೈತರ ಬಾಳು ಹಸನಾಗಲಿದ್ದು ಸರ್ಕಾರ ರೈತರ ಪರವಾಗಿದೆ, ಜನಸಾಮಾನ್ಯರ ಪರವಾಗಿದೆ

-ಸುಭಾಷ ರಾಠೋಡ್, ಕೆಪಿಸಿಸಿ ಉಪಾಧ್ಯಕ್ಷರು

ಶಾಲೆಯ ಮಕ್ಕಳು ಮತ್ತು ಪುರಸಭೆ ಸ್ವಚ್ಛತಾ ಸಿಬ್ಬಂದಿಗಳ ಜೊತೆ ಹುಟ್ಟುಹಬ್ಬ ಆಚರಿಸಿಕೊಂಡ ಅನೀಲ ಬಿರಾದಾರ

• ಉದಯವಾಹಿನಿ, ಚಿಂಚೋಳಿ

ಪಟ್ಟಣದ ಚಂದಾಪೂರದ ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆಯ ಮಕ್ಕಳಿಗೆ ನೋಟ್ ಬುಕ್ ಮತ್ತು ಲೆಕ್ಕಣಿಕೆ ವಿತರಿಸುವ ಮೂಲಕ ಹಾಗೂ ಪುರಸಭೆ ಸ್ವಚ್ಛತಾ ಸಿಬ್ಬಂದಿಗಳಿಗೆ ಸೀರೆಗಳು ವಿತರಿಸುವ ಮೂಲಕ ಮಾಹಿತಿ ಹಕ್ಕು ಸಮಾಜಿಕ ಕಾರ್ಯಕರ್ತರ ವೇದಿಕೆಯ ತಾಲ್ಲೂಕಾ ಅಧ್ಯಕ್ಷ ಅನೀಲ ಬಿರಾದಾರ ಅವರು ವಿಶಿಷ್ಟವಾಗಿ 35ನೇಯ ಹುಟ್ಟುಹಬ್ಬವನ್ನು ಆಚರಿಸಿಕೊಂಡು ಮಾದರಿಯಾಗಿದರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷರಾದ ಆನಂದಕುಮಾರ ಟೈಗರ್, ಕೆ.ಎಂ.ಬಾರಿ, ಭೀಮಶೇಟ್ಟಿ ಮುರುಡಾ, ಸಂತೋಷ ಗುತ್ತೇದಾರ, ವಕೀಲರ ಸಂಘದ ತಾಲ್ಲೂಕಾಧ್ಯಕ್ಷ ಶ್ರೀಮಂತ ಕಟ್ಟಿಮನಿ, ಕ್ಷೇತ್ರ ಶಿಕ್ಷಣ ಸಂಯೋಜಕರಾದ ಅಶೋಕ ಹೂವಿನಭಾವಿ, ಶಾಲೆಯ ಮುಖ್ಯೋಪಾಧ್ಯಾಯ ಗೋಪಾಲ ಯಂಪಳ್ಳಿ, ಶಾಲೆಯ ಶಿಕ್ಷಕ ಸಿಬ್ಬಂದಿ ರಾಜೇಂದ್ರಕುಮಾರ, ಸಂಗಮ, ಬಸ್ಸಮ್ಮ, ಸೋಮಶೇಖರ, ಮಾಣಿಕ ರಾಠೋಡ್, ಶಿಲ್ಪಾ, ಸಾಬು ಕಾಂಬಳೆ, ಸುನೀತಾ, ಮಾರುತಿ, ಹುಮಾಮು ಜಪರುನ್ನಿಸ್ಸಾ, ಸಂಗಾರೆಡ್ಡಿ, ರೋಹಿಣಿ, ಇತರ ಸಿಬ್ಬಂದಿಗಳು ಹಾಗೂ ಮುದ್ದು ಮಕ್ಕಳು ಉಪಸ್ಥಿತರಿದ್ದರು.

ಉದಯವಾಹಿನಿ ಚಿತ್ರ

ವರ್ಷದಿಂದ ವರ್ಷಕ್ಕೆ ವೃದ್ಧಿಸಿದ 'ಶಕ್ತಿ'

• ಉದಯವಾಹಿನಿ, ಹುಬ್ಬಳ್ಳಿ

ರಾಜ್ಯದಲ್ಲಿ 'ಶಕ್ತಿ' ಯೋಜನೆ ಅನುಷ್ಠಾನವಾದ ಬಳಿಕ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ಎನ್ ಡಬ್ಲುಕೆಆರ್‌ಟಿಸಿ) ಬಸ್‌ಗಳಲ್ಲಿ ಎಲ್ಲಾ ಸೀಟುಗಳು ಭರ್ತಿಯಾಗುತ್ತಿವೆ. ಕಳೆದ ವರ್ಷ ಸಂಚರಿಸಿದ ಪ್ರಯಾಣಿಕರ ಸಂಖ್ಯೆಗೆ ಹೋಲಿಸಿದರೆ ಈ ವರ್ಷ ಪ್ರಯಾಣಿಕರ ಸಂಖ್ಯೆ ಮತ್ತಷ್ಟು ವೃದ್ಧಿಸಿದೆ.

ಅತಿ ಹೆಚ್ಚು ವಿಸ್ತಾರ ಮತ್ತು ಜನಸಂಖ್ಯೆಯುಳ್ಳ ಬೆಳಗಾವಿ ಜಿಲ್ಲೆಯಲ್ಲಿ ಶಕ್ತಿ ಯೋಜನೆಯಡಿ ಸಂಚರಿಸಿದ ಪ್ರಯಾಣಿಕರ ಸಂಖ್ಯೆ ಗಣನೀಯ ಏರಿಕೆಯಾಗಿದೆ. 2023ನೇ ಸಾಲಿನ ಸೆಪ್ಟೆಂಬರ್‌ನಲ್ಲಿ ಸಂಚರಿಸಿದ್ದ ಒಟ್ಟು ಪ್ರಯಾಣಿಕರ ಸಂಖ್ಯೆಗೆ ಹೋಲಿಸಿದರೆ ಪ್ರಸಕ್ತ ವರ್ಷದ ಸೆಪ್ಟೆಂಬರ್‌ನಲ್ಲಿ ಶೇ 11ರಷ್ಟು ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಕರು ಸಂಚರಿಸಿದ್ದಾರೆ.

ಶಕ್ತಿ ಯೋಜನೆಯಿಂದ ವಾಯುವ್ಯ ಸಾರಿಗೆ ಸಂಸ್ಥೆಯಲ್ಲಿ ಭಾರಿ ಪ್ರಮಾಣದ ಬದಲಾವಣೆ ಆಗಿಲ್ಲ. ಆದರೆ, ನಷ್ಟದ ಪ್ರಮಾಣ ಕಡಿಮೆಯಾಗುತ್ತಿದೆ' ಎಂದು ಸಂಸ್ಥೆಯ ಅಧಿಕಾರಿಗಳು ತಿಳಿಸಿದರು.

ಯೋಜನೆ ಆರಂಭವಾದಾಗಿನಿಂದ ಈವರೆಗೆ (2024 ಸೆಪ್ಟೆಂಬರ್ ಕೊನೆ) ಒಟ್ಟು 69.35 ಕೋಟಿ ಪ್ರಯಾಣಿಕರು ಉಚಿತ ಸಂಚಾರ ಮಾಡಿದ್ದಾರೆ. ಅದರಲ್ಲಿ ಮೂರು ವಿಭಾಗಗಳಿರುವ ಧಾರವಾಡ ಜಿಲ್ಲೆಯಲ್ಲಿ ಶೇ 28.16 ಪ್ರಯಾಣಿಕರು ಸಂಚರಿಸಿದ್ದರೆ, ಎರಡು ವಿಭಾಗಗಳಿರುವ ಬೆಳಗಾವಿ ಜಿಲ್ಲೆಯಲ್ಲಿ ಶೇ 29.79 ಪ್ರಯಾಣಿಕರು ಸಂಚರಿಸಿದ್ದಾರೆ. ಬಾಗಲಕೋಟೆ ಜಿಲ್ಲೆಯಲ್ಲಿ ಶೇ 12.37, ಹಾವೇರಿ ಜಿಲ್ಲೆಯಲ್ಲಿ ಶೇ 11.11 ಹಾಗೂ ಗದಗ ಜಿಲ್ಲೆಯಲ್ಲಿ ಶೇ 9.65 ರಷ್ಟು ಪ್ರಯಾಣಿಕರು ಮತ್ತು ಕೊನೆ ಸ್ಥಾನದಲ್ಲಿರುವ ಉತ್ತರ ಕನ್ನಡ ಜಿಲ್ಲೆಯಲ್ಲಿ ಶೇ 8.89 ರಷ್ಟು ಪ್ರಯಾಣಿಕರು ಸಂಚರಿಸಿದ್ದಾರೆ.

ಉದಯವಾಹಿನಿ ಚಿತ್ರ

ವಾಯವ್ಯ ಸಾರಿಗೆ ಸಂಸ್ಥೆಯ ವ್ಯಾಪ್ತಿಯ ಆರು ಜಿಲ್ಲೆಗಳ ಪೈಕಿ ಗದಗ ಹೊರತುಪಡಿಸಿ ಇನ್ನುಳಿದ ಎಲ್ಲಾ ಜಿಲ್ಲೆಗಳಲ್ಲೂ ಶಕ್ತಿ ಯೋಜನೆಯಡಿ ಮಹಿಳಾ ಪ್ರಯಾಣಿಕರ ಸಂಖ್ಯೆ ಏರುಗತಿಯಲ್ಲಿದೆ. 2023-24ನೇ ಸಾಲಿನಲ್ಲಿ ಸರ್ಕಾರದಿಂದ ಬರಬೇಕಿದ್ದ ಮಹಿಳೆಯರ ಉಚಿತ ಪ್ರಯಾಣದ ಮೊತ್ತದಲ್ಲಿ ಶೇ 82ರಷ್ಟು ಅನುದಾನ ಸಂದಾಯವಾಗಿದೆ.

• ಉದಯವಾಹಿನಿ, ಬೈಂದೂರು

ಕಾನೂನು ಹೋರಾಟಕ್ಕೆ ಸಿದ್ಧತೆ

ಬೈಂದೂರು ಫೌಂಡೇಶನ್ ಮೂಲಕ ಕಸ್ತೂರಿ ರಂಗನ್ ವರದಿ ಅನುಷ್ಠಾನ ವಿರೋಧಿಸಿ ಕಾನೂನು ಹೋರಾಟಕ್ಕೆ ನಾವು ವೇದಿಕೆ ಸಿದ್ಧ ಮಾಡಿಕೊಳ್ಳುತ್ತಿದ್ದೇವೆ.

ಅದಕ್ಕೆ ಬೇಕಾದ ದಾಖಲೆ, ಮಾಹಿತಿಗಳನ್ನು ಸಂಗ್ರಹ ಮಾಡು ತ್ತಿದ್ದೇವೆ. ಜತೆಗೆ ಫೌಂಡೇಶನ್ ಮೂಲಕ ಸಿಆರ್‌ಝಡ್, ಡೀಮ್ಡ್ ಫಾರೆಸ್ಟ್ ಇತ್ಯಾದಿ ಸಮಸ್ಯೆಗಳ ಬಗ್ಗೆಯೂ ಹೋರಾಟಕ್ಕೆ ರೂಪುರೇಷೆ ಸಿದ್ಧಪಡಿಸುತ್ತಿದ್ದೇವೆ ಎಂದು ಶಾಸಕ ಗುರುರಾಜ್ ಗಂಟಿಹೊಳೆ ಹೇಳಿದರು. ಕಸ್ತೂರಿ ರಂಗನ್ ವರದಿ ಅನುಷ್ಠಾನದಿಂದ ಬೈಂದೂರು ವಿಧಾನಸಭಾ ಕ್ಷೇತ್ರದ ಪಶ್ಚಿಮಘಟ್ಟಕ್ಕೆ ಹೊಂದಿ ಕೊಂಡಿರುವ ಗ್ರಾಮಗಳಿಗೆ ಎದುರಾಗಬಹುದಾದ ಸಮಸ್ಯೆಯನ್ನು ತಡೆಯುವ ನಿಟ್ಟಿನಲ್ಲಿ ಕಾನೂನು ಹೋರಾಟ ಸಂಬಂಧ ರಚಿಸಿರುವ ಬೈಂದೂರು ಫೌಂಡೇಶನ್ ವತಿಯಿಂದ ಶಾಸಕರಾದ ಗುರುರಾಜ ಗಂಟಿಹೊಳೆ ಅವರ ನೇತೃತ್ವದಲ್ಲಿ ಮಂಗಳವಾರ ಕುಂದಾಪುರದಲ್ಲಿ ನಡೆದ ಸಮಾಲೋಚನ ಸಭೆಯಲ್ಲಿ ಅವರು ಮಾತನಾಡಿದರು. ಕಸ್ತೂರಿ ರಂಗನ್ ವರದಿ ಅನುಷ್ಠಾನ ಆಗದಂತೆ ನೋಡಿಕೊಳ್ಳುವುದು, ವನ್ಯಜೀವಿ (ಡೀಮ್ಡ್ ಫಾರೆಸ್ಟ್), ಸಿಆರ್‌ಝಡ್, ಮರಳುಗಾರಿಕೆ, ಕಲ್ಲು ಗಣಿಗಾರಿಕೆ ಇತ್ಯಾದಿಗಳಿಂದ ಕ್ಷೇತ್ರದ ಜನ ಸಾಮಾನ್ಯರಿಗೆ ಸಮಸ್ಯೆ ಆಗದಂತೆ ಎಚ್ಚರ ವಹಿಸುವುದು ಇದರ ಉದ್ದೇಶವಾಗಿದೆ ಎಂದರು.

ಎಚ್ಚರ ವಹಿಸುವುದು ಇದರ ಉದ್ದೇಶ

ಹಿರಿಯ ವಕೀಲರಾದ ಟಿ.ಬಿ. ಶೆಟ್ಟಿ ಹಾಗೂ ರಾಘವೇಂದ್ರ ಉಪ್ಪುಂದ ಕಸ್ತೂರಿ ರಂಗನ್ ವರದಿ ಅನುಷ್ಠಾನದಿಂದ ಆಗಬಹುದಾದ ಸಮಸ್ಯೆ ಬಗ್ಗೆ, ಗುರುಮೂರ್ತಿ ವನ್ಯಜೀವಿ, ಡೀಮ್ಡ್ ಫಾರೆಸ್ಟ್ ಸಮಸ್ಯೆ ಬಗ್ಗೆ, ವಕೀಲರ ಸಂಘದ ಅಧ್ಯಕ್ಷ ಪ್ರಮೋದ್ ಹಂದೆ ಸಿಆರ್‌ಝಡ್ ನಿಂದ ಆಗುತ್ತಿರುವ ಸಮಸ್ಯೆ ಮತ್ತು ಹೇಗೆ ಪರಿಹಾರ ಕಂಡುಕೊಳ್ಳಬಹುದು ಎಂಬುದರ ಬಗ್ಗೆ, ರಮೇಶ್ ಹತ್ವಾರ್ ಮೈನಿಂಗ್ಸ್ ಬಗ್ಗೆ ವಿವರ ನೀಡಿದರು. ವಕೀಲರಾದ ಸಾಜಿ ಅಬ್ರಾಹಂ ಅವರು ಕೇರಳ ರಾಜ್ಯ ಕಸ್ತೂರಿ ರಂಗನ್ ವರದಿಯಿಂದ ಪಾರಾಗಿದ್ದು ಹೇಗೆ ಮತ್ತು ಕಾನೂನು ಹೋರಾಟ ಹೇಗಿತ್ತು ಎಂಬುದರ ಮಾಹಿತಿ ನೀಡಿ, ಅಲ್ಲಿಗೆ ಭೇಟಿ ನೀಡಿ ದಾಖಲೆ ಸಂಗ್ರಹಿಸುವ ಬಗ್ಗೆ ತಿಳಿಸಿದರು.

ಹಿರಿಯ ವಕೀಲರು ಹಾಗೂ ಕಾನೂನು ತಜ್ಞರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು. ಶೀಘ್ರವೇ ಹೈಕೋರ್ಟ್ ಹಾಗೂ ಸುಪ್ರೀಂ ಕೋರ್ಟ್‌ನ ಹಿರಿಯ ವಕೀಲರನ್ನು ಭೇಟಿ ಮಾಡಿ ಈ ವಿಷಯದ ಕುರಿತು ಇನ್ನಷ್ಟು ಚರ್ಚೆ ಮಾಡುವ ಬಗ್ಗೆಯೂ ನಿರ್ಧರಿಸಲಾಯಿತು. ಬೈಂದೂರು ಕ್ಷೇತ್ರಕ್ಕೆ ಹೆಚ್ಚು ಸಮಸ್ಯೆ ನೀಡುತ್ತಿರುವ ಸಿಆರ್‌ಝಡ್, ಡೀಮ್ಡ್ ಫಾರೆಸ್ಟ್ (ವನ್ಯಜೀವಿ), ಕಸ್ತೂರಿ ರಂಗನ್ ವರದಿ ಅನುಷ್ಠಾನಕ್ಕೆ ಮುಂದಾಗಿರುವ ವಿಚಾರವೂ ಸೇರಿದಂತೆ ಹಲವು ವಿಚಾರಗಳ ಬಗ್ಗೆ ಚರ್ಚೆ ನಡೆಯಿತು.

ವಕೀಲರ ಸಂಘದ ಕೆ.ಬಿ. ಶೆಟ್ಟಿ, ಶರತ್ ಶೆಟ್ಟಿ, ಪ್ರವೀಶ್‌ಚಂದ್ರ, ಪ್ರಶಾಂತ್ ಶೆಟ್ಟಿ, ರಜನಿಕಾಂತ್, ಫೌಂಡೇಷನ್ ಸಂಯೋಜಕ ವಿಶ್ವನಾಥ ಶೆಟ್ಟಿ, ಕಾರ್ಯದರ್ಶಿ ರವಿಚಂದ್ರ, ಹಿರಿಯ ಕಿರಿಯ ವಕೀಲರು, ಕಾನೂನು ತಜ್ಞರು ಸಭೆಯಲ್ಲಿ ಉಪಸ್ಥಿತರಿದ್ದರು.

ಉದಯವಾಹಿನಿ ಚಿತ್ರ

ಕಾಲುವೆಯಲ್ಲಿ 10 ಬ್ಯಾಲೆಟ್ ಬಾಕ್ಸ್‌ಗಳು ಪತ್ತೆ

• ಉದಯವಾಹಿನಿ, ಹಾವೇರಿ

ಇಲ್ಲಿಯ ಯತ್ನಳ್ಳಿ ರಸ್ತೆ ಬದಿಯ ಕಾಲುವೆಯಲ್ಲಿ 10 ಬ್ಯಾಲೆಟ್ ಬಾಕ್ಸ್‌ಗಳು ಪತ್ತೆಯಾಗಿದ್ದು, ಈ ಬಗ್ಗೆ ಗ್ರಾಮಸ್ಥರು ಹಲವು ಅನುಮಾನ ವ್ಯಕ್ತಪಡಿಸುತ್ತಿದ್ದಾರೆ. ಜಿಲ್ಲೆಯ ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಮತದಾನ ಪ್ರಕ್ರಿಯೆ ಬುಧವಾರವಷ್ಟೇ ನಡೆದಿದೆ.

ಇದರ ಮರುದಿನವೇ ಕಾಲುವೆಯಲ್ಲಿ ಬ್ಯಾಲೆಟ್ ಬಾಕ್ಸ್‌ಗಳು ಸಿಕ್ಕಿವೆ. ಇದರಿಂದಾಗಿ ಜನರಲ್ಲಿ ಹಲವು ಅನುಮಾನಗಳು ಮೂಡಿವೆ. ಆದರೆ, ಈ ಬ್ಯಾಲೆಟ್ ಬಾಕ್ಸ್‌ಗಳು ಹಳೆಯದ್ದಾಗಿವೆ. ಶಿಗ್ಗಾವಿ ಚುನಾವಣೆಗೂ ಈ ಬಾಕ್ಸ್‌ಗಳಿಗೂ ಯಾವುದೇ ಸಂಬಂಧವಿಲ್ಲವೆಂದು ಜಿಲ್ಲಾಡಳಿತ ತಿಳಿಸಿದೆ. ಬೆಳಿಗ್ಗೆ ವಾಯುವಿಹಾರಕ್ಕೆ ಹೋಗಿದ್ದೆ. ಇದೇ ಸಂದರ್ಭದಲ್ಲಿ ಕಾಲುವೆಯಲ್ಲಿ ಕಬ್ಬಿಣದ ಬಾಕ್ಸ್‌ಗಳು ಕಂಡವು. ಏನೆಂದು ನೋಡಲು ಹೋದಾಗ, ಬ್ಯಾಲೆಟ್ ಬಾಕ್ಸ್‌ಗಳು ಎಂಬುದು ಗೊತ್ತಾಯಿತು' ಎಂದು ಗ್ರಾಮಸ್ಥರೊಬ್ಬರು ಹೇಳಿದರು.

'ಹಳೆಯ ಚುನಾವಣೆ ಸಂದರ್ಭದಲ್ಲಿ ಬಳಕೆ ಮಾಡಿದ ಬ್ಯಾಲೆಟ್ ಬಾಕ್ಸ್‌ಗಳಿರಬಹುದು. ಈ ಬಾಕ್ಸ್‌ಗಳ ಬಗ್ಗೆ ಅಧಿಕಾರಿಗಳಿಗೆ ಮಾಹಿತಿ ನೀಡಲಾಗಿದೆ. ಅವರು ಇನ್ನೂ ಊರಿಗೆ ಬಂದಿಲ್ಲ, ಬಾಕ್ಸ್‌ಗಳು ನಮ್ಮ ಬಳಿಯೇ ಇವೆ' ಎಂದು ಮಾಹಿತಿ ನೀಡಿದರು. ಬ್ಯಾಲೆಟ್ ಬಾಕ್ಸ್‌ಗಳ ಬಗ್ಗೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ವಿಜಯಮಹಾಂತೇಶ ದಾನಮ್ಮನವರ, 'ಕಾಲುವೆಯಲ್ಲಿ ಕಬ್ಬಿಣದ ಬಾಕ್ಸ್‌ಗಳು ಬಿದ್ದ

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	10:30 ರಿಂದ 12:00
ಗುಳಿಕಕಾಲ	ಬೆಳಿಗ್ಗೆ	07:30 ರಿಂದ 09:00
ಯಮಗಂಡಕಾಲ	ಮಧ್ಯಾಹ್ನ	03:00 ರಿಂದ 04:30

ಮೇಷ ದೇಹದ ನೋವಿನಿಂದ ಬಳಲುವ ಸಾಧ್ಯತೆ ಹೆಚ್ಚಿದೆ. ನಿಮ್ಮ ದೇಹದ ಮೇಲೆ ಹೆಚ್ಚು ಒತ್ತಡ ಹಾಕುವ ಯಾವುದೇ ದೈಹಿಕ ಪರಿಶ್ರಮವನ್ನು ತಪ್ಪಿಸಲು ಪ್ರಯತ್ನಿಸಿ. ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳಿ.

ವೃಷಭ ಸಂತೃಪ್ತಿಯ ಜೀವನಕ್ಕಾಗಿ ನಿಮ್ಮ ಮಾನಸಿಕ ದೃಢತೆಯನ್ನು ಸುಧಾರಿಸಿ. ಇಂದಿನವರೆಗೂ ಹಣವನ್ನು ಯೋಚಿಸದೆ ಖರ್ಚು ಮಾಡುತ್ತಿದ್ದ ಜನರು, ಅವರಿಗೆ ಇಂದು ಹಣದ ತುಂಬಾ ಅಗತ್ಯ ವಿರಬಹುದು.

ಮಿಥುನ ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆವರಿಸಬಹುದು. ಖಾಲಿ ಮೆದುಳು ದೆವ್ವಗಳ ಕಾರ್ಖಾನೆಯಾದ್ದರಿಂದ ದೈಹಿಕ ವ್ಯಾಯಾಮದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಲು ಪ್ರಯತ್ನಿಸಿ.

ಕರ್ಕಾಟಕ ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ.

ಸಿಂಹ ಹಿರಿಯರು ಉತ್ತಮ ಲಾಭ ಪಡೆಯಲು ತಮ್ಮ ಹೆಚ್ಚುವರಿ ಶಕ್ತಿಯನ್ನು ಸಕಾರಾತ್ಮಕ ಬಳಕೆಗೆ ವಿನಿಯೋಗಿಸಬೇಕು. ಸ್ವಲ್ಪ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ.

ಕನ್ಯಾ ಆರೋಗ್ಯ ಸುಧಾರಿಸವುದನ್ನು ಪ್ರಾರಂಭಿಸಲು ಅತ್ಯುತ್ತಮ ದಿನ. ಊಹೆಗಳು ಲಾಭ ತರುತ್ತವೆ. ತಂದೆಯ ಕಠಿಣ ನಡವಳಿಕೆ ನಿಮಗೆ ಸಿಟ್ಟು ಬರಿಸಬಹುದು. ನೀವು ವಿಷಯವನ್ನು ನಿಯಂತ್ರಣದಲ್ಲಿಡಲು ಶಾಂತರಾಗಿರುವ ಅಗತ್ಯ ವಿದೆ.

ತುಲಾ ನೀವು ದೀರ್ಘಕಾಲೀನ ಅನಾರೋಗ್ಯದ ಚೇತರಿಸಿಕೊಳ್ಳುತ್ತೀರಿ. ಆದರೆ ಸ್ವಾರ್ಥಿಗಳಾದ, ಮುಂಗೋಪಿ ವ್ಯಕ್ತಿಯ ಸಹವಾಸವನ್ನು ತಪ್ಪಿಸಿ – ಅವರು ನಿಮ್ಮ ಮೇಲೆ ಒತ್ತಡ ಹಾಕಬಹುದು.

ವೃಶ್ಚಿಕ ಮನರಂಜನೆ ಮತ್ತು ಮೋಜಿನ ಒಂದು ದಿನ. ನೀವು ನಿಮ್ಮ ಸ್ನೇಹಿತರೊಂದಿಗೆ ಎಲ್ಲಿಗಾದರೂ ಸುತ್ತಾಡಲು ಹೋಗುತ್ತಿದ್ದರೆ, ಹಣವನ್ನು ಚೆನ್ನಾಗಿ ಯೋಚಿಸಿ ಖರ್ಚು ಮಾಡಿ. ಹಣದ ನಷ್ಟವಾಗಬಹುದು.

ಧನಸ್ಸು ನಿಮ್ಮ ಸಹೋದರ–ಸಹೋದರಿಯರಲ್ಲಿ ಒಬ್ಬರು ನಿಮ್ಮಿಂದ ಹಣವನ್ನು ಎರವಲು ಪಡೆಯಬಹುದು, ನೀವು ಅವರಿಗೆ ಹಣವನ್ನು ಸಾಲವಾಗಿ ಕೊಡುತ್ತೀರಿ ಆದರೆ ಇದರಿಂದ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು.

ಮಕರ ಹಳೆಯ ಸ್ನೇಹಿತರು ಬೆಂಬಲ ನೀಡುತ್ತಾರ ಮತ್ತು ಉಪಯುಕ್ತವಾಗಿರುತ್ತಾರೆ. ಪ್ರೀತಿಯಲ್ಲಿ ಬೀಳುವುದು ಇಂದು ನಿಮಗೆ ಕೆಟ್ಟದಾಗಿರಬಹುದಾದ್ದರಿಂದ ನೀವು ಜಾಗರೂಕರಾಗಿರಿ.

ಕುಂಭ ಇತ್ತೀಚೆಗೆ ನಿಮ್ಮಲ್ಲಿ ಕೆಲವರು ಓವರ್‌ಟೈಮ್ ಮಾಡುತ್ತಿರುತ್ತಾರೆ ಹಾಗೂ ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ– ಇಂದು ನೀವು ಒತ್ತಡ ಹಾಗೂ ಸಂದಿಗ್ಧತೆಯನ್ನು ಬಯಸುವುದಿಲ್ಲ.

ಮೀನ ನಿಮ್ಮ ಮನಸ್ಸು ಇತ್ತೀಚಿನ ಘಟನೆಗಳಿಂದ ತೊಂದರೆಗೊಳಗಾಗುತ್ತದೆ. ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗೆ ಪ್ರಯೋಜನಕಾರಿ ಎಂದು ಸಾಬೀತಾಗುತ್ತದೆ.

ಕಾಂಗ್ರೇಸ್‌ನಿಂದ ಪ್ರವಾಸೋದ್ಯಮದ ಕಗ್ಗೊಲೆ: ವಿ. ಸುನಿಲ್ ಕುಮಾರ್

ಉಪಚುನಾವಣೆ ಫಲಿತಾಂಶದ ನಂತರ ಕಾಂಗ್ರೇಸ್ ಆಂತರಿಕ ಬೇಗುದಿ ಹೊರಬರಲಿದೆ, ಸಿಎಂ ಅಧಿಕಾರ ಕಳೆದುಕೊಳ್ಳುತ್ತಾರೆ

• ಉದಯವಾಹಿನಿ, ಉಡುಪಿ

ಪ್ರವಾಸೋದ್ಯಮಕ್ಕೆ ದೊಡ್ಡ ಮಟ್ಟದಲ್ಲಿ ಉತ್ತೇಜನ ನೀಡಬೇಕು ಎಂಬ ಉದ್ದೇಶದಿಂದ ಆರಂಭವಾದ ಕಾರ್ಕಳದ ಪರಶುರಾಮ ಥೀಂ ಪಾರ್ಕ್ ಕುರಿತು ಕಾಂಗ್ರೇಸ್ ಪಕ್ಷವು ವಿನಾಕಾರಣ ವಿವಾದಗಳನ್ನು ಹುಟ್ಟು ಹಾಕಿ, ಪ್ರವಾಸೋದ್ಯಮದ ಕಗ್ಗೊಲೆ ನಡೆಸುತ್ತಿದೆ ಎಂದು ಕಾರ್ಕಳ ಶಾಸಕ ವಿ. ಸುನಿಲ್ ಕುಮಾರ್ ಆರೋಪಿಸಿದರು.

ಪರಶುರಾಮ ಮೂರ್ತಿಯ ಕುರಿತು ಸುಳ್ಳಿನ ಮೆರವಣಿಗೆ ನಡೆಯುತ್ತಿದೆ. ಕಾರ್ಕಳದ ಮೂಲಕ ಹಾದುಹೋಗುವ ದಕ್ಷಿಣ ಕನ್ನಡ ಮತ್ತು ಉಡುಪಿಯ ಜನರನ್ನು ದೊಡ್ಡ ಮಟ್ಟದಲ್ಲಿ ಸೆಳೆಯುವ ಉದ್ದೇಶದಿಂದ ಮೂರ್ತಿ ನಿರ್ಮಿಸಲಾಗಿದೆ ಎಂದು ಅವರು ಹೇಳಿದರು.

11 ಕೋಟಿಯ ಯೋಜನೆಯನ್ನು ಪರಶುರಾಮ ಥೀಂ ಪಾರ್ಕ್‌ಗಾಗಿ ಸಿದ್ಧಪಡಿಸಲಾಗಿತ್ತು. ಅದಕ್ಕೆ ಸರ್ಕಾರ ಬಿಡುಗಡೆ ಮಾಡಿದ್ದು 6.75 ಕೋಟಿ ಮಾತ್ರ. ಇನ್ನು ನಾಲ್ಕೂವರೆ ಕೋಟಿ ಹಣ ಮಂಜೂರು ಆಗಿದ್ದರೂ ಬಿಡುಗಡೆಯಾಗಿರಲಿಲ್ಲ ಎಂದು ವಿವರಿಸಿದರು.

> ಥೀಮ್ ಪಾರ್ಕ್ ಎಂದರೆ ಅದು ಪ್ರವಾಸೋದ್ಯಮಕ್ಕೆ ಸಂಬಂಧಿಸಿದ್ದು, ಅಲ್ಲಿ ಧಾರ್ಮಿಕತೆಯ ವಿಚಾರ ಬರುವುದಿಲ್ಲ. ಆದರೆ ಉದಯ್ ಕುಮಾರ್ ಶೆಟ್ಟಿ ಅವರು ಈ ವಿಚಾರಕ್ಕೆ ಧಾರ್ಮಿಕತೆಯ ಬಣ್ಣ ಹಚ್ಚುತ್ತಿದ್ದಾರೆ ಎಂದರು. ಅಭಿವೃದ್ಧಿ ವಿರೋಧಿ ಟೂಲ್‌ಕಿಟ್ ಹೊಂದಿರುವ ಬಗ್ಗೆ ಕಾರ್ಕಳದ ಜನರು ಜಾಗೃತರಾಗಬೇಕು. ಪರಶುರಾಮ ಮೂರ್ತಿಯ ಬಗ್ಗೆ ಅಪಪ್ರಚಾರ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳಬೇಕು
> –ವಿ. ಸುನಿಲ್ ಕುಮಾರ್

ಮೂರ್ತಿಯ ಕುರಿತು ಸುಳ್ಳಿನ ಮೆರವಣಿಗೆ



ಮೂರ್ತಿ ನಿರ್ಮಾಣದ ಬಳಿಕ ವಿಧಾನಸಭಾ ಚುನಾವಣಾ ಪ್ರಕ್ರಿಯೆಗಳು ಮುಗಿದ ನಂತರ ಪರಾಜಿತ ಅಭ್ಯರ್ಥಿ ಮುನಿಯಾಲು ಉದಯ ಕುಮಾರ್ ಶೆಟ್ಟಿ ಅವರು, ಸೋಲಿನ ಹತಾಶೆಯಿಂದ ಸುಳ್ಳು ಆರೋಪಗಳನ್ನು ಮಾಡಿದ್ದಾರೆ. ಪ್ರತಿ ಸಲವೂ ಬೇರೆ ಬೇರೆ ಆರೋಪಗಳನ್ನು ಮಾಡುತ್ತಾ ಬಂದಿದ್ದಾರೆ ಎಂದರು.

ಪರಶುರಾಮ ಮೂರ್ತಿಯ ಕಾಮಗಾರಿ ಮುಂದುವರಿಸಬೇಕೆಂದು ನ್ಯಾಯಾಲಯವು ಸೂಚಿಸಿದಾಗ, ಕಾಮಗಾರಿ ಸ್ಥಳಕ್ಕೆ ತೆರಳುವ ರಸ್ತೆಗೆ ಮಣ್ಣು ಹಾಕಿ ಮುಚ್ಚಲಾಗಿದೆ.

ಈ ಕುರಿತು ಅಲ್ಲಿನ ಗ್ರಾಮ ಪಂಚಾಯಿತಿ ಅಧ್ಯಕ್ಷರು ದೂರು ನೀಡಿದರೂ ಪೊಲೀಸರು ಪ್ರಕರಣ ದಾಖಲಿಸಿಕೊಂಡಿಲ್ಲ ಎಂದು ಶಾಸಕರು ದೂರಿದರು. ಪರಶುರಾಮ ಮೂರ್ತಿ ಪೈಬರ್ ಅಲ್ಲ ಕಂಚಿನದ್ದು ಎಂದು ನ್ಯಾಯಾಲಯವೇ ಹೇಳಿದೆ ಎಂದರು.

ಉದಯ್ ಕುಮಾರ್ ಶೆಟ್ಟಿ ಅವರು ಈಗ ಶಿಲ್ಪಿಯ ಬಗ್ಗೆ ಅನುಕಂಪ ವ್ಯಕ್ತಪಡಿಸುತ್ತಿದ್ದಾರೆ. ಶಿಲ್ಪಿಯ ಗೋದಾಮಿಗೆ ಮಹಜರು ಮಾಡಲು ಹೋದಾಗ, ರಸ್ತೆಗೆ ಮಣ್ಣು ಹಾಕಿ ಮುಚ್ಚಿದಾಗ ಈ ಅನುಕಂಪ ಎಲ್ಲಿ ಹೋಗಿತ್ತು ಎಂದೂ ಪ್ರಶ್ನಿಸಿದರು. ಶಿಲ್ಪಿ ಕೃಷ್ಣ ನಾಯ್ಕ ಅವರಿಗೆ ಕೊಟ್ಟ 1 ಕೋಟಿ ಎಲ್ಲಿ ಹೋಯಿತು ಎಂದು ಪ್ರಶ್ನಿಸುತ್ತಿದ್ದೀರಿ. ನಿಮ್ಮದೇ ಸರ್ಕಾರ ಇದೆ ತನಿಖೆ ಮಾಡಿ ಕಂಡು ಹಿಡಿಯಿರಿ ಎಂದ ಶಾಸಕರು, ಈ ಪ್ರಕರಣದ ತನಿಖೆಯ ಪ್ರಶ್ನಾವಳಿಗಳನ್ನು ಕಾಂಗ್ರೇಸ್ ಕಚೇರಿಯಲ್ಲಿ ಸಿದ್ಧಪಡಿಸಲಾಗಿದೆ ಎಂದು ಆರೋಪಿಸಿದರು.

ಮೂರು ಕ್ಷೇತ್ರಗಳಲ್ಲೂ ಗೆಲುವು

ಸಂಡೂರು ಕ್ಷೇತ್ರದ ಉಪ ಚುನಾವಣೆಯ ಪ್ರಚಾರ ಕಾರ್ಯದಲ್ಲಿ ಭಾಗವಹಿಸಿದ್ದೆ. ಉಪ ಚುನಾವಣೆ ನಡೆಯಲಿರುವ ಮೂರು ಕ್ಷೇತ್ರಗಳಲ್ಲೂ ಎನ್‌ಡಿಎ ಅಭ್ಯರ್ಥಿಗಳ ಗೆಲುವು ನಿಶ್ಚಿತ. ಉಪಚುನಾವಣೆ ಫಲಿತಾಂಶದ ನಂತರ ಕಾಂಗ್ರೇಸ್ ಆಂತರಿಕ ಬೇಗುದಿ ಹೊರಬರಲಿದೆ. ಇದೇ 23ರ ನಂತರ ಸಿದ್ದರಾಮಯ್ಯ ಅಧಿಕಾರ ಕಳೆದುಕೊಳ್ಳುತ್ತಾರೆ. ಹೊಸ ಮುಖ್ಯಮಂತ್ರಿಯೊಂದಿಗೆ ಬೆಳಗಾವಿ ಅಧಿವೇಶನ ನಡೆಯಲಿದೆ ಎಂದು ಸುನಿಲ್ ಕುಮಾರ್ ತಿಳಿಸಿದರು. ಮತ್ತೆ ಸದ್ದು ಮಾಡುತ್ತಿರುವ ನಕ್ಸಲ್ ಚಟುವಟಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಶಾಸಕರು ಕಾಂಗ್ರೇಸ್ ನಗರ ನಕ್ಸಲರಿಗೆ ದೊಡ್ಡ ಪ್ರಮಾಣದ ಬೆಂಬಲ ನೀಡಿದೆ. ನಗರ ನಕ್ಸಲರನ್ನು ಒಟ್ಟು ಸೇರಿಸಿ ಸರ್ಕಾರ ಸಭೆ ಮಾಡುತ್ತಿದೆ. ಈಗ ಕಸ್ತೂರಿ ರಂಗನ್ ವಿಚಾರ ಇಟ್ಟುಕೊಂಡು ನಕ್ಸಲರು ಮತ್ತೊಮ್ಮೆ ಬೆಳಕಿಗೆ ಬಂದಿದ್ದಾರೆ ಎಂದರು.

ಭ್ರಷ್ಟಾಚಾರ ರಹಿತ, ಪಾರದರ್ಶಕತೆಯಿಂದ ಕೆಲಸ ಮಾಡಿ: ಎಂಎಲ್ಸಿ ಬ.ಬಾದರ್ಲಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಸಿಂಧನೂರು

ತಹಶೀಲ್ ಕಾರ್ಯಲಯದಲ್ಲಿ ಬಸನಗೌಡ ಬಾದರ್ಲಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಉಪ-ಆಯುಕ್ತರು ಲಿಂಗಸೂಗೂರು ಹಾಗೂ ತಹಶೀಲ್ದಾರರು ಸಿಂಧನೂರು ಒಳಗೊಂಡಂತೆ ತಾಲ್ಲೂಕಿನ ಕಂದಾಯ ಇಲಾಖೆಯ ಎಲ್ಲಾ ಅಧಿಕಾರಿಗಳೊಂದಿಗೆ ಸಭೆ ಮಾಡಲಾಯಿತು.

ಈ ವೇಳೆಯಲ್ಲಿ ಮಾತನಾಡಿದ ಎಂಎಲ್ಸಿ ಬಸನಗೌಡ ಬಾದರ್ಲಿ ಅವರು ಸರ್ಕಾರಿ ಜಮೀನು ಎಷ್ಟಿದೆ. ಎಷ್ಟು ಭೂಮಿ ಕಬ್ಜದಲ್ಲಿದೆ ಇದರಲ್ಲಿ ಒತ್ತುವರಿ ಆಗಿರುವ ಭೂಮಿ ಎಷ್ಟಿದೆ.? ಸರ್ಕಾರಿ ಜಮೀನುಗಳಿಗೆ ಏನು ಕ್ರಮ ತೆಗೆದುಕೊಂಡಿದ್ದಾರೆ...? ಸರ್ಕಾರಿ ಜಮೀನುಗಳು ವಿವರ ನೀಡಿ. ಮತ್ತು ರೈತರು ಆತ್ಮಹತ್ಯೆ ಪ್ರಕರಣಗಳು ಮತ್ತು ಪರಿಹಾರ ಏನು ನೀಡಿದ್ದೀರಿ...? ದೇವಸ್ಥಾನಗಳ ಮಾಹಿತಿ ಜೀರ್ಣೋದ್ಧಾರ ಅನುದಾನ ರೈತರು ಬೆಳೆ ಹಾನಿಯಾಗಿ ಮಾಹಿತಿ ಕೆರೆಗಳ ನೀರು ತುಂಬಿಸುವ. ವಿಧಾನ ವೇತನ ಬಂದು ಅರ್ಜಿಗಳು ವಿಲೇವಾರಿ. ಸೇರಿದಂತೆ ಇತರರು ಸರ್ಕಾರದ ಯೋಜನೆ ಅಂಶಗಳನ್ನೊಳಗೊಂಡು ಮಾತನಾಡಿದರು.

- ಗ್ರಾಮ ಆಡಳಿತ ಅಧಿಕಾರಿಗಳು ಆಯಾ ಹಳ್ಳಿಗಳಲ್ಲಿಯೇ ಇರಬೇಕು. ಆದರೆ ಬಹುತೇಕರು ಸಿಂಧನೂರಿನಲ್ಲಿ ಕಚೇರಿ ಮಾಡಿ ಜನರನ್ನು ಕರೆಸಿಕೊಳ್ಳುತ್ತಾರೆ.
- ಜನರ ಯಾವ ಕೆಲಸಗಳು ಸಮರ್ಪಕವಾಗಿ ನಡೆಯುತ್ತಿಲ್ಲ.
- ಬೆಳೆ ಸರ್ವೇಯಲ್ಲಿ ರೈತರಿಂದ ನಾಲ್ಕೈದು ಸಾವಿರ ರೂಪಾಯಿ ಹಣ ಪಡೆದು ನಕಲಿಯಾಗಿ ಬೆಳೆ ನಮೂದು ಮಾಡಲಾಗಿದೆ. ಭತ್ತ ಇರುವುದನ್ನು ಜೋಳವೆಂದು ತೋರಿಸಿದ್ದು, ಈ ರೀತಿ ಮಾಡಲು ಕಾರಣವೇನು? ಹಣಕೊಟ್ಟರೆ ಏನಾದರೂ ಮಾಡುವಿರಾ? ನನ್ನ ಬಳಿ ಸರ್ವೇ ನಂಬರ್ ಸಹಿತ ದಾಖಲೆಗಳು ಇವೆ.
- ಪಹಣಿ ತಿದ್ದುಪಡಿ ಅರ್ಜಿಗಳು ಎಷ್ಟಿವೆ? ಬಾಕಿ ಉಳಿದಿರುವುದೆಷ್ಟು?
- ಪೋಡಿ ಮುಕ್ತ ಗ್ರಾಮಗಳು ಎಷ್ಟು?
- ಜನಸ್ಪಂದನ ಸಭೆಗಳು ಎಲ್ಲೆಲ್ಲಿ ನಡೆದಿವೆ. ಸಲ್ಲಿಕೆಯಾದ ಅರ್ಜಿಗಳು ಎಷ್ಟು? ಎಷ್ಟು ಸಮಸ್ಯೆ ಇತ್ಯರ್ಥ ಮಾಡಿದ್ದೀರಿ.
- ಮಾಸಾಶನಕ್ಕೆ ಸಂಬಂಧಿಸಿದಂತೆ ಅಭಿಯಾನ ಮಾಡಿ ಜನರಿಗೆ ಸೌಲಭ್ಯ ನೀಡುವ ಕೆಲಸ ಆಗಬೇಕು.
- ಸರಕಾರಿ ಭೂಮಿ ಎಷ್ಟಿದೆ? ಎಷ್ಟು ನಿಮ್ಮ ಕಬ್ಜಾದಲ್ಲಿ ಇದೆ. ಒತ್ತುವರಿಯಾಗಿರುವುದೆಷ್ಟು?
- ಸರಕಾರಿ ಭೂಮಿ ರಕ್ಷಣೆಗೆ ಏನು ಕ್ರಮ ಕೈಗೊಂಡಿದ್ದೀರಿ? ಎಂದು ಕೆಲವು ಸರ್ಕಾರದ ಯೋಜನೆಗಳ ಕುರಿತು ವಿಚಾರಣೆ ಮಾಡಿ ಸರ್ಕಾರದ ಯೋಜನೆಗಳನ್ನು ಸರಿಯಾಗಿ ಸಾರ್ವಜನಿಕರಿಗೆ ಮಾಹಿತಿ ನೀಡಿ ಅವರಿಗೆ ತಲುಪುವಂತೆ ಕೆಲಸ ಮಾಡಬೇಕು ಎಂದು ಕೆಲವು ಅಧಿಕಾರಿಗಳಿಗೆ ಸೂಚನೆ ನೀಡಿದರು.

ವೈನಾಡ್‌ನಲ್ಲಿ ಪ್ರಿಯಾಂಕಾ ಗಾಂಧಿ ಗೆಲುವು ಖಚಿತ

• ಉದಯವಾಹಿನಿ, ಯಾದಗಿರಿ



ಉದಯವಾಹಿನಿ ಚಿತ್ರ

ಕೇರಳದ ವೈನಾಡ ಲೋಕಸಭಾ ಉಪಚುನಾವಣೆ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವ ಶ್ರೀಮತಿ ಪ್ರಿಯಾಂಕ ಗಾಂಧಿ ಗೆಲುವು ಖಚಿತ ಎಂದು ಕಾಂಗ್ರೇಸ್ ಯುವ ಮುಖಂಡ ಹಾಗೂ ಅಸಂಘಟಿತ ಕಾರ್ಮಿಕ ನೌಕರರ ಸಮಿತಿಯ ರಾಜ್ಯ ಘಟಕದ ಮುಖಂಡರಾದ ಸಿದ್ದಲಿಂಗರೆಡ್ಡಿ ಕಂದುಕೂರ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಪ್ರಿಯಾಂಕ ಗಾಂಧಿ ಸ್ಪರ್ಧಿಸುತ್ತಿರುವ ವೈನಾಡು ಲೋಕಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಅವರ ಪರ ಪ್ರಚಾರದಲ್ಲಿ ತೊಡಗಿಸಿಕೊಂಡು ವೈನಾಡು ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಪ್ರಚಾರ ಕೈಗೊಂಡು ಅವರು ಮಾತನಾಡಿದರು. ಗಾಂಧಿ ಮನೆತನವು ದೇಶಕ್ಕಾಗಿ ತ್ಯಾಗ ಬಲಿದಾನ ಕೊಡುಗೆಯನ್ನು ನೀಡಿದ್ದಾರೆ.

ದಿವಂಗತ ಇಂದಿರಾಗಾಂಧಿಯವರ ತತ್ವ ಆದರ್ಶಗಳನ್ನು ಮೈಗೂಡಿಸಿಕೊಂಡಿರುವ ಅವರ ಮೊಮ್ಮಗಳು ಶ್ರೀಮತಿ ಪ್ರಿಯಾಂಕ ಗಾಂಧಿ ಸರಳ ಸಜ್ಜನಿಕೆಯಾಗಿದ್ದು ಜನರ ಸೇವೆ ಮಾಡುವ ನಿಟ್ಟಿನಲ್ಲಿ ಅವರು ಚುನಾವಣೆ ಕಣಕ್ಕೆ ಇಳಿದಿದ್ದಾರೆ. ದೇಶದ ಅಭಿವೃದ್ಧಿಯಲ್ಲಿ ಕಾಂಗ್ರೆಸ್ ಪಕ್ಷದ ಪಾತ್ರ ಅತ್ಯಂತ ಪ್ರಮುಖವಾಗಿದೆ ಮೊದಲಿನಿಂದಲೂ ಕಾಂಗ್ರೇಸ್ ಪಕ್ಷ ಬಡವರ ಪರವಾಗಿದ್ದು ಜನತೆಗೆ ಕಾಂಗ್ರೇಸ್ ಪಕ್ಷದ ಮೇಲೆ ವಿಶ್ವಾಸವಿದೆ ಹತ್ತು ವರ್ಷಗಳ ಬಿಜೆಪಿಯ ದುರಾಡಳಿತ ಹಾಗೂ ಮೋದಿಯವರ ಸುಳ್ಳು ಭರವಸೆಯಿಂದ ಜನತೆ ರೋಸಿ ಹೋಗಿದ್ದು ಈ ಬಾರಿ ಜನ ಕಾಂಗ್ರೇಸ್ ಪಕ್ಷದ ಪರ ಬೆಂಬಲವಾಗಿ ನಿಂತಿದ್ದು ಶ್ರೀಮತಿ ಪ್ರಿಯಾಂಕ ಗಾಂಧಿರವರ ಗೆಲುವು ಖಚಿತ ಅತ್ಯಂತ ಹೆಚ್ಚು ಮತಗಳ ಅಂತರದಿಂದ ಗೆಲವು ಸಾಧಿಸಲಿದ್ದಾರೆ ಎಂದು ವೈನಾಡ್ ಲೋಕಸಭಾ ಉಪಚುನಾವಣೆಯ ಪ್ರಚಾರ ಸಮಿತಿಯ ಸಿದ್ಧಲಿಂಗರೆಡ್ಡಿ ಕಂದುಕೂರ ತಿಳಿಸಿದ್ದಾರೆ.

ಮೂಲ ಸೌಕರ್ಯಕ್ಕೆ ಮೊದಲ ಆದ್ಯತೆ ನೀಡಿ: ಸ್ವರೂಪಾ

• ಉದಯವಾಹಿನಿ, ಕಲಘಟಗಿ

ಉದಯವಾಹಿನಿ ಚಿತ್ರ

ಗ್ರಾಮೀಣ ಭಾಗದ ಮೂಲ ಸೌಕರ್ಯಕ್ಕೆ ಮೊದಲ ಆದ್ಯತೆ ನೀಡಬೇಕು ಎಂದು ಜಿಲ್ಲಾ ಪಂಚಾಯಿತಿ ಸಿಇಒ ಸ್ವರೂಪಾ ಟಿ.ಕೆ.ಅಧಿಕಾರಿಗಳಿಗೆ ಸೂಚಿಸಿದರು.

ತಾಲ್ಲೂಕಿನ ದೇವಲಿಂಗಕೊಪ್ಪ, ಮುಕ್ಕಲ, ದುಮ್ಮವಾಡ, ಹಿರೇಹೊನ್ನಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಸಮಸ್ಯೆಗಳ ಆಲಿಸಿ ನರೇಗಾ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ ನಡೆಸಿದರು.

ಗ್ರಾಮೀಣ ಭಾಗದಲ್ಲಿ ಸ್ವಚ್ಛತೆ, ಆರೋಗ್ಯ ಕೇಂದ್ರ, ಶಾಲೆಗಳ ಶೌಚಾಲಯ, ಕುಡಿಯುವ ನೀರಿನ ಮೂಲಗಳ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ತಾಲ್ಲೂಕು ಪಂಚಾಯಿತಿ ಇಒ ಪರಶುರಾಮ ಸಾವಂತ ಮಾತನಾಡಿ, ಪ್ರಸಕ್ತ ಸಾಲಿನಲ್ಲಿ ಮಳೆಗೆ ಕೆರೆ ಕಟ್ಟೆಗಳು ಭರ್ತಿಯಾಗಿದ್ದು ಸ್ವಚ್ಛತೆ ಕಾಪಾಡಿಕೊಂಡು ಜನರಿಗೆ ನೀರಿನ ಸಮಸ್ಯೆಯಾಗದಂತೆ ನಿಗಾವಹಿಸಬೇಕು' ಎಂದು ಪಿಡಿಒ ಹಾಗೂ ಸ್ಥಳೀಯ ಜನ ಪ್ರತಿನಿಧಿಗಳಿಗೆ ತಿಳಿಸಿದರು. ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಗ್ರಾಮ ಪಂಚಾಯಿತಿಯಿಂದ ಕ್ರಿಯಾಯೋಜನೆ ತಯಾರಿಸಿ ಮತ್ತು ಕೂಲಿ ಕಾರ್ಮಿಕರಿಗೆ ನರೇಗಾ ಯೋಜನೆಯಡಿ ಕಡ್ಡಾಯವಾಗಿ ಕೆಲಸ ನೀಡಲು ತಿಳಿಸಿದರು.

ತಾಲ್ಲೂಕು ಉದ್ಯೋಗ ಖಾತ್ರಿ ನಿರ್ದೇಶಕ ಅಜಯ್ ಎನ್, ಗ್ರಾಮ ಪಂಚಾಯಿತಿ ಪಿಡಿಒ ನಾಗರಾಜಕುಮಾರ್ ಬೀದರಳ್ಳಿ, ನಾಗರಾಜ ಗಿರಿಯಪ್ಪನವರ, ಉಮೇಶ ಚಿಕ್ಕನವರ, ಇಂಜನಿಯರ, ವರುಣ್ ಕುಲಕರ್ಣಿ, ಅಭಿಷೇಕ್, ಸದಸ್ಯರಾದ ಲಿಂಗರೆಡ್ಡಿ ನಡುವಿನಮನಿ, ವಿನಾಯಕ ಧನಿಗೊಂಡ ಇದ್ದರು.

ಮನೆ ಬಾಗಿಲಿಗೆ ಆಡಳಿತ: ಶಾಸಕ ತಮ್ಮಯ್ಯ

• ಉದಯವಾಹಿನಿ, ಚಿಕ್ಕಮಗಳೂರು

ಉದಯವಾಹಿನಿ ಚಿತ್ರ

ಜನಸಂಪರ್ಕ ಸಭೆ ನಡೆಸುವ ಮೂಲಕ ಆಡಳಿತ ವ್ಯವಸ್ಥೆಯನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಉದ್ದೇಶ ಹೊಂದಲಾಗಿದೆ' ಎಂದು ಕ್ಷೇತ್ರದ ಶಾಸಕ ಎಚ್.ಡಿ. ತಮ್ಮಯ್ಯ ಹೇಳಿದರು.ನಗರಸಭೆ ವತಿಯಿಂದ ನಗರದ ವಾರ್ಡ್ ನಂ.26, 27ರಲ್ಲಿ ಏರ್ಪಡಿಸಲಾಗಿದ್ದ ಜನಸಂಪರ್ಕ ಸಭೆಯಲ್ಲಿ ಅವರು ಮಾತನಾಡಿದರು.

ನಗರಸಭೆ, ನಗರಾಭಿವೃದ್ಧಿ ಪ್ರಾಧಿಕಾರ, ಸಣ್ಣ ನೀರಾವರಿ ಇಲಾಖೆ, ಮೆಸ್ಕಾಂ, ಆಹಾರ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆ ವ್ಯಾಪ್ತಿಗೆ ಬರುವ ಸಮಸ್ಯೆಗಳ ಬಗ್ಗೆ ಚರ್ಚೆಸಲಾಗಿದೆ. ದೇವಸ್ಥಾನ, ಸಮುದಾಯ ಭವನ, ರಸ

ಎಡಗಣ್ಣಿನ ಚಿಕಿತ್ಸೆಗಾಗಿ ಆಸ್ಪತ್ರೆಗೆ ಹೋದ ಬಾಲಕನ ಬಲ ಕಣ್ಣಿಗೆ ಆಪರೇಷನ್

ನೋಯ್ಡಾದಲ್ಲಿ ವೈದ್ಯರ ಎಡವಟ್ಟು, ಆಸ್ಪತ್ರೆಯ ಪರವಾನಗಿ ರದ್ದಿಗೆ ಆಗ್ರಹ, ಎಡಗಣ್ಣಿನ ಚಿಕಿತ್ಸೆಗೆ ಹೋದ ಬಾಲಕನಿಗೆ, ಬಲಗಣ್ಣಿಗೆ ಶಸ್ತ್ರಚಿಕಿತ್ಸೆ

ಬಾಲಕನ ಪೋಷಕರಿಂದ ಆಕ್ರೋಶ

ನೋಯ್ಡಾ: ಎಡಗಣ್ಣಿನ ಚಿಕಿತ್ಸೆಗಾಗಿ ಆಸ್ಪತ್ರೆಗೆ ಹೋದ ಬಾಲಕನಿಗೆ, ವೈದ್ಯರು ಬಲ ಕಣ್ಣಿನ ಶಸ್ತ್ರಚಿಕಿತ್ಸೆ ನಡೆಸಿರುವ ಆಘಾತಕಾರಿ ಘಟನೆ ಗ್ರೇಟರ್ ನೋಯ್ಡಾದಲ್ಲಿ ನಡೆದಿದೆ. ಈ ಕುರಿತು ಬಾಲಕನ ಪೋಷಕರು ವೈದ್ಯರ ವಿರುದ್ಧ ಆಕ್ರೋಶ ಹೊರಹಾಕಿದ್ದು, ಪೊಲೀಸ್ ದೂರು ನೀಡಿದ್ದಾರೆ. ವೈದ್ಯರ ಹಾಗೂ ಆಸ್ಪತ್ರೆಯ ಪರವಾನಗಿಯನ್ನು ರದ್ದು ಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

ಎಡಗಣ್ಣಿನಲ್ಲಿ ಆಗಾಗ್ಗೆ ನೀರು ಬರುತ್ತಿದ್ದರಿಂದ 7 ವರ್ಷದ ಬಾಲಕ ಯುಧಿಷ್ಠರ್‌ನನ್ನು ವೈದ್ಯರು ಪರೀಕ್ಷೆಗೆ ಒಳಪಡಿಸಿದ್ದರು. ಬಳಿಕ ಕಣ್ಣಿನಲ್ಲಿ ಅಲರ್ಜಿ ಆಗಿದೆ ಎಂದು ಹೇಳಿ ಔಷಧ ನೀಡಿದ್ದರು. ಒಂದು ವಾರ ಕಳೆದರೂ, ಸಮಸ್ಯೆ ಮಾತ್ರ ನಿವಾರಣೆ ಆಗಿರಲಿಲ್ಲ. ಹೀಗಾಗಿ ಮತ್ತೆ ಆಸ್ಪತ್ರೆಗೆ ಹೋದಾಗ ಅರವಳಿಕೆ ನೀಡಿ ಶಸ್ತ್ರಚಿಕಿತ್ಸೆ ಮಾಡಬೇಕು, 45 ಸಾವಿರ ಖರ್ಚಾಗುತ್ತದೆ ಎಂದು ವೈದ್ಯ ಡಾ.ಆನಂದ್ ವರ್ಮಾ ಹೇಳಿದ್ದರು. ಅವರ ಮಾತಿಗೆ ಒಪ್ಪಿಸಿ ಸೂಚಿಸಿದೆ. ಕೊನೆಗೆ ಶಸ್ತ್ರಚಿಕಿತ್ಸೆಯಶಸ್ವಿಯಾಗಿದೆ. ಕಣ್ಣಿನಿಂದ ಪ್ಲಾಸ್ಟಿಕ್‌ನಂತಹ ವಸ್ತುವನ್ನು ಹೊರತೆಗೆಯಲಾಗಿದೆ ಎಂಬುದಾಗಿ ತಿಳಿಸಿದರು ಎಂದು ಬಾಲಕನ ತಂದೆ ನಿತಿನ್ ಭಾಟಿ ಹೇಳಿಕೊಂಡಿದ್ದಾರೆ.

ಎಡವಟ್ಟಾಗಿರುವುದು ಗೊತ್ತಾಗಿದ್ದು ಹೇಗೆ?: ಶಸ್ತ್ರಚಿಕಿತ್ಸೆ ಯಶಸ್ವಿಯಾಗಿದೆ ಎಂದು ವೈದ್ಯರು ತಿಳಿಸುತ್ತಿದ್ದಂತೆ ಬಾಲಕ ಹಾಗೂ ತಂದೆ ಮನೆಗೆ ಮರಳಿದ್ದಾರೆ. ಮಗ ಮನೆಗೆ ಬರುತ್ತಿದ್ದಂತೆ, ಎಡಗಣ್ಣಿನ ಬದಲು ಬಲ ಗಣ್ಣಿಗೆ ಬ್ಯಾಂಡೇಜ್ ಹಾಕಿರುವುದನ್ನು ಕಂಡು ತಾಯಿ ಕಂಗಾಲಾಗಿದ್ದಾರೆ. ಬಳಿಕ ಸೂಕ್ಷ್ಮವಾಗಿ ಗಮನಿಸಿದಾಗ ವೈದ್ಯರು ತಪ್ಪಾಗಿ ಶಸ್ತ್ರಚಿಕಿತ್ಸೆ ನಡೆಸಿದ್ದಾರೆ ಎಂಬುದು ಖಚಿತವಾಗಿದೆ. ಕೊನೆಗೆ ಆಸ್ಪತ್ರೆಗೆ ಬಂದು ಪ್ರಶ್ನಿಸಿದಾಗ, ಅಲ್ಲಿದ್ದ ವೈದ್ಯರು ಹಾಗೂ ಸಿಬ್ಬಂದಿ ನಮ್ಮೊಂದಿಗೆ ಅನುಚಿತವಾಗಿ ವರ್ತಿಸಿದ್ದಾರೆ ಎಂದು ನಿತಿನ್ ಭಾಟಿ ಆರೋಪಿಸಿದ್ದಾರೆ. ಪ್ರಕರಣ ದಾಖಲಿಸಿರುವ ಪೊಲೀಸರು, ಶೀಘ್ರವೇ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದಾರೆ.

ಚೆನ್ನೈನಲ್ಲಿ ಕರ್ತವ್ಯ ನಿರತ ಡಾಕ್ಟರ್‌ಗೆ ಚೂರಿ ಇರಿತ: ಸರ್ಕಾರಿ ಆಸ್ಪತ್ರೆಯಲ್ಲಿ ಕರ್ತವ್ಯನಿರತ ವೈದ್ಯನಿಗೆ ರೋಗಿಯ ಮಗ ಚಾಕುವಿನಿಂದ 7 ಬಾರಿ ಮನಬಂದಂತೆ ಇರಿದ ಘಟನೆ ಚೆನ್ನೈನಲ್ಲಿ ನ.13ರಂದು ನಡೆದಿದೆ. ಆರೋಪಿಯನ್ನು ಪೆರುಗುಳತ್ತೂರಿನ ವಿಘ್ನೇಶ್ ಎಂದು ಗುರುತಿಸಲಾಗಿದೆ. ಬೆಳಗ್ಗೆ 10:30ರ ವೇಳೆ ಆಸ್ಪತ್ರೆಗೆ ಬಂದಿದ್ದ ಈತ ಹೊರರೋಗಿ ಕೊಠಡಿಯಲ್ಲಿ ಆಂಕೋಲಾಜಿ ವಿಭಾಗದ ಸಹ ಪ್ರಾಧ್ಯಾಪಕ ಡಾ.ಬಾಲಾಜಿ ಅವರಿಗೆ ಏಳು ಬಾರಿ ಇರಿದಿದ್ದಾನೆ. ವಿಘ್ನೇಶ್ ತಾಯಿ ಕಳೆದ ಕೆಲವು ಸಮಯದಿಂದ ಆಸ್ಪತ್ರೆಯಲ್ಲಿ ಕ್ಯಾನ್ಸರ್‌ಗೆ ಚಿಕಿತ್ಸೆ ಪಡೆಯುತ್ತಿದ್ದರು. ಕಿಮೋಥೆರಪಿ ಕೂಡ ಮಾಡಿಸಿಕೊಂಡಿದ್ದರು. ಶ್ವಾಸಕೋಶದ ಸಮಸ್ಯೆಯಿಂದ ಬಳಲುತ್ತಿದ್ದ ಅವರನ್ನು ಮನೆಗೆ ಕರೆದೊಯ್ದಿದ್ದರು. ಕೆಲ ದಿನಗಳ ಹಿಂದೆ ಅನಾರೋಗ್ಯ ಕಾಣಿಸಿಕೊಂಡಾಗ ಮತ್ತೆ ಆಸ್ಪತ್ರೆಗೆ ಕರೆದುಕೊಂಡು ಬಂದಿದ್ದಾರೆ. ಇನ್ನು ವಿಘ್ನೇಶ್ ಗಿಂಡಿಯಲ್ಲಿರುವ ಕಲೈಂಜರ್ ಸೆಂಟಿನರಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಭೇಟಿ ನೀಡಿದಾಗ ಏಕಾಏಕಿ ಡಾ.ಬಾಲಾಜಿ ಅವರ ಕೊಠಡಿಯಲ್ಲಿ ಹಲ್ಲೆ ನಡೆಸಿದ್ದಾನೆ ಎಂದು ಆಸ್ಪತ್ರೆಯ ನಿರ್ದೇಶಕ ಡಾ.ಎಲ್.ಪಾರ್ಥಸಾರಥಿ ತಿಳಿಸಿದ್ದಾರೆ.

ವೈದ್ಯರ ಹಾಗೂ ಆಸ್ಪತ್ರೆಯ ಪರವಾನಗಿಯನ್ನು ರದ್ದು ಪಡಿಸಿ

ಎಡಗಣ್ಣಿನ ಚಿಕಿತ್ಸೆಗಾಗಿ ಆಸ್ಪತ್ರೆಗೆ ಹೋದ ಬಾಲಕನಿಗೆ, ವೈದ್ಯರು ಬಲ ಕಣ್ಣಿನ ಶಸ್ತ್ರಚಿಕಿತ್ಸೆ ನಡೆಸಿರುವ ಆಘಾತಕಾರಿ ಘಟನೆ ಗ್ರೇಟರ್ ನೋಯ್ಡಾದಲ್ಲಿ ನಡೆದಿದೆ. ಈ ಕುರಿತು ಬಾಲಕನ ಪೋಷಕರು ವೈದ್ಯರ ವಿರುದ್ಧ ಆಕ್ರೋಶ ಹೊರಹಾಕಿದ್ದು, ಪೊಲೀಸ್ ದೂರು ನೀಡಿದ್ದಾರೆ. ವೈದ್ಯರ ಹಾಗೂ ಆಸ್ಪತ್ರೆಯ ಪರವಾನಗಿಯನ್ನು ರದ್ದು ಪಡಿಸಬೇಕು ಎಂದು ಆಗ್ರಹಿಸಿದ್ದಾರೆ. ಎಡಗಣ್ಣಿನ ಬದಲು ಬಲಗಣ್ಣಿಗೆ ಬ್ಯಾಂಡೇಜ್ ಹಾಕಿರುವುದನ್ನು ಕಂಡು ತಾಯಿ ಕಂಗಾಲಾಗಿದ್ದಾರೆ. ಬಳಿಕ ಸೂಕ್ಷ್ಮವಾಗಿ ಗಮನಿಸಿದಾಗ ವೈದ್ಯರು ತಪ್ಪಾಗಿ ಶಸ್ತ್ರಚಿಕಿತ್ಸೆ ನಡೆಸಿದ್ದಾರೆ ಎಂಬುದು ಖಚಿತವಾಗಿದೆ.

ಮುಖ್ಯ ವೈದ್ಯಕೀಯ ಅಧಿಕಾರಿಗೆ ದೂರು

ವೈದ್ಯರ ನಿರ್ಲಕ್ಷ್ಯದ ವಿರುದ್ಧ ಬಾಲಕನ ಕುಟುಂಬ ಗೌತಮ್ ಬುದ್ಧ ನಗರದ ಮುಖ್ಯ ವೈದ್ಯಕೀಯ ಅಧಿಕಾರಿಗೆ ದೂರು ನೀಡಿದೆ. ಕೂಡಲೇ ವೈದ್ಯರ ಹಾಗೂ ಆಸ್ಪತ್ರೆಯ ಪರವಾನಗಿ ರದ್ದುಪಡಿಸಬೇಕು ಎಂದು ಬಾಲಕನ ತಂದೆ ತಂದೆ ನಿತಿನ್ ಭಾಟಿ ತಮ್ಮ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಟ್ರಂಪ್ ಗೆಲುವಿನ ನಂತರ ಅಮೆರಿಕದಲ್ಲಿ ದೀಪಾವಳಿ ಆಚರಣೆ

ವಾಷಿಂಗ್ಟನ್: ಕಳೆದ ವಾರ ನಡೆದ ಅಧ್ಯಕ್ಷೀಯ ಚುನಾವಣೆಯ ನಂತರ ಯುಎಸ್ ಕಾಂಗ್ರೇಸ್‌ನಲ್ಲಿ ನಡೆದ ಮೊದಲ ಪ್ರಮುಖ ಕಾರ್ಯಕ್ರಮವಾಗಿ ಎರಡು ಡಜನ್‌ಗಿಂತಲೂ ಹೆಚ್ಚು ಸಂಸದರು ಮತ್ತು ಪ್ರಖ್ಯಾತ ಭಾರತೀಯ ಅಮೆರಿಕನ್ನರು ದೀಪಾವಳಿಯನ್ನು ಆಚರಿಸಿದರು.

ವಾರ್ಷಿಕ ದೀಪಾವಳಿ ಅಟ್ ಕ್ಯಾಪಿಟಲ್ ಹಿಲ್ ಅನ್ನು ಶ್ರೀ ಸ್ವಾಮಿನಾರಾಯಣ ಮಂದಿರವೂ ಹಿಂದೂ ಅಮೇರಿಕನ್ ಫೌಂಡೇಶನ್, ಸಿಖ್ಸ್ ಫಾರ್ ಅಮೇರಿಕಾ, ಜೈನ್ ಅಸೋಸಿಯೇಶನ್ ಆಫ್ ನಾರ್ತ್ ಅಮೇರಿಕಾ, ಆರ್ಟ್ ಆಫ್ ಲಿವಿಂಗ್ ಸೇರಿದಂತೆ ಹಲವಾರು ಇತರ ಭಾರತೀಯ ಅಮೇರಿಕನ್ ಸಂಸ್ಥೆಗಳ ಸಹಯೋಗದೊಂದಿಗೆ ಆಯೋಜಿಸಿತ್ತು. ಕಳೆದ ವಾರ ನಡೆದ ಅಧ್ಯಕ್ಷೀಯ ಚುನಾವಣೆಯಲ್ಲಿ ಗೆದ್ದ ನಂತರ ಅಧ್ಯಕ್ಷರಾಗಿ ಚುನಾಯಿತ ಡೊನಾಲ್ಡ್ ಟ್ರಂಪ್ ಅಧಿಕಾರ ವಹಿಸಿಕೊಳ್ಳಲಿದ್ದಾರೆ. ದೀಪಾವಳಿ ಆಚರಣೆಯಲ್ಲಿ ಮಾತನಾಡಿದ ಸೆನೆಟರ್ ರಾಂಡ್ ಪಾಲ್ ಅವರು ಯುಎಸ್ ವಲಸಿಗರ ನಾಡು, ಇದು ವಿಶ್ವದಾದ್ಯಂತ ಅತ್ಯುತ್ತಮ ಮತ್ತು ಪ್ರಕಾಶ ಮಾನವಾದವರನ್ನು ಆಕರ್ಷಿಸುತ್ತದೆ, ಅವರು ಅಮೆರಿಕವನ್ನು ಶ್ರೇಷ್ಠ ದೇಶವನ್ನಾಗಿ ಮಾಡಲು ಬೆರೆತಿದ್ದಾರೆ ಎಂದು ಒತ್ತಿ ಹೇಳಿದರು. ನಾನು ಹೆಚ್ಚು ಕಾನೂನುಬದ್ಧ ವಲಸೆಯ ದೊಡ್ಡ ವಕೀಲನಾಗಿದ್ದೇನೆ ಮತ್ತು ಅದನ್ನು ವಿಸ್ತರಿಸಲು ಹಲವು ಮಸೂದೆಗಳನ್ನು ಹೊಂದಿದ್ದೇನೆ ಮತ್ತು ನಾನು ಅದರ ಮೇಲೆ ಕೆಲಸ ಮಾಡಲಿದ್ದೇನೆ. ಶುಭ ದೀಪಾವಳಿಯ ಶುಭಾಶಯಗಳು ಎಂದು ಪಾಲ್ ಹೇಳಿದರು.

ಈ ಸಂದರ್ಭದಲ್ಲಿ ಭಾರತೀಯ ಅಮೆರಿಕನ್ನರಿಗೆ ಶುಭಾಶಯ ಕೋರಿದ ಮಿಸ್ಸಿಸ್ಸಿಪ್ಪಿ ಸೆನೆಟರ್ ಸಿಂಡಿ ಹೈಡ್-ಸಿತ್ ಅವರು ಮುಂದಿನ ನಾಲ್ಕು ವರ್ಷಗಳ ಶ್ರೇಷ್ಠತೆಯನ್ನು ಎದುರು ನೋಡುತ್ತಿರುವುದಾಗಿ ಹೇಳಿದರು. ನಾವು ಈ ದೇಶಕ್ಕೆ ಸಮೃದ್ಧಿಯನ್ನು ಒದಗಿಸಲು ಬಯಸುತ್ತೇವೆ, ಹೊಸದನ್ನು ಹುಡುಕಲು ಬಯಸುವವರಿಗೆ, ಹೊಸದನ್ನು ಮಾಡಲು ಎಂದು ಅವರು ಹೇಳಿದರು.

> ನಾವು ಸ್ಥಿರ ವಾತಾವರಣವನ್ನು ಹೊಂದಲು ಬಯಸುತ್ತೇವೆ ಎಂದು ನಾವು ನಿಮನ್ನು ಪ್ರೋತ್ಸಾಹಿಸಲು ಬಯಸುತ್ತೇವೆ. ನಾವು ಉತ್ತಮ ಆರ್ಥಿಕತೆಯನ್ನು ಬಯಸುತ್ತೇವೆ. ನಿಮ ಕುಟುಂಬವನ್ನು ಬೆಳೆಸಲು ಎಲ್ಲರಿಗೂ ಸುರಕ್ಷಿತ ಸ್ಥಳವನ್ನು ನಾವು ಬಯಸುತ್ತೇವೆ, ಎಂದು ಅವರು ಹೇಳಿದರು, ಯುನೈಟೆಡ್ ಸ್ಟೇಟ್ಸ್‌ನಲ್ಲಿ ಭಾರತದ ರಾಯಭಾರಿ ವಿನಯ್ ಮೋಹನ್ ಕ್ವಾತ್ರಾ ಅವರನ್ನು ಒಳಗೊಂಡ ಸಭೆಯನ್ನು ಉದ್ದೇಶಿಸಿ ಅವರು ಹೇಳಿದರು.

ಹವಾಮಾನ ಮಾಲಿನ್ಯ ಕಡಿಮೆ ಮಾಡಿಕೊಳ್ಳಲು ಸಲಹೆ



ಬಾಕು: ಮೀಥೇನ್ ಮತ್ತು ಕಪ್ಪು ಇಂಗಾಲದಂತಹ ಅಲ್ಪಾವಧಿಯ ಹವಾಮಾನ ಮಾಲಿನ್ಯಕಾರಕಗಳನ್ನು ಕಡಿಮೆ ಮಾಡಲು ಭಾರತ ಕ್ರಮ ಕೈಗೊಳ್ಳಬೇಕು ಎಂದು ಸಿಒಪಿ 29 ಹವಾಮಾನ ಶೃಂಗಸಭೆಯಲ್ಲಿ ತಜ್ಞರು ಒತ್ತಾಯಿಸಿದ್ದಾರೆ. ರಾಷ್ಟ್ರರಾಜಧಾನಿ ನವದೆಹಲಿಯಲ್ಲಿ ಮಾಲಿನ್ಯವು ಹದಗೆಡುತ್ತಿರುವಾಗ, ಗಾಳಿಯ ಗುಣಮಟ್ಟ ಕುಸಿತ ಮತ್ತು ಜಾಗತಿಕ ತಾಪಮಾನ ಏರಿಕೆಗೆ ಪ್ರಮುಖ ಕೊಡುಗೆ ನೀಡುವ ಮೀಥೇನ್ ಮತ್ತು ಕಪ್ಪು ಇಂಗಾಲದಂತಹ ಅಲ್ಪಾವಧಿಯ ಹವಾಮಾನ ಮಾಲಿನ್ಯಕಾರಕಗಳನ್ನು (ಎಸ್‌ಎಲ್‌ಸಿಪಿ) ಕಡಿಮೆ ಮಾಡುವಲ್ಲಿ ತನ್ನ ಸಾಮರ್ಥ್ಯವನ್ನು ಬಳಸಿಕೊಳ್ಳುವಂತೆ ಅವರು ಸಲಹೆ ನೀಡಿದ್ದಾರೆ. ಅಲ್ಪಾವಧಿಯ ಹವಾಮಾನ ಮಾಲಿನ್ಯಕಾರಕಗಳು (ಎಸ್‌ಎಲ್‌ಸಿಪಿಗಳು) ಹಸಿರುಮನೆ ಅನಿಲಗಳು ಮತ್ತು ವಾಯು ಮಾಲಿನ್ಯಕಾರಕಗಳ ಗುಂಪಾಗಿದ್ದು, ಇದು ಹವಾಮಾನದ ಮೇಲೆ ದೀರ್ಘಕಾಲೀನ ತಾಪಮಾನದ ಪರಿಣಾಮವನ್ನು ಬೀರುತ್ತದೆ ಮತ್ತು ಗಾಳಿಯ ಗುಣಮಟ್ಟದ ಮೇಲೆ ಪರಿಣಾಮ ಬೀರುತ್ತದೆ. ಎಸ್‌ಎಲ್‌ಸಿಪಿಗಳಲ್ಲಿ ಕಪ್ಪು ಇಂಗಾಲ, ಮೀಥೇನ್, ನೆಲಮಟ್ಟದ ಓಝೋನ್ ಮತ್ತು ಹೈಡ್ರೋಫ್ಲೋರೋಕಾರ್ಬನ್‌ಗಳು (ಎಚ್‌ಎಫ್‌ಸಿಗಳು) ಸೇರಿವೆ. ನವದೆಹಲಿಯ ಗಾಳಿಯ ಗುಣಮಟ್ಟವು ಈ ಋತುವಿನಲ್ಲಿ ಮೊದಲ ಬಾರಿಗೆ ತೀವ್ರ ಮಟ್ಟವನ್ನು ತಲುಪಿದೆ, ವಾಯು ಗುಣಮಟ್ಟ ಸೂಚ್ಯಂಕ (ಎಕ್ಯೂಐ) ಬುಧವಾರ 418 ಕ್ಕೆ ತಲುಪಿದೆ.

ಇನ್ಸ್ಟಿಟ್ಯೂಟ್ ಫಾರ್ ಗವರ್ನೆನ್ಸ್ ಅಂಡ್ ಸಸ್ಟೈನಬಲ್ ಡೆವಲಪೆಂಟ್ (ಐಜಿಎಸ್‌ಡಿ) ನ ಭಾರತ ಕಾರ್ಯಕ್ರಮದ ನಿರ್ದೇಶಕ ಜೆರಿನ್ ಓಶೋ ಮತ್ತು ಐಜಿಎಸ್‌ಡಿ ಅಧ್ಯಕ್ಷ ಡರ್ವುಡ್ ಝಿಲ್ಕೆ, ಎಸ್‌ಎಲ್‌ಸಿಪಿ ಕಡಿತದ ಕಾರ್ಯತಂತ್ರಗಳು ಮಾಲಿನ್ಯ ಮತ್ತು ಜಾಗತಿಕ ತಾಪಮಾನವನ್ನು ನಿಭಾಯಿಸಲು ಹೇಗೆ ಸಹಾಯ ಮಾಡುತ್ತದೆ ಎಂಬುದರ ಬಗ್ಗೆ ಬೆಳಕು ಚೆಲ್ಲಿದರು.

ಇಂದಿರಾಗಾಂಧಿ ಮರಳಿ ಬಂದರೂ 370ನೇ ವಿಧಿ ಮರು ಜಾರಿಯಿಲ್ಲ



ಧುಲೆ: ಇಂದಿರಾ ಗಾಂಧಿ ಮರಳಿ ಬಂದರೂ ಜಮ್ಮು-ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ಕಲ್ಪಿಸುವ 370ನೇ ವಿಧಿ ಮರು ಜಾರಿಯಾಗಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಅಮಿತ್ ಶಾ,ಇಂದಿರಾ ಗಾಂಧಿ ಸ್ವರ್ಗದಿಂದ ಹಿಂತಿರುಗಿದರೂ, 370 ನೇ ವಿಧಿ ಮರು ಜಾರಿ ಅಸಾಧ್ಯ ಎಂದರು.

ತಮ್ಮ ನಾಲ್ಕನೇ ಪೀಳಿಗೆ ಬಂದರೂ ಮುಸ್ಲಿಮರಿಗೆ ಮೀಸಲಾತಿ ಸಿಗುವುದಿಲ್ಲ ಎಂಬುದನ್ನು ಕಾಂಗ್ರೇಸ್ ನಾಯಕ ರಾಹುಲ್ ಗಾಂಧಿ ನೆನಪಿಟ್ಟುಕೊಳ್ಳಬೇಕು ಎಂದು ಹೇಳಿದರು. ಮಹಾರಾಷ್ಟ್ರದಲ್ಲಿ ಪ್ರತಿಪಕ್ಷಗಳ ಮಹಾ ವಿಕಾಸ್ ಅಘಾಡಿ ಗುಂಪನ್ನು ಔರಂಗಜೇಬ್ ಅಭಿಮಾನಿಗಳ ಕ್ಲಬ್ ಎಂದು ಬಣ್ಣಿಸಿದ ಶಾ, ಬಿಜೆಪಿ ನೇತೃತ್ವದ ಮಹಾಯುತಿ ಮೈತ್ರಿಕೂಟವು ಶಿವಾಜಿ ಮಹಾರಾಜ್ ಮತ್ತು ವೀರ್ ಸಾವರ್ಕರ್ ಅವರ ಆದರ್ಶಗಳಿಗೆ ಬದ್ಧವಾಗಿದೆ ಎಂದು ಹೇಳಿದರು.

ಮುಸ್ಲಿಮರಿಗೆ ಮೀಸಲಾತಿ ನೀಡಬೇಕಾದರೆ ಎಸ್‌ಸಿ, ಎಸ್‌ಟಿ ಮತ್ತು ಒಬಿಸಿ ಮೀಸಲಾತಿಯನ್ನು ಕಡಿತ ಗೊಳಿಸಬೇಕಾಗುತ್ತದೆ. ರಾಹುಲ್ ಬಾಬಾ, ನೀವು ಮಾತ್ರವಲ್ಲ, ನಿಮ್ಮ ನಾಲ್ಕು ತಲೆಮಾರುಗಳು ಬಂದರೂ, ಅವರು ಎಸ್‌ಸಿ, ಎಸ್‌ಟಿ ಮತ್ತು ಒಬಿಸಿಗಳಿಗೆ ಮೀಸಲಾದ ಕೋಟಾವನ್ನು ಕಡಿತ ಗೊಳಿಸಿ ಮುಸ್ಲಿಮರಿಗೆ ನೀಡಲು ಸಾಧ್ಯವಿಲ್ಲ ಎಂದು ಶಾ ಹೇಳಿದರು.

ನೆಹರೂರ 135ನೇ ಜನ್ಮದಿನಾಚರಣೆ: ಶ್ರದ್ಧಾಂಜಲಿ ಸಲ್ಲಿಸಿದ ಕಾಂಗ್ರೇಸ್ಸಿಗರು

ನವದೆಹಲಿ: ಮಾಜಿ ಪ್ರಧಾನಿ ಜವಾಹರಲಾಲ್ ನೆಹರು ಅವರ 135ನೇ ಜನ್ಮದಿನಾಚರಣೆ ಅಂಗವಾಗಿ ಕಾಂಗ್ರೇಸ್ ನಾಯಕ ಹಾಗೂ ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ. ಜವಾಹರಲಾಲ್ ನೆಹರು ಅವರ ಪ್ರಜಾಪ್ರಭುತ್ವ, ಪ್ರಗತಿಪರ, ನಿರ್ಭೀತ, ದೂರದಷ್ಟಿ, ಒಳಗೊಳ್ಳುವ ಮೌಲ್ಯಗಳಲ್ಲಿ ಭಾರತ ಯಾವಾಗಲೂ ಉಳಿಯುತ್ತದೆ ಎಂದು ಹೇಳಿದರು. ಆಧುನಿಕ ಭಾರತದ ಪಿತಾಮಹ, ಸಂಸ್ಥೆಗಳ ಸಷ್ಟಿಕರ್ತ, ಭಾರತದ ಮೊದಲ ಪ್ರಧಾನಿ ಪಂಡಿತ್ ಜವಾಹರಲಾಲ್ ನೆಹರು ಜಿ ಅವರಿಗೆ ಅವರ ಜನ ವಾರ್ಷಿಕೋತ್ಸವದಂದು ಗೌರವಯುತ ನಮಸ್ಕಾರಗಳು.

ಪ್ರಜಾಪ್ರಭುತ್ವ, ಪ್ರಗತಿಪರ, ನಿರ್ಭೀತ, ದಾರ್ಶನಿಕ ವ್ಯಕ್ತಿತ್ವ ಹೊಂದಿದ್ದರು ಎಂದು ರಾಹುಲ್ ಗಾಂಧಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಭಾರತದ ಜವಾಹರ್ ನಮ ಆದರ್ಶಗಳು ಮತ್ತು ಹಿಂದೂಸ್ಥಾನದ ಆಧಾರ ಸ್ತಂಭಗಳು ಮತ್ತು ಯಾವಾಗಲೂ ಹಾಗೆಯೇ ಉಳಿಯುತ್ತವೆ ಎಂದು ಅವರು ಹೇಳಿದ್ದಾರೆ.

ಮನಸ್ಸು ಮತ್ತು ಹೃದಯದ ಏಕತೆ ಇರಬೇಕು, ಒಟ್ಟಿಗೆ ವಾಸಿಸುವ ಭಾವನೆ ಇರಬೇಕು. ಪಂಡಿತ್ ಜವಾಹರಲಾಲ್ ನೆಹರು ಜವಾಹರ್ ಆಫ್ ಇಂಡಿಯಾ ಅವರ 135 ನೇ ಜನದಿನದಂದು , ಭಾರತವನ್ನು ಶೂನ್ಯದಿಂದ ಉತ್ತುಂಗಕ್ಕೆ ಕೊಂಡೊಯ್ದವರು, ಆಧುನಿಕ ಭಾರತದ ಶಿಲ್ಪಿ, ಭಾರತವನ್ನು ವೈಜ್ಞಾನಿಕ, ಆರ್ಥಿಕ, ಕೈಗಾರಿಕಾ ಮತ್ತು ವಿವಿಧ ಕ್ಷೇತ್ರಗಳಲ್ಲಿ ಅಭಿವದ್ಧಿಶೀಲ ರಾಷ್ಟ್ರವನ್ನಾಗಿ ಮಾಡಿದವರು ಎಂದು ಖರ್ಗೆ ಎಕ್ಸ್ ಮಾಡಿದ್ದಾರೆ.

> ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ರಾಷ್ಟ್ರದ ಮೊದಲ ಪ್ರಧಾನಿಗೆ ಗೌರವ ಸಲ್ಲಿಸಿದರು ಮತ್ತು ದೇಶಕ್ಕೆ ಅವರ ಅಭೂತಪೂರ್ವ ಕೊಡುಗೆಯನ್ನು ಸರಿಸಿದರು.ಮಾಜಿ ಪ್ರಧಾನಿ ನೆಹರು ಅವರನ್ನು ಸರಿಸುತ್ತಾ ಅವರನ್ನು ಆಧುನಿಕ ಭಾರತದ ವಾಸ್ತುಶಿಲ್ಪಿ ಎಂದು ಖರ್ಗೆ ಕರೆದರು ಮತ್ತು ಭಾರತವನ್ನು ಶೂನ್ಯದಿಂದ ಉತ್ತುಂಗಕ್ಕೆ ಕೊಂಡೊಯ್ದವರು ಅವರು ಎಂದು ಹೇಳಿದರು.

ತುಳಸಿ ಯು.ಎಸ್. ರಾಷ್ಟ್ರೀಯ ಗುಪ್ತಚರ ಮುಖ್ಯಸ್ಥೆ

ವಾಷಿಂಗ್ಟನ್: ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಗೆದ್ದಿರುವ ಡೊನಾಲ್ಡ್ ಟ್ರಂಪ್ ತಮ್ಮ ಸರ್ಕಾರದ ಪ್ರಮುಖ ಹುದ್ದೆಗಳಿಗೆ ನೇಮಕಾತಿ ನಡೆಸಿದ್ದಾರೆ. ಈ ಹಿನ್ನೆಲೆಯಲ್ಲಿ, ಅಮೆರಿಕದ ಮೊದಲ ಹಿಂದೂ ಸಂಸದೆ ತುಳಸಿ ಗಬ್ಬಾರ್ಡ್ ಅವರನ್ನು ಯುಎಸ್ ರಾಷ್ಟ್ರೀಯ ಗುಪ್ತಚರ ನಿರ್ದೇಶಕಿಯಾಗಿ ನೇಮಿಸಲಾಗಿದೆ.

ಟ್ರಂಪ್ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ತಕ್ಷಣ ಗಬ್ಬಾರ್ಡ್ ಕೂಡ ಕರ್ತವ್ಯಕ್ಕೆ ಹಾಜರಾಗಲಿದ್ದಾರೆ. ತುಳಸಿ ಅವರನ್ನು ಹೆಮ್ಮೆಯ ರಿಪಬ್ಲಿಕನ್ ಎಂದು ಟ್ರಂಪ್ ಬಣ್ಣಿಸಿದ್ದಾರೆ. ಅವರು ಅಮೆರಿಕನ್ನರು ಹೆಮ್ಮೆಪಡುವಂತೆ ಕಾರ್ಯನಿರ್ವಹಿಸಲಿದ್ದಾರೆ ಡೆಮಾಕ್ರಟಿಕ್ ಅಧ್ಯಕ್ಷೀಯ ನಾಮನಿರ್ದೇಶನಕ್ಕೆ ಮಾಜಿ ಅಭ್ಯರ್ಥಿಯಾಗಿ, ಅವರು ಎರಡೂ ಪಕ್ಷಗಳಲ್ಲಿ ವ್ಯಾಪಕ ಬೆಂಬಲವನ್ನು ಹೊಂದಿದ್ದಾರೆ ಎಂದು ಅವರು ಹೇಳಿದ್ದಾರೆ. ತುಳಸಿ ಜೊತೆಗೆ ಟ್ರಂಪ್ ಇತರ ಇಬ್ಬರಿಗೆ ಪ್ರಮುಖ ಜವಾಬ್ದಾರಿಗಳನ್ನು ವಹಿಸಿದ್ದಾರೆ. ಫ್ಲೋರ

ಯಶ್ ಜೊತೆಗಿನ ಫೋಟೋ ಹಂಚಿಕೊಂಡ ಹಾಲಿವುಡ್ ನಟಿ

ನ್ಯಾಷನಲ್ ಯಶ್ ಅವರು ಮುಂಬೈನಲ್ಲಿ 'ಟಾಕ್ಸಿಕ್' ಸಿನಿಮಾದ ಕೆಲಸದಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಹಾಲಿವುಡ್ ನಟಿ ಚೆಟಿಯಾನಾ ಗೈದರ್ ಜೊತೆ ಯಶ್ ಕಾಣಿಕೊಂಡಿರುವ ಫೋಟೋವೊಂದು ಸೋಶಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿದೆ. ರಾಕಿ ಬಾಯ್ ಜೊತೆಗಿನ ಫೋಟೋವನ್ನು ಹಾಲಿವುಡ್ ನಟಿ ಹಂಚಿಕೊಂಡಿದ್ದಾರೆ. ಇತ್ತೀಚೆಗೆ ಯಶ್ ಅವರನ್ನು ಹಾಲಿವುಡ್ ನಟಿ ಚೆಟಿಯಾನಾ ಗೈದರ್ ಭೇಟಿಯಾಗಿದ್ದಾರೆ. ನಟಿ ಗನ್ ಸಖತ್ ಆ?ಯಕ್ಷನ್ ಮಾಡಿರುವ ಸಣ್ಣ ತುಣುಕೊಂದನ್ನು ಹಂಚಿಕೊಂಡಿದ್ದಾರೆ. ಇದನ್ನು ಚೆಟಿಯಾನಾ ಚಪ್ಪಾಳೆ ಹೊಡೆದು ವೆಲ್ ಡನ್ ಎಂದಿದ್ದಾರೆ. ಈ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ತುಂಬೆಲ್ಲಾ ಸದ್ದು ಮಾಡುತ್ತಿವೆ. ಈ ಬೆನ್ನಲ್ಲೇ ಈ ಹಾಲಿವುಡ್ ನಟಿ ಕೂಡ ಟಾಕ್ಸಿಕ್ ಚಿತ್ರದಲ್ಲಿ ನಟಿಸುತ್ತಿದ್ದಾರಾ? ಎಂದು ನೆಟ್ಟಿಗರ ಚರ್ಚೆ ಶುರುವಾಗಿದೆ.

ಇತ್ತೀಚೆಗೆ ಮುಂಬೈನಲ್ಲಿ ನಡೆಯುತ್ತಿರುವ 'ಟಾಕ್ಸಿಕ್' ಸಿನಿಮಾ ಶೂಟಿಂಗ್‌ನಲ್ಲಿ ಹಾಲಿವುಡ್ ನಟ ಜೆಜೆ ಪರ?ರಿ ಭಾಗಿಯಾಗಿದ್ದಾರೆ ಎನ್ನಲಾಗಿದೆ. ಯಾವದಕ್ಕೂ ತಂಡದ ಕಡೆಯಿಂದ ಸಿನಿಮಾ ಕುರಿತು ಅಧಿಕೃತ ಮಾಹಿತಿ ಸಿಗುವವರೆಗೂ ಕಾಯಬೇಕಿದೆ.

ಪುಷ್ಪ 2 ಡಬ್ಬಿಂಗ್‌ನಲ್ಲಿ ಶ್ರೀವಲ್ಲಿ

ಕೂರ್ಗ್ ಬೆಡಗಿ ರಶ್ಮಿಕಾ ಮಂದಣ್ಣ ನಟನೆಯ 'ಪುಷ್ಪ 2' ಇದೇ ಡಿ.5ಕ್ಕೆ ರಿಲೀಸ್‌ಗೆ ಸಜ್ಜಾಗಿದೆ. ಇದರ ನಡುವೆ 'ಪುಷ್ಪ 2' ಚಿತ್ರದಲ್ಲಿನ ಶ್ರೀವಲ್ಲಿ ಪಾತ್ರಕ್ಕೆ ಡಬ್ಬಿಂಗ್ ಮುಗಿಸಿದ್ದಾರೆ. ಭಾವುಕವಾಗಿ ಸಿನಿಮಾದ ಕುರಿತು ನಟಿ ಬರೆದುಕೊಂಡಿದ್ದಾರೆ. ಈ ಸಿನಿಮಾದಲ್ಲಿದ್ದ ತನ್ನ ಪಾತ್ರದ ಡಬ್ಬಿಂಗ್ ಮುಗಿಸಿದ್ದೇನೆ ಸ್ವತಃ ರಶ್ಮಿಕಾ ತಿಳಿಸಿದ್ದಾರೆ. ತಮ್ಮ ಡಬ್ಬಿಂಗ್ ಫೋಟೋಗಳನ್ನು ಶೇರ್ ಮಾಡಿ, ಮೋಜು, ಮಸ್ತಿ ಮುಗಿದಿದೆ. ನಾನು ಡಬ್ಬಿಂಗ್ ಕೆಲಸದಲ್ಲಿ ನಿರತಳಾಗಿದ್ದೇನೆ. 'ಪುಷ್ಪ ದಿ ರೂಲ್' ಚಿತ್ರದ ಚಿತ್ರೀಕರಣ ಬಹುತೇಕ ಪೂರ್ಣಗೊಂಡಿದೆ. ಮೊದಲಿನ ಡಬ್ಬಿಂಗ್ ಕೆಲಸವನ್ನೂ ಮುಗಿಸಿದ್ದೇನೆ. ಈಗ ದ್ವಿತೀಯಾರ್ಧಕ್ಕೆ ಡಬ್ಬಿಂಗ್ ಮಾಡುತ್ತಿದ್ದೇನೆ. ಮೊದಲ ಭಾಗ ಅದ್ಭುತವಾಗಿದೆ ಎಂದಿದ್ದಾರೆ. ದ್ವಿತೀಯಾರ್ಧವು ಅದಕ್ಕಿಂತ ಹೆಚ್ಚಾಗಿರುತ್ತದೆ. ಅದನ್ನು ಪದಗಳಲ್ಲಿ ಹೇಳಲು ಸಾಧ್ಯವಿಲ್ಲ, ಮನಸ್ಸಿಗೆ ಮುದ ನೀಡುವ ಅನುಭವ ಇದು, ನಿಮಗೆ ಖಂಡಿತ ಸಿಗುತ್ತದೆ. ಈ ಚಿತ್ರವನ್ನು ನಿಮಗೆ ತೋರಿಸಲು ಕಾಯ್ತಿದ್ದೇನೆ. 'ಪುಷ್ಪ 2' ಚಿತ್ರೀಕರಣ ಮುಗಿದಿರುವುದಕ್ಕೆ ಬೇಸರವಾಗಿದೆ ಎಂದು ರಶ್ಮಿಕಾ ಬರೆದುಕೊಂಡಿದ್ದಾರೆ.ಇನ್ನೂ ಐಕಾನ್ ಸ್ಟಾರ್ ಅಲ್ಲು ಅರ್ಜುನ್‌ಗೆ ರಶ್ಮಿಕಾ ನಾಯಕಿಯಾಗಿ ನಟಿಸಿದ್ದಾರೆ. ಇವರ ಜೊತೆ ಡಾಲಿ ಧನಂಜಯ, ಅನಸೂಯ, ಫಹಾದ್ ಫಾಸಿಲ್ ಸೇರಿದಂತೆ ಅನೇಕರು ನಟಿಸಿದ್ದಾರೆ. ಚಿತ್ರದಲ್ಲಿ ಐಟಂ ಹಾಡಿಗೆ ಅಲ್ಲು ಅರ್ಜುನ್ ಜೊತೆ ಶ್ರೀಲೀಲಾ ಸೊಂಟ ಬಳುಕಿಸಿದ್ದಾರೆ. ಈ ಚಿತ್ರಕ್ಕೆ ಸುಕುಮಾರ್ ನಿರ್ದೇಶನ ಮಾಡಿದ್ದಾರೆ.

ನಟಿಯ ಪರ ವಕೀಲರು ವಾದ ಮಂಡನೆ

200 ಕೋಟಿ ರೂಪಾಯಿ ವಂಚನೆ ಪ್ರಕರಣದಲ್ಲಿ ಸುಕೇಶ್ ಚಂದ್ರಶೇಖರ್ ಜೈಲು ಸೇರಿದ್ದಾನೆ. ಆತನ ಜೊತೆ ನಂಟು ಹೊಂದಿದ್ದಕ್ಕಾಗಿ ನಟಿ ಜಾಕ್ವೆಲಿನ್ ಫರ್ನಾಂಡಿಸ್ ಅವರಿಗೂ ಸಂಕಷ್ಟ ಎದುರಾಗಿದೆ. ನಟಿಯ ವಿರುದ್ಧ ಚಾರ್ಜ್‌ಶೀಟ್ ಹಾಕಲಾಗಿದ್ದು, ಅದನ್ನು ಪ್ರಶ್ನಿಸಿ ಅವರು ದೆಹಲಿ ಹೈಕೋರ್ಟ್ ಮೆಟ್ಟಲು ಏರಿದ್ದಾರೆ. ಈ ಕೇಸ್‌ನ ವಿಚಾರಣೆ ನಡೆದಿದೆ. ಬಾಲಿವುಡ್‌ನಲ್ಲಿ ಬಹುಬೇಡಿಕೆಯ ನಟಿಯಾಗಿ ಮಿಂಚುತ್ತಿರುವ ಜಾಕ್ವೆಲಿನ್ ಫಾರ್ನಾಂಡಿಸ್ ಅವರಿಗೆ ಕೇಸ್‌ಗಳ ತಲೆ ಬಿಸಿ ಜಾಸ್ತಿ ಆಗಿದೆ. ವಂಚಕ ಸುಕೇಶ್ ಚಂದ್ರಶೇಖರ್ ಜೊತೆ ಜಾಕ್ವೆಲಿನ್ ಫರ್ನಾಂಡಿಸ್ ಆಪ್ತವಾಗಿದ್ದರು.

ವಂಚನೆ ಹಣದಲ್ಲಿ ಗಿಫ್ಟ್ ಕೊಟ್ಟ ಅಂತ ನನಗೆ ಗೊತ್ತಿರಲಿಲ್ಲ

ಅದಕ್ಕೆ ಅನೇಕ ಫೋಟೋಗಳು ಸಾಕ್ಷಿ ಒದಗಿಸಿವೆ. ಸುಕೇಶ್ ಕೊಟ್ಟಿದ್ದ ಐಷಾರಾಮಿ ಉಡುಗೊರೆಗಳನ್ನು ಕೂಡ ಜಾಕ್ವೆಲಿನ್ ಪಡೆದಿದ್ದರು. ಅವುಗಳಿಗೆ ಸಂಬಂಧಿಸಿದಂತೆ ಚಾರ್ಜ್‌ಶೀಟ್ ಸಲ್ಲಿಕೆ ಮಾಡಲಾಗಿದ್ದು, ಅದನ್ನು ಪ್ರಶ್ನಿಸಿ ಜಾಕ್ವೆಲಿನ್ ಫರ್ನಾಂಡಿಸ್ ಅವರು ದೆಹಲಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಅದರ ವಿಚಾರಣೆ ನಡೆದಿದೆ. ತಮ್ಮ ವಿರುದ್ಧ ಸಲ್ಲಿಕೆ ಆಗಿರುವ ಚಾರ್ಜ್‌ಶೀಟ್ ರದ್ದು ಮಾಡಬೇಕು ಎಂಬುದು ಜಾಕ್ವೆಲಿನ್ ಫರ್ನಾಂಡಿಸ್ ಅವರ ಮನವಿ. ಇದಕ್ಕೆ ಸಂಬಂಧಿಸಿದಂತೆ ಅವರ ವಾದ ಏನು ಎಂಬುದನ್ನು ವಕೀಲರು ತಿಳಿಸಿದ್ದಾರೆ. ಅಂದಾಜು 200 ಕೋಟಿ ರೂಪಾಯಿ ಸುಲಿಗೆ ಮತ್ತು ವಂಚನೆ ಕೇಸ್‌ನಲ್ಲಿ ಸುಕೇಶ್ ಅಂದರ್ ಆಗಿದ್ದಾನೆ. ಆದರೆ ಆತ ವಂಚನೆಯಿಂದ ತಂದ ದುಡ್ಡಿನಲ್ಲಿ ತಮಗೆ ಗಿಫ್ಟ್ ಕೊಟ್ಟಿದ್ದ ಎಂಬ ವಿಚಾರ ತಿಳಿದಿರಲಿಲ್ಲ ಎಂದಿದ್ದಾರೆ ಜಾಕ್ವೆಲಿನ್ ಫರ್ನಾಂಡಿಸ್. ಎಲ್ಲಾವೂ ಚೆನ್ನಾಗಿ ಇದ್ದಾಗ ಜಾಕ್ವೆಲಿನ್ ಫರ್ನಾಂಡಿಸ್ ಅವರು ಸುಕೇಶ್ ಚಂದ್ರಶೇಖರ್ ಜೊತೆ ಸ್ನೇಹ ಬೆಳೆಸಿದ್ದರು. ಇಬ್ಬರೂ ಆಪ್ತವಾಗಿ ಕಾಣಿಸಿಕೊಂಡ ಫೋಟೋಗಳು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆದವು. ಇದರಿಂದಾಗಿ ನಟಿಗೆ ಮುಜುಗರ ಆಯಿತು. ಹೇಗಾದರೂ ಮಾಡಿ ಈ ಕೇಸ್‌ನಿಂದ ಹೊರಗೆ ಬರಬೇಕು ಎಂದು ಜಾಕ್ವೆಲಿನ್ ಫರ್ನಾಂಡಿಸ್ ಪ್ರಯತ್ನ ಮಾಡುತ್ತಿದ್ದಾರೆ.

'ಭೋದಕ'ನಾದ ಭಜರಂಗಿ

ಭೈರತಿ ರಣಗಲ್‌ನಲ್ಲಿ ಲಾಯರ್, ಟಗರು ಸಿನಿಮಾದಲ್ಲಿ ಪೊಲೀಸ್, ಮಫ್ತಿಯಲ್ಲಿ ಡಾನ್ ಹೀಗೆ ಪ್ರತಿ ಬಾರಿಯೂ ವಿಭಿನ್ನ ಪಾತ್ರಗಳ ಮೂಲಕ ಪರಕಾಯ ಪ್ರವೇಶಿಸುವ ನಟ ಶಿವರಾಜ್ ಕುಮಾರ್ ಈಗ ಮಾಸ್ ನಿಂದ ಮೇಸ್ಟ್ರಾಗಿ ಬದಲಾಗುತ್ತಿದ್ದಾರೆ. ಭಜರಂಗಿ ಈಗ ಭೋದಕನಾಗಿದ್ದಾರೆ. ದೊಡ್ಮನೆ ದೊರೆ ಶಿವಣ್ಣ ಅವರು ಶಿವ ಸೈನ್ಯಕ್ಕೆ ಭರ್ಜರಿ ಉಡುಗೊರೆ ನೀಡಿದ್ದಾರೆ. ಈಗಾಗಲೇ ಸಾಲು ಸಾಲು ಸಿನಿಮಾಗಳಿಗೆ ಸೈ ಎಂದಿರುವ ಶಿವಣ್ಣ ಹೊಸ ಸಿನಿಮಾ ಘೋಷಿಸಿದ್ದಾರೆ. ಇಂದು ಮಕ್ಕಳ ದಿನಾಚರಣೆಯಂದು (ನ.14) ಶಿವಣ್ಣ ಮಕ್ಕಳ ಸಿನಿಮಾದಲ್ಲಿ ನಟಿಸುವ ಬಗ್ಗೆ ಗುಟ್ಟುರಟ್ಟು ಮಾಡಿದ್ದಾರೆ. 'ಸುಂದರ ಕಾಂಡ'ದಲ್ಲಿ ಸಿನಿಮಾದಲ್ಲಿ ಟೀಚರ್ ಆಗಿ ಅಭಿನಯಿಸಿದ್ದ ಕರುನಾಡ ಕಿಂಗ್ ಈಗ ಬಹಳ ವರ್ಷದ ಬಳಿಕ ಈ ರೀತಿಯ ಪಾತ್ರ ಒಪ್ಪಿಕೊಂಡಿದ್ದಾರೆ. ವಿಶೇಷ ಅಂದರೆ ಇದು ನೈಜ ಘಟನೆಯಾಧಾರಿತ ಸಿನಿಮಾ. ಲಾಂಗ್



ಬಿಟ್ಟು ಶಿವಣ್ಣ ಈಗ ಪೆನ್ನು ಹಿಡಿಯುತ್ತಿದ್ದಾರೆ. ಗುರುವಾಗುತ್ತಿರುವ ಶಿವಣ್ಣನಿಗೆ ಓಂಕಾರ ಹಾಕೋದಿಕ್ಕೆ ಘೋಸ್ಟ್ ಸೂತ್ರಧಾರ ಶ್ರೀನಿ ಸಜ್ಜಾಗಿದ್ದಾರೆ. ಶ್ರೀನಿ ಬೇರೆ ತರಹದ ಕಥೆ ಮಾಡಿಕೊಂಡು ಬಂದಿದ್ದಾರೆ. ಪಾತ್ರ ಕೂಡಾ ರೆಗ್ಯುಲರ್ ಆಗಿಲ್ಲ. ಈ ಸಿನಿಮಾದಲ್ಲಿ ಒಂದೊಳ್ಳೆಯ ಸಂದೇಶ ಇರಲಿದೆ. ಶಿವಣ್ಣ ಮತ್ತು ಶ್ರೀನಿ ಕಾಂಬೋದ 'ಂ ಜಿಠಡಿ ಆನಂದ' ಸಿನಿಮಾದ ಟೈಟಲ್ ಪೋಸ್ಟರ್ ಬಿಡುಗಡೆ ಮಾಡಲಾಗಿದೆ. ವೇದ, ಭೈರತಿ ರಣಗಲ್ ಸಿನಿಮಾಗಳನ್ನು ಕನ್ನಡ ಚಿತ್ರರಂಗಕ್ಕೆ ಕೊಡುಗೆಯಾಗಿ ನೀಡಿರುವ ಗೀತಾ ಶಿವರಾಜ್ ಕುಮಾರ್ ಒಡೆತನದ ಗೀತಾ ಪಿಕ್ಚರ್ಸ್ ಈ ಚಿತ್ರ ನಿರ್ಮಾಣ ಮಾಡುತ್ತಿದೆ. ಂ ಜಿಠಡಿ ಆನಂದ್ ಸಿನಿಮಾಗೆ ಬಹುತೇಕ ಘೋಸ್ಟ್ ತಾಂತ್ರಿಕ ವರ್ಗವೇ ಕೆಲಸ ಮಾಡುತ್ತಿದೆ. ಮಹೇನ್ ಸಿಂಹ ಕ್ಯಾಮೆರಾ, ದೀಪು ಎಸ್ ಕುಮಾರ್ ಸಂಕಲನ, ಪ್ರಸನ್ನ ವಿಎಂ ಸಂಭಾಷಣೆ ಚಿತ್ರಕ್ಕಿದೆ. ಮಾರ್ಚ್ ಅಥವಾ ಎಪ್ರಿಲ್ ತಿಂಗಳಲ್ಲಿ ಇಡೀ ತಂಡ ಶೂಟಿಂಗ್ ಅಖಾಡಕ್ಕೆ ಇಳಿಯಲಿದೆ.

ನವಗ್ರಹ ಗಳಿಸಿದ್ದೆಷ್ಟು

ದರ್ಶನ್ ಜೈಲಿಗೆ ಹೋದ ಬಳಿಕ ಅವರ ನಟನೆಯ ಹಲವು ಹಳೆಯ ಸಿನಿಮಾಗಳನ್ನು ಮರು ಬಿಡುಗಡೆ ಮಾಡಲಾಯ್ತು. ಅವರದ್ದೇ ನಿರ್ಮಾಣ ಸಂಸ್ಥೆಯಿಂದ ನಿರ್ಮಾಣವಾಗಿದ್ದ 'ನವಗ್ರಹ' ಸಿನಿಮಾ ಕಳೆದ ವಾರ ಬಿಡುಗಡೆ ಆಯ್ತು. ಈ ಸಿನಿಮಾ ಗಳಿಸಿದ್ದೆಷ್ಟು ದರ್ಶನ್ ನಟನೆಯ 'ನವಗ್ರಹ' ಸಿನಿಮಾ ಇತ್ತೀಚೆಗಷ್ಟೆ ಮರು ಬಿಡುಗಡೆ ಆಗಿತ್ತು. ರಾಜ್ಯದಾದ್ಯಂತ ಸುಮಾರು 86 ಚಿತ್ರಮಂದಿರಗಳಲ್ಲಿ ಈ ಸಿನಿಮಾವನ್ನು ಮರುಬಿಡುಗಡೆ ಮಾಡಲಾಗಿತ್ತು. ಸಿನಿಮಾಕ್ಕೆ ಉತ್ತಮ ಪ್ರಚಾರವನ್ನು ಮಾಡಲಾಗಿತ್ತು. ಸ್ವತಃ ವಿಜಯಲಕ್ಷ್ಮಿ ದರ್ಶನ್ ಸಿನಿಮಾದ ಮರು ಬಿಡುಗಡೆ ಬಗ್ಗೆ ಪೋಸ್ಟ್‌ಗಳನ್ನು ಇನ್ ಸ್ಟಾಗ್ರಾಂನಲ್ಲಿ ಹಂಚಿಕೊಂಡಿದ್ದರು. 'ನವಗ್ರಹ' ಸಿನಿಮಾದಲ್ಲಿ ನಟಿಸಿದ್ದ ಕೆಲವು ನಟರು ಮತ್ತೆ ಒಂದಾಗಿ ಬಂದು ಸಿನಿಮಾದ ಪ್ರಚಾರ ಮಾಡಿದ್ದರು. ಸಿನಿಮಾದ ನಾಯಕಿ ಶರ್ಮಿಳಾ ಮಾಂಡ್ರೆ ಸಹ ಪ್ರಚಾರದಲ್ಲಿ ಭಾಗಿಯಾಗಿದ್ದರು. ಅಂದಹಾಗೆ ಮರು ಬಿಡುಗಡೆ ಇಂದ ಈ ಸಿನಿಮಾ ಗಳಿಸಿದ್ದೆಷ್ಟು 'ನವಗ್ರಹ' ಸಿನಿಮಾ ಮರು ಬಿಡುಗಡೆ ಯಲ್ಲಿ ಸುಮಾರು 61 ಲಕ್ಷ ಕಲೆಕ್ಷನ್ ಮಾಡಿದೆ ಎಂಬ ಲೆಕ್ಕ ಲಭ್ಯವಾಗುತ್ತಿದೆ. 86 ಚಿತ್ರಮಂದಿರಗಳಲ್ಲಿ ಬಿಡುಗಡೆ ಆಗಿದ್ದ ಈ ಸಿನಿಮಾ ಪ್ರಸ್ತುತ 9 ಚಿತ್ರಮಂದಿರಗಳಲ್ಲಿ ಉಳಿದುಕೊಂಡಿದೆ. 'ನವಗ್ರಹ' ಸಿನಿಮಾ ಮೊದಲಿಗೆ 2008 ರಲ್ಲಿ ಬಿಡುಗಡೆ ಆಗಿತ್ತು.

ರಣಜಿಯಲ್ಲಿ ಇತಿಹಾಸ ಸೃಷ್ಟಿ: ದಾಖಲೆಯ ತ್ರಿಶತಕ ಸಿಡಿಸಿದ ಒಂದೇ ತಂಡದ ಇಬ್ಬರು ಬ್ಯಾಟರ್ಸ್

ಗೋವಾ ಮತ್ತು ಅರುಣಾಚಲ ಪ್ರದೇಶದ ನಡುವಿನ ರಣಜಿ ಟ್ರೋಫಿಯ ಪಂದ್ಯದಲ್ಲಿ ಗೋವಾದ ಕಶ್ಯಪ್ ಬಾಕ್ಲೆ (300 ರನ್) ಮತ್ತು ಸ್ನೇಹಲ್ ಕೌತಾಂಕರ್ (314 ರನ್) ಅವರು ತ್ರಿಶತಕ ಸಿಡಿಸಿ ದಾಖಲೆ ನಿರ್ಮಿಸಿದ್ದಾರೆ. ಇಬ್ಬರೂ ಬ್ಯಾಟ್ಸ್‌ಮನ್‌ಗಳು ಒಂದೇ ಇನ್ನಿಂಗ್ಸ್‌ನಲ್ಲಿ ತ್ರಿಶತಕ ಬಾರಿಸಿದ್ದು ಇದು ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ ಅಪರೂಪದ ಸಾಧನೆ. ಈ ಅದ್ಭುತ ಜೊತೆಯಾಟದಿಂದ ಗೋವಾ ತಂಡ 552 ರನ್‌ಗಳಿಂದ ಗೆಲುವು ಸಾಧಿಸಿದೆ.

ಪ್ರಸ್ತುತ ಭಾರತದಲ್ಲಿ ದೇಶೀ ಟೂರ್ನಿ, ರಣಜಿ ಟ್ರೋಫಿಯ 5ನೇ ಸುತ್ತಿನ ಪಂದ್ಯಗಳು ಶುರುವಾಗಿವೆ. ಅದರಂತೆ ನವೆಂಬರ್ 13 ರಿಂದ ಆರಂಭವಾಗಿರುವ ಗೋವಾ ಮತ್ತು ಅರುಣಾಚಲ ಪ್ರದೇಶ ನಡುವಿನ ಪಂದ್ಯದಲ್ಲಿ ದಾಖಲೆ ಸೃಷ್ಟಿಯಾಗಿದೆ. ಗೋವಾ ಕ್ರಿಕೆಟ್ ಸಂಸ್ಥೆಯ ಮೈದಾನದಲ್ಲಿ ನಡೆಯುತ್ತಿರುವ ಈ ಪಂದ್ಯದಲ್ಲಿ ಗೋವಾ ತಂಡದ ಇಬ್ಬರು ಬ್ಯಾಟ್ಸ್‌ಮನ್‌ಗಳು ದಾಖಲೆಯ ತ್ರಿಶತಕ ಸಿಡಿಸಿ, ರಣಜಿಯಲ್ಲಿ ಇತಿಹಾಸ ನಿರ್ಮಿಸಿದ್ದಾರೆ. ಗೋವಾ ತಂಡದ ಕಶ್ಯಪ್ ಬಾಕ್ಲೆ ಮತ್ತು ಸ್ನೇಹಲ್ ಕೌತಾಂಕರ್ ಇಬ್ಬರೂ ತ್ರಿಶತಕ ಬಾರಿಸಿದ್ದು, ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ ಇಬ್ಬರು ಬ್ಯಾಟ್ಸ್‌ಮನ್‌ಗಳು ಒಂದೇ ಇನ್ನಿಂಗ್ಸ್‌ನಲ್ಲಿ ತ್ರಿಶತಕ ಸಿಡಿಸಿದ ಇತಿಹಾಸ ನಿರ್ಮಿಸಿದ್ದಾರೆ.

ವಾಸ್ತವವಾಗಿ ಮೊದಲ ಇನ್ನಿಂಗ್ಸ್‌ನಲ್ಲಿ ಅರುಣಾಚಲ ಪ್ರದೇಶ ತಂಡವನ್ನು 84 ರನ್‌ಗಳಿಗೆ ಆಲೌಟ್ ಮಾಡಿದ ಗೋವಾ ತಂಡ ಅದ್ಭುತ ಆರಂಭ ಪಡೆದುಕೊಂಡಿತು. 121 ರನ್‌ಗಳಿಗೆ ಎರಡು ವಿಕೆಟ್ ಕಳೆದುಕೊಂಡಿತ್ತು. ಇದಾದ ಬಳಿಕ ಜೊತೆಯಾದ ಕಶ್ಯಪ್ ಹಾಗೂ ಕೌತಾಂಕರ್ ಎದುರಾಳಿ ಬೌಲಿಂಗ್ ವಿಭಾಗವನ್ನು ಧ್ವಂಸಗೊಳಿಸಿದರು.

ಈ ವೇಳೆ ಕಶ್ಯಪ್ 300 ರನ್‌ಗಳ ಅಜೇಯ ಇನ್ನಿಂಗ್ಸ್ ಆಡಿದರು. ಅವರ ಈ ಇನ್ನಿಂಗ್ಸ್‌ನಲ್ಲಿ 39 ಬೌಂಡರಿ ಮತ್ತು 2 ಸಿಕ್ಸರ್‌ಗಳು ಸೇರಿದ್ದವು. ಇವಲ್ಲದೇ ಸ್ನೇಹಲ್ ಕೌತಾಂಕರ್ 314 ರನ್‌ಗಳ ಅಜೇಯ ಇನ್ನಿಂಗ್ಸ್ ಆಡಿದರು.

552 ರನ್‌ಗಳ ಗೆಲುವು

ಈ ಇಬ್ಬರ ದಾಖಲೆಯ ತ್ರಿಶತಕದ ಇನ್ನಿಂಗ್ಸ್‌ನಿಂದಾಗಿ ಗೋವಾ ತಂಡ 727 ರನ್‌ಗಳಿಗೆ ಇನ್ನಿಂಗ್ಸ್ ಡಿಕ್ಲೇರ್ ಮಾಡಿಕೊಂಡಿತು. ಇದರಲ್ಲಿ ಕಶ್ಯಪ್ ಮತ್ತು ಕೌತಾಂಕರ್ ನಡುವೆ ದಾಖಲೆಯ 606 ಜೊತೆಯಾಟವಿತ್ತು. ಆದರೆ, ಈ ಗೋವಾ ಬ್ಯಾಟ್ಸ್‌ಮನ್‌ಗಳಿಗೆ ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ ಶ್ರೀಲಂಕಾದ ಮಾಜಿ ಬ್ಯಾಟ್ಸ್‌ಮನ್‌ಗಳಾದ ಮಹೇಲಾ ಜಯವರ್ಧನೆ ಮತ್ತು ಕುಮಾರ ಸಂಗಕ್ಕಾರ ಅವರ ದಾಖಲೆಯನ್ನು ಮುರಿಯಲು ಸಾಧ್ಯವಾಗಲಿಲ್ಲ. 2006ರಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಈ ಜೋಡಿ 624 ರನ್‌ಗಳ ಜೊತೆಯಾಟವಾಡಿತ್ತು.

552 ರನ್‌ಗಳ ಗೆಲುವು

ಇನ್ನು ಮೊದಲ ಇನಿಂಗ್ಸ್‌ನಲ್ಲಿ ಕೇವಲ 84 ರನ್‌ಗಳಿಗೆ ಆಲೌಟ್ ಆಗಿದ್ದ ಅರುಣಾಚಲ ಪ್ರದೇಶ ತಂಡ, ಎರಡನೇ ಇನ್ನಿಂಗ್ಸ್‌ನಲ್ಲಿ 91 ರನ್‌ಗಳಿಸಲಷ್ಟೇ ಶಕ್ತವಾಯಿತು. ಈ ಮೂಲಕ ಗೋವಾ ತಂಡ 552 ರನ್‌ಗಳ ಗೆಲುವು ಸಾಧಿಸಿದೆ. ಮೊದಲ ಇನಿಂಗ್ಸ್‌ನಲ್ಲಿ ಗೋವಾ ಪರ ಮಾರಕ ದಾಳಿ ನಡೆಸಿದ್ದ ಅರ್ಜುನ್ ತೆಂಡೂಲ್ಕರ್ 5 ವಿಕೆಟ್ ಪಡೆಯುವಲ್ಲಿ ಯಶಸ್ವಿಯಾಗಿದ್ದರು.

ಮೊದಲ ಎಸೆತದಲ್ಲೇ ಸಿಕ್ಸರ್ ಬಾರಿಸಿ ವೃತ್ತಿಜೀವನಕ್ಕೆ ಸ್ಮರಣೀಯ ಆರಂಭ

ನವೆಂಬರ್ 13 ರಂದು ನಡೆದ ದಕ್ಷಿಣ ಆಫ್ರಿಕಾ ವಿರುದ್ಧದ ಮೂರನೇ ಟಿ20 ಪಂದ್ಯದಲ್ಲಿ ಭಾರತ ಗೆಲುವು ಸಾಧಿಸಿತು. ರಮಣದೀಪ್ ಸಿಂಗ್ ಅವರ ಅಂತರಾಷ್ಟ್ರೀಯ ಚೊಚ್ಚಲ ಪಂದ್ಯ ಇದಾಗಿತ್ತು. ಅವರು ತಮ್ಮ ಮೊದಲ ಎಸೆತದಲ್ಲೇ ಸಿಕ್ಸರ್ ಬಾರಿಸಿ ಅದ್ಭುತ ಆರಂಭ ಮಾಡಿದರು. ಈ ಗೆಲುವಿನೊಂದಿಗೆ ಭಾರತ ನಾಲ್ಕು ಪಂದ್ಯಗಳ ಸರಣಿಯಲ್ಲಿ 2-1 ಅಂತರದಿಂದ ಮುನ್ನಡೆ ಸಾಧಿಸಿದೆ. ನವೆಂಬರ್ 13 ಬುಧವಾರದಂದು ಸೆಂಚುರಿಯನ್‌ನ ಸೂಪರ್‌ಸ್ಪೋರ್ಟ್ ಪಾರ್ಕ್‌ನಲ್ಲಿ ನಡೆದ ದಕ್ಷಿಣ ಆಫ್ರಿಕಾ ವಿರುದ್ಧದ ಮೂರನೇ ಟಿ20 ಪಂದ್ಯವನ್ನು ಗೆದ್ದುಕೊಳ್ಳುವಲ್ಲಿ ಟೀಂ ಇಂಡಿಯಾ ಯಶಸ್ವಿಯಾಗಿದೆ. ಈ ಮೂಲಕ ಸರಣಿಯಲ್ಲಿ 2-1 ಅಂತರದಿಂದ ಮುನ್ನಡೆ ಕಾಯ್ದುಕೊಂಡಿದೆ. ಇನ್ನು ಈ

ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಪಾದಾರ್ಪಣೆ

ಪಂದ್ಯಕ್ಕೆ ತನ್ನ ಪ್ಲೇಯಿಂಗ್ 11ನಲ್ಲಿ ಒಂದು ಬದಲಾವಣೆ ಮಾಡಿದ್ದ ಟೀಂ ಇಂಡಿಯಾ, ಯುವ ಆಲ್‌ರೌಂಡರ್ ರಮಣದೀಪ್ ಸಿಂಗ್‌ಗೆ ಅವಕಾಶ ನೀಡಿತ್ತು. ಈ ಮೂಲಕ ರಮಣದೀಪ್, ಇಂಡಿಯಾ ಪರ ಅಂತರಾಷ್ಟ್ರೀಯ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದ ಭಾರತದ 118ನೇ ಆಟಗಾರ ಎನಿಸಿಕೊಂಡರು. ಇದಲ್ಲದೆ ಮೊದಲ ಪಂದ್ಯದಲ್ಲೇ ಬ್ಯಾಟಿಂಗ್ ಮಾಡುವ ಅವಕಾಶ ಪಡೆದಿದ್ದ ರಮಣದೀಪ್ ತಮ್ಮ ಚೊಚ್ಚಲ ಪಂದ್ಯವನ್ನು ಸ್ಮರಣೀಯವಾಗಿಸುವಲ್ಲಿ ಯಶಸ್ವಿಯಾದರು.

ಟೀ